ಸಂಪುಟ: 04 ಸಂಚಿಕೆ: 252 ಪುಟಗಳು: 08 ಸೋಮವಾರ 25 ನವೆಂಬರ್ 2024 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

ಮುಂಜಾನೆ ಮಾತು

ಎಲ್ಲಾ ರೀತಿಯ ಪ್ರಾಪಂಚಿಕ ಜಾಡ್ಯಗಳು ಕೇವಲ ಏಕಾಗ್ರತೆಯಿಂದ ಭಗವಂತನ ಸ್ಮರಿಸುವುದರಿಂದ ಗುಣ ಹೊಂದುವುದು

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ದೇವೇಗೌಡರು ಕಟ್ಟಿದ ಪಕ್ಷವನ್ನು ಡೆಮಾಲಿಶ್ ಮಾಡ್ತಿದ್ದಾರೆ

• ಉದಯವಾಹಿನಿ, ಮೈಸೂರು

ಜಿ.ಟಿ.ದೇವೇಗೌಡರು ಎಚ್ ಡಿ ಕುಮಾರಸ್ವಾಮಿ ವಿರುದ್ಧ ಮತ್ತೆ ಅಸಮಾಧಾನ ಹೊರಹಾಕಿದ್ದು ಎಚ್ ಡಿ ದೇವೇಗೌಡರು ಕಟ್ಟಿಸಿದ್ದ ಜೆಡಿಎಸ್ ಪಕ್ಷವನ್ನು ಕುಮಾರಸ್ವಾಮಿಯವರು ಡೆಮಾಲಿಶ್ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ದೇವೇಗೌಡರು ಕಟ್ಟಿದ ಪಕ್ಷವನ್ನು ಎಚ್ ಡಿ ಕುಮಾರಸ್ವಾಮಿ ಡೆಮಾಲಿಶ್ ಮಾಡುತ್ತಿದ್ದಾರೆ. ಎಚ್ ಡಿ ಕುಮಾರಸ್ವಾಮಿ ಈಗ ಬಿಜೆಪಿ ತಬ್ಬಿಕೊಂಡಿದ್ದಾರೆ. ದೇವರು ಮತ್ತು ದೇವೆಗೌಡರ ಶ್ರಮದಿಂದ ಜೆಡಿಎಸ್ ಪಕ್ಷ ಉಳಿಯುತ್ತಿದೆ. ಮುನಿಸು ಇದ್ದಾಗಲೂ ಕೂಡ ಎಚ್ ಡಿ ದೇವೇಗೌಡರು ಮಾತನಾಡುತ್ತಿದ್ದರು ಸಾರಾ ಮಹೇಶ್ ತೋಟಕ್ಕೆ ಬಂದು ಹೋದರು ಆಗಲು ಮಾತಾಡಲಿಲ್ಲ. ಸಾರಾ ಮಹೇಶ್ ಗೂ ನಾನು ಬೇಕಾಗಿಲ್ಲ ಅನಿಸುತ್ತದೆ. ನಾನು ಈಗ ಹೇಗಿದ್ದೇನೆ ಅದೇ ರೀತಿ ಇರುತ್ತೇನೆ. ಇನ್ನೂ ಮೂರು ವರ್ಷ ಶಾಸಕನಾಗಿ ಇರುತ್ತೇನೆ. ನಮ್ಮ ಜನ ಎಷ್ಟು ಕಷ್ಟ ಆದರೂ ಇರು ಅಂದ್ರು ಅದಕ್ಕೆ ಇರುತ್ತೇನೆ. ಕ್ಷೇತ್ರದ ಜನರು ತೀರ್ಮಾನ ಮಾಡಬೇಕು ಎಂದರು.

ಕರ್ನಾಟಕದಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬರುತ್ತದೆ : ಸಂಸದ

• ಉದಯವಾಹಿನಿ, ಮಂಡ್ಯ

2028ರಲ್ಲಿ ಕರ್ನಾಟಕದಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬರಲಿದೆ ಎಂದು ಮೈಸೂರಿನ ಮಹಾರಾಜ ಹಾಗೂ ಸಂಸದ ಯದುವೀರ್ ಕೃಷ್ಣರಾಜ್ ಒಡೆಯರ್ ಭವಿಷ್ಯ ನುಡಿದರು. ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ತಂಗಳ್ಳಿಯಲ್ಲಿ ಬಿಜೆಪಿ ಸೇರ್ಪಡೆ ಕಾರ್ಯಕ್ರಮದಲ್ಲಿ 2028ಕ್ಕೆ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರುತ್ತದೆ ಎಂದು ಭವಿಷ್ಯ ನುಡಿದಿರುವ ಯದುವೀರ್ ಕೃಷ್ಣರಾಜ ಒಡೆಯರ್, ರಾಜ್ಯದ ಮೂರೂ ಕ್ಷೇತ್ರಗಳಿಗೆ ನಡೆದ ಉಪಚುನಾವಣೆಯ ಫಲಿತಾಂಶ ನಮ್ಮ ಪರವಾಗಿ ಬಂದಿಲ್ಲ. ಪ್ರಜಾಪ್ರಭುತ್ವದಲ್ಲಿ ಸೋಲು ಆಗುತ್ತದೆ. ಅದನ್ನು ಸ್ವೀಕರಿಸಬೇಕಾಗುತ್ತದೆ. ಆಡಳಿತ ಪಕ್ಷದ ಪರ ಉಪಚುನಾವಣೆಯ ಫಲಿತಾಂಶ ಬರುವುದು ಸಹಜ. ಆದರೂ ನಮ್ಮ ಉತ್ಸಾಹ ಕಡಿಮೆಯಾಗಿಲ್ಲ. ಮಹಾರಾಷ್ಟ್ರ ಹರಿಯಾಣದ ರೀತಿ ಕರ್ನಾಟಕದಲ್ಲಿ ಕೂಡ ಕೇಸರಿ ಧ್ವಜ ಹಾರುತ್ತದೆ. 2028ಕ್ಕೆ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಬರುತ್ತದೆ ಎಂದರು.

ಹಗುರವಾಗಿ ಮಾತನಾಡಿದರೆ ಸಹಿಸುವ ಪ್ರಶ್ನೆಯೇ ಇಲ್ಲ

• ಉದಯವಾಹಿನಿ, ಬೆಂಗಳೂರು

ನಿನ್ನೆ ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಕಾಂಗ್ರೇಸ್ ಭರ್ಜರಿ ಜಯ ದಾಖಲಿಸಿದ್ದು, ಬಿಜೆಪಿ ಸೋಲು ಅನುಭವಿಸಿದೆ. ಈ ಒಂದು ಸೋಲಿನ ವಿಚಾರವಾಗಿ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮಾಜಿ ಸಿಎಂ ಪಿಎಸ್ ಯಡಿಯೂರಪ್ಪ ಹಾಗೂ ಬಿ ವೈ ವಿಜಯೇಂದ್ರ ವಿರುದ್ಧ ವಾಗ್ದಾಳಿ ನಡೆಸಿದ್ದರು.

ಇದೀಗ ಯತ್ನಾಳ್ ವಿರುದ್ಧ ಕಿಡಿ ಕಾರಿದ ಬಿವೈ ವಿಜಯೇಂದ್ರ ಹಗುರವಾಗಿ ಮಾತನಾಡಿದರೆ ಸಹಿಸುವ ಪ್ರಶ್ನೆ ಇಲ್ಲ ಎಂದು ವಾಗ್ದಾಳಿ ಮಾಡಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿದ ಬಿವೈ ವಿಜಯೇಂದ್ರ ಅವರು ಈ ಒಂದು ಸೋಲಿನ ಹೊಣೆಯನ್ನು ಜವಾಬ್ದಾರಿಯನ್ನು ರಾಜ್ಯದ ಅಧ್ಯಕ್ಷನಾಗಿ ಸೋಲಿನ ಜವಾಬ್ದಾರಿ ನಾನು ಹೊರುತ್ತೇನೆ. ಮುಂದಿನ ದಿನಗಳಲ್ಲಿ ನಮ್ಮ ತಪ್ಪನ್ನ ಸರಿಪಡಿಸುತ್ತೇನೆ. ಆದರೆ ಯಾರು ನಮ್ಮ ವಿರುದ್ಧ ಈ ರೀತಿ ಹಗುರವಾಗಿ ಮಾತನಾಡುತ್ತಾರೆ. ಈ ರೀತಿ ಮಾತನಾಡಿದರೆ ಸಹಿಸಿಕೊಳ್ಳುವ ಪ್ರಶ್ನೆಯೇ ಇಲ್ಲ ಎಂದರು.

ಆಂಟಿಬಯೋಟಿಕ್ ನಿಯಂತ್ರಣಕ್ಕೆ ನೀತಿ ಅಗತ್ಯ : ಸಂಸದ ಮಂಜುನಾಥ್

• ಉದಯವಾಹಿನಿ, ಬೆಂಗಳೂರು

ಅಂಟಿಬಯೋಟಿಕ್ ಬಳಕೆ ಮತ್ತು ನಿಯಂತ್ರಣಕ್ಕೆ ಹೊಸ ನೀತಿ ಅಗತ್ಯವಿದೆ ಎಂದು ಸಂಸದ ಡಾ.ಸಿ.ಎನ್.ಮಂಜುನಾಥ್ ಹೇಳಿದ್ದಾರೆ. ಸಮಸ್ತ-ಕರ್ನಾಟಕ ನಗರದಲ್ಲಿ ಆಯೋಜಿಸಲಾಗಿದ್ದ 7ನೇ ರಾಷ್ಟ್ರೀಯ ಮಟ್ಟದ ಫೀವರ್ ಕಾನ್ -2024 ಸಮಾವೇಶದಲ್ಲಿ ಮಾತನಾಡಿದರು.

ವೈದ್ಯಕೀಯ ಶಾಸ್ತ್ರದ ರೋಗ ನಿರ್ಣಯದಲ್ಲಿ ಜ್ವರ ನಿರ್ವಹಣೆ ಬಹಳ ಪ್ರಮುಖ ಅಂಶ. ಇತ್ತೀಚಿನ ದಿನಗಳಲ್ಲಿ ರೋಗಿಗಳ ಕಾಯಿಲೆಯನ್ನು ವೇಗವಾಗಿ ದೇಶ-ವಿದೇಶ ರಾಜಕೀಯ ಕ್ರೀಡೆ ನಿವಾರಿಸುವ ಭರಾಟೆಯಲ್ಲಿ ಅಗತ್ಯಗಿಂತ ಹೆಚ್ಚಾಗಿ ಆಂಟಿಬಯೋಟಿಕ್ ಬಳಕೆ ಮಾಡಲಾಗುತ್ತಿದೆ. ತರಕಾರಿಗಳು, ಹಣ್ಣುಗಳ ಕೃಷಿಯಲ್ಲೂ ವ್ಯಾಪಕವಾಗಿ ಆಂಟಿಬಯೋಟಿಕ್ ಬಳಸಲಾಗುತ್ತಿದೆ. ಇದು ಅಮೃತವೂ ಹೌದು. ಆದರೆ, ಅತಿಯಾದ ಅಮೃತ ವಿಷ ಎನ್ನುವಂತೆ' ಅತಿಯಾಗಿ ಆಂಟಿಬಯೋಟಿಕ್ ಬಳಸಬಾರದು ಎಂದರು.

ಬಹಳಷ್ಟು ಆರೋಗ್ಯ ಸಮಸ್ಯೆಗಳ ಪ್ರಥಮ ಲಕ್ಷಣ ಜ್ವರ. ಇದನ್ನ ಸೂಕ್ತವಾಗಿ ಪರಿಶೀಲನೆ ಮಾಡುವುದು ಅಗತ್ಯ. ತಂತ್ರಾನ ಮುಂದುವರೆದಂತೆ ವೈದ್ಯರು, ರೋಗಿಗಳ ಮಾಹಿತಿ ಪರಿಶೀಲಿಸಿ ಚಿಕಿತ್ಸೆ ಪ್ರಾರಂಭಿಸುತ್ತಾರೆ. ರೋಗಿಯನ್ನು ಮುಟ್ಟಿ ಆರೋಗ್ಯ ಪರಿಶೀಲಿಸಿದರೆ ಬಹಳಷ್ಟು ವಿಷಯ ತಿಳಿಯಬಹುದು. ಆದರೆ, ಇದೀಗ ಚಿಕಿತ್ಸಾ ವಿಧಾನವೇ ಬದಲಾಗುತ್ತಿದೆ ಎಂದು ಸಂಸದರು ತಿಳಿಸಿದರು.

ಮಹಾ ಸಾರಥಿ ಯಾರು..?

'ಮಹಾ' ಆಟ ಶುರು

● ಸಿಎಂ, ಡಿಸಿಎಂ ರೋಲ್ ಚೇಂಜ್.. ● ಈ ಬಾರಿ ಏಕನಾಥ್ ಶಿಂಧೆ ಉಪ ಮುಖ್ಯಮಂತ್ರಿ, ಫಡ್ನವಿಸ್ CM ಆಗ್ತಾರಾ.. ● ಸತತ 3ನೇ ಸಲ ಬಿಜೆಪಿಗೆ ಜನಾದೇಶ ನೀಡಿದ 6ನೇ ರಾಜ್ಯ ಮಹಾರಾಷ್ಟ್ರ ● ಮೂರು ಕಡೆ ಪ್ರತ್ಯೇಕ ಸಭೆ, ಇಂದು ಸಿಎಂ ಆಯ್ಕೆ..

• ಉದಯವಾಹಿನಿ, ಮುಂಬೈ

ಮಹಾರಾಷ್ಟ್ರದ ಮುಂದಿನ ಮುಖ್ಯಮಂತ್ರಿ ಆಯ್ಕೆಗೆ ಎನ್ ಡಿಎನಲ್ಲಿ ಚಟುವಟಿಕೆಗಳು ಬಿರುಸಾಗಿದ್ದು, ಮುಂದಿನ ಮುಖ್ಯಮಂತ್ರಿ ಆಯ್ಕೆ ಸಂಬಂಧ ಎನ್ ಡಿಎ ಅಂಗಪಕ್ಷಗಳು ಸಭೆ ಸೇರಿ ಮಹಾ ಸಿಎಂ ಆಯ್ಕೆ ಮಾಡಲು ಮುಂದಾಗಿವೆ. ಮಹಾರಾಷ್ಟ್ರದ 288 ಕ್ಷೇತ್ರಗಳಿಗೆ ನಡೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ 'ಮಹಾಯುತಿ' ಮೈತ್ರಿಕೂಟ ಭಾರಿ ಬಹುಮತದೊಂದಿಗೆ ಐತಿಹಾಸಿಕ ಗೆಲುವು ಸಾಧಿಸಿದೆ.

ಕಳೆದ 50 ವರ್ಷಗಳಲ್ಲಿ ಚುನಾವಣಾ ಪೂರ್ವ ಮೈತ್ರಿ ಇದೇ ಮೊದಲ ಬಾರಿ ಇಂತಹ ಅಭೂತಪೂರ್ವ ಗೆಲುವು ಸಾಧಿಸಿದೆ ಎಂದು ಪ್ರಧಾನಿ ಮೋದಿ ಬಣ್ಣಿಸಿದ್ದಾರೆ. ಇದೀಗ ಮುಂದಿನ ಸಿಎಂ ಯಾರಾಗ್ತಾರೆ ಅನ್ನೋದು ಕುತೂಹಲ ಹೆಚ್ಚಿಸಿದೆ. ಜೊತೆಗೆ ಪ್ರಬಲ ಖಾತೆಗಳ ಹಂಚಿಕೆ ಯಾರ ತೆಕ್ಕೆಗೆ ಬೀಳಲಿದೆ ಎಂಬ ಬಗ್ಗೆಯೂ ಚರ್ಚೆಗಳು ನಡೆಯುತ್ತಿವೆ.

ಉದ್ಧವ್ ಬಣದ 36 ಅಭ್ಯರ್ಥಿ ಸೋಲಿಸಿದ ಶಿಂಧೆ ಶಿವ ಸೇನೆ

ಮಹಾರಾಷ್ಟ್ರ ಚುನಾವಣೆಯಲ್ಲಿ ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆ ಮತ್ತು ಉದ್ಧವ್ ಶಿವಸೇನೆ ನಡುವಿನ ಕಾಳಗದಲ್ಲಿ ಶಿಂಧೆ ನೇತೃತ್ವದ ಸೇನೆ ಅತ್ಯುತ್ತಮ ಪ್ರದರ್ಶನ ತೋರಿದೆ.ಉದ್ಧವ್ ಶಿವಸೇನೆಯ 36 ಅಭ್ಯರ್ಥಿಗಳನ್ನು ಸೋಲಿಸುವಲ್ಲಿ ಶಿಂಧೆ ಶಿವಸೇನೆ ಯಶಸ್ವಿಯಾಗಿದೆ. ಈ ಮೂಲಕ ಬಾಳಾಸಾಹೇಬ್ ಠಾಕ್ರೆ ನಿಜವಾದ ವಾರಸುದಾರ ಪಕ್ಷ ತಮ್ಮದೇ ಎಂದು ನಿರೂಪಿಸಿದೆ. ಶಿಂಧೆ ಶಿವಸೇನೆ 81 ಕ್ಷೇತ್ರಗಳಲ್ಲಿ ಸ್ಪರ್ಧಿಸಿ 57 ಸ್ಥಾನಗಳನ್ನು ಗೆದ್ದರೆ, ಉದ್ಧವ್ ಸೇನೆಯು 95 ಕ್ಷೇತ್ರಗಳಲ್ಲಿ ಸ್ಪರ್ಧಿಸಿ 20 ಸ್ಥಾನ ಮಾತ್ರ ಗೆದ್ದಿದೆ. 14 ಕ್ಷೇತ್ರಗಳಲ್ಲಿ ಶಿಂಧೆ ಸೇನೆಯ ಅಭ್ಯರ್ಥಿಗಳನ್ನು ಮಾತ್ರ ಸೋಲಿಸಿದೆ.

ಈ ಬೆಳವಣಿಗೆಯ ನಡುವೆ ಮಹಾಯುತಿ ಮೈತ್ರಿ ಕೂಟದ ಪಕ್ಷಗಳು ಪ್ರತ್ಯೇಕವಾಗಿ ಉನ್ನತ ಮಟ್ಟದ ಸಭೆಗಳನ್ನ ಕರೆದಿದೆ. ಮೈತ್ರಿಕೂಟದ ಎಲ್ಲಾ ಪಕ್ಷದ ನಾಯಕರು ಸಭೆಯಲ್ಲಿ ಪಾಲ್ಗೊಳ್ಳಲಿದ್ದು, ಸಿಎಂ ಹುದ್ದೆ ಸೇರಿದಂತೆ ಸಂಪುಟದ ಆಯ್ಕೆಯ ಬಗ್ಗೆಯೂ ಚರ್ಚೆ ನಡೆಯಲಿದೆ ಎಂದು ವರದಿಗಳು ತಿಳಿಸಿವೆ. ಮುಂಬೈನಲ್ಲಿರುವ ದೇವೇಂದ್ರ ಫಡ್ನವೀಸ್ ಅವರ ಅಧಿಕೃತ ನಿವಾಸದಲ್ಲಿ ಬಿಜೆಪಿ ಕೋರ್ ಕಮಿಟಿ ಸಭೆ ನಡೆಯಲಿದೆ. ಇತ್ತ ಏಕನಾಥ್ ಶಿಂಧೆ ಅವರು ಬಾಂದ್ರಾದಲ್ಲಿರುವ ಹೋಟೆಲ್‌ನಲ್ಲಿ ಹೊಸದಾಗಿ ಆಯ್ಕೆಯಾದ ಎಲ್ಲಾ ಶಾಸಕರೊಂದಿಗೆ ಸಭೆ ಕರೆದಿದ್ದಾರೆ. ಏತನ್ಮಧ್ಯೆ, ಎನ್‌ಸಿಪಿ ಅಜಿತ್ ಪವಾರ್ ಬಣವು ಮುಂಬೈನ ಅವರ ಅಧಿಕೃತ ನಿವಾಸ ದೇವಗಿರಿ ಬಂಗಲೆಯಲ್ಲಿ ಸಭೆ ನಡೆಸುತ್ತಿದೆ.

ಪ್ರತ್ಯೇಕ ಸಭೆ ನಡೆಸಿದ ಬಳಿಕ ಸೋಮವಾರ (ನ.25) ಮಹಾಯುತಿಯ ಎಲ್ಲಾ ಶಾಸಕರು ಒಟ್ಟಾಗಿ ಸಭೆ ಸೇರಲಿದ್ದಾರೆ. ಅಲ್ಲಿಯೇ ಮುಂದಿನ ಸಿಎಂ ಯಾರು ಎಂಬುದು ನಿರ್ಧಾರವಾಗಲಿದೆ ಎಂದು ಉನ್ನತ ಮೂಲಗಳು ತಿಳಿಸಿವೆ. 288 ವಿಧಾನಸಭಾ ಕ್ಷೇತ್ರಗಳಿಗೆ ನಡೆದ ಚುನಾವಣೆಯಲ್ಲಿ ಮಹಾಯುತಿ ಮೈತ್ರಿಕೂಟ 233 ಸ್ಥಾನ ಗೆದ್ದು ಅಧಿಕಾರದ ಗದ್ದುಗೆ ಏರಿದೆ. ಆದ್ರೆ ಘಟಾನುಘಟಿ ನಾಯಕರುಳ್ಳ ಮಹಾ ವಿಕಾಸ್ ಅಘಾಡಿ ಕೇವಲ 49 ಸ್ಥಾನ ಗೆದ್ದು, ಮುಖಭಂಗ ಅನುಭವಿಸಿದೆ.

1 ಬಿಜೆಪಿ, ಶಿವಸೇನೆ ಸಿಎಂ ಹುದ್ದೆ ರೇಸ್‌ನಲ್ಲಿ ಯಾರಿಗೆ ಪಟ್ಟ ಕುತೂಹಲ

2 ಮಹಾರಾಷ್ಟ್ರ ವಿಧಾನಸಭೆಯ ಚುನಾವಣಾ ಫಲಿತಾಂಶದ ನಂತರ ಮುಖ್ಯಮಂತ್ರಿ ಶಿಂಧೆ ನಿವಾಸಕ್ಕೆ ಆಗಮಿಸಿದ್ದ ಉಪಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್

3 ಮಹಾಯುತಿಯ ಮಹಾ ಗೆಲುವಿನಲ್ಲಿ ಆರ್ ಎಸ್‌ಎಸ್ ದೊಡ್ಡ ಕೊಡುಗೆ

ಫಡ್ನವಿಸ್ ಆಗ್ತಾರಾ ಸಿಎಂ..

ಈಗಾಗಲೇ ಸಿಎಂ ಬಗ್ಗೆ ನಿರ್ಧಾರ ತೆಗೆದುಕೊಳ್ಳಲಾಗಿದೆ. ಎಲ್ಲಾರ ಜೊತೆ ಸಮಾಲೋಚನೆ ನಡೆಸಿದ ನಂತರ ಮುಖ್ಯಮಂತ್ರಿ ಅಭ್ಯರ್ಥಿ ಆಯ್ಕೆ ಮಾಡಲಾಗುವುದು ಎಂದು ಕೇಂದ್ರ ಸಚಿವ ಅಮಿತ್ ಶಾ ಮೈತ್ರಿಕೂಟದ ನಾಯಕರಿಗೆ ತಿಳಿಸಿದ್ದಾರೆಂದು ಫಡ್ನ ವಿಸ್ ಮಾಹಿತಿ ನೀಡಿದ್ದಾರೆ.2022 ರಲ್ಲಿ 40 ಶಾಸಕರೊಂದಿಗೆ ಏಕ ನಾಥ್ ಶಿಂಧೆ ಅವರು ಬಿಜೆಪಿ ಮನೆ ಬಾಗಿಲಿಗೆ ಹೋದರು.

ಶಿವಸೇನೆಯ ವಿಭಜನೆಯಿಂದಾಗಿ ಪಕ್ಷದ ಮುಖ್ಯಸ್ಥ ಉದ್ಧವ್ ಠಾಕ್ರೆ ಸಿಎಂ ಸ್ಥಾನದಿಂದ ಕೆಳಗಿಳಿಯಬೇಕಾಯಿತು. ಪರಿಣಾಮ ಎಂವಿಎ ಸರ್ಕಾರ ಪತನಗೊಂಡಿತು.

ಮುಂದೆ ಬಿಜೆಪಿ ನೇತೃತ್ವದಲ್ಲಿ ಮಹಾಯುತಿ ಮೈತ್ರಿಕೂಟ ಅಧಿಕಾರಕ್ಕೆ ಬರಲು ವೇದಿಕೆ ಸಜ್ಜಾಯಿತು. ಆಗ ಪಕ್ಷದಲ್ಲಿ ಅನುಭವಿ ವ್ಯಕ್ತಿಯಿದ್ದರೂ ಬಿಜೆಪಿ ಅಚ್ಚರಿ ಎಂಬಂತೆ ಏಕನಾಥ್ ಶಿಂಧೆ ಅವರನ್ನೇ ಮಹಾರಾಷ್ಟ್ರ ಸಿಎಂ ಮಾಡಿತು.

ಇದರ ನಡುವೆ ಎನ್‌ಸಿಪಿ ಕೂಡ ಇಬ್ಭಾಗವಾಗಿ ಅಜಿತ್ ಪವಾರ್ ಬಣ ಬಿಜೆಪಿ ಜೊತೆ ಕೈಜೋಡಿಸಿತು.ಬಿಜೆಪಿ ಪ್ರಚಾರದ ನೇತೃತ್ವ ವಹಿಸಿದ್ದ ದೇವೇಂದ್ರ ಫಡ್ನವೀಸ್ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ಪ್ರಬಲ ಆಕಾಂಕ್ಷಿಯಾಗಿ ಹೊರಹೊಮ್ಮಿದ್ದಾರೆ. ಪ್ರಬಲ ಮರಾಠ ನಾಯಕನಾಗಿ ತನ್ನ ಸ್ಥಾನವನ್ನು ಭದ್ರಪಡಿಸಿಕೊಂಡ ಏಕನಾಥ್ ಶಿಂಧೆ ಮತ್ತು 81 ಪ್ರತಿಶತದಷ್ಟು ಪ್ರಭಾವಶಾಲಿ ಸ್ಟ್ರೈಕ್ ರೇಟ್ ಸಾಧಿಸಿದ ಅವರು ಉನ್ನತ ಹುದ್ದೆಗೆ ಮುಂಚೂಣಿಯಲ್ಲಿದ್ದಾರೆ.

ನ.26ರಂದು ಪ್ರಮಾಣ ವಚನ ಸ್ವೀಕಾರ: ಎಲ್ಲಾವೂ ಅಂದುಕೊಂಡಂತೆ ನಡೆದರೆ ಇದೇ ನವೆಂಬರ್ 26ರಂದು ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ದೇವೇಂದ್ರ ಫಡ್ನವಿಸ್ ಸಿಎಂ ಆಗಿ ಪ್ರಮಾಣ ವಚನ ಸ್ವೀಕಾರ ಮಾಡಲಿದ್ದಾರೆ ಎಂದು ತಿಳಿದುಬಂದಿದೆ.

ಕರ್ನಾಟಕ 'ಕೈ' ಗ್ಯಾರಂಟಿ, ವಕ್ಫ್‌ಗೆ ಪ್ರಹಾರ

'ಕೊಟ್ಟ ಭರವಸೆ ಈಡೇರಿಸಲಾಗದೆ ಕಾಂಗ್ರೇಸ್ ಕರ್ನಾಟಕ, ತೆಲಂಗಾಣ ಮತ್ತು ಹಿಮಾಚಲದಲ್ಲಿ ಒದ್ದಾಡುತ್ತಿರುವುದನ್ನು ಜನ ಗಮನಿಸುತ್ತಿದ್ದಾರೆ ಎಂದು ಪ್ರಧಾನಿ ಮೋದಿ ಪುನರುಚ್ಚರಿಸಿದರು. ಅಲ್ಲದೆ, ಜಮ್ಮು ಕಾಶ್ಮೀರದಲ್ಲಿ ರದ್ದಾದ 370ನೇ ವಿಧಿಯನ್ನು ಮರುಸ್ಥಾಪಿಸಲು ಯಾವ ಶಕ್ತಿಗೂ ಸಾಧ್ಯವಿಲ್ಲ, ಕಾರಣ, ಜನರು ಅಂಬೇಡ್ಕರ್ ಅವರ ಸಂವಿಧಾನವನ್ನಷ್ಟೇ ಒಪ್ಪಿಕೊಳ್ಳುತ್ತಾರೆ. ಎಂದರು. ಅಲ್ಲದೆ, ವಕ್ಫ ವಿರುದ್ಧ ವಾಗ್ದಾಳಿ ನಡೆಸಿದ ಅವರು, 'ವಕ್ಫ ಮಂಡಳಿ ಕಾಂಗ್ರೇಸ್ ಓಲೈಕೆ ರಾಜಕೀಯಕ್ಕೆ ಸಾಕ್ಷಿ. ಅಂಬೇಡ್ಕರರ ಸಂವಿಧಾನದಲ್ಲಿ ಇದಕ್ಕೆ ಅವಕಾಶವಿಲ್ಲ' ಎಂದರು.

ಐತಿಹಾಸಿಕ ದಿನ: ನಡ್ಡಾ

ಮಹಾರಾಷ್ಟ್ರ ವಿಧಾನಸಭಾ ಚುನಾವಣೆ ಮತ್ತು ವಿವಿಧ ರಾಜ್ಯಗಳ ಉಪಚುನಾವಣೆಗಳಲ್ಲಿ ತಮ್ಮ ಪಕ್ಷದ ಗೆಲುವು 'ಐತಿಹಾಸಿಕ' ಎಂದು ಬಿಜೆಪಿ ಅಧ್ಯಕ್ಷ ಜೆಪಿ ನಡ್ಡಾ ಅವರು ಶ್ಲಾಘಿಸಿದರು ಮತ್ತು ವಿಪಕ್ಷಗಳ ವಿಭಜನೆ ರಾಜಕೀಯವನ್ನು ತಿರಸ್ಕರಿಸಿ ದೇಶದ ಅಭಿವೃದ್ಧಿಯ ಪ್ರಧಾನಿ ಅವರ ದೃಷ್ಟಿಗೆ ಜನರು ಮುದ್ರೆ ಹಾಕಿದ್ದಾರೆ. ಇದು ಐತಿಹಾಸಿಕ ದಿನ ಎಂದು ಹೇಳಿದರು. ಚುನಾವಣಾ ಫಲಿತಾಂಶದ ನಂತರ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ನಡ್ಡಾ, ಜಾರ್ಖಂಡ್‌ನಲ್ಲಿ ಜನಾದೇಶವನ್ನು ಒಪ್ಪಿಕೊಂಡರು ಮತ್ತು ತಮ್ಮ ಪಕ್ಷವು ರಾಜ್ಯದಲ್ಲಿ 'ರಚನಾತ್ಮಕ ವಿರೋಧ' ಪಾತ್ರವನ್ನು ವಹಿಸುತ್ತದೆ ಮತ್ತು 'ಕೊನೆಯ ಉಸಿರು ಇರುವವರೆಗೂ' ಬಾಂಗ್ಲಾದೇಶದ ಒಳನುಸುಳುವಿಕೆಯ ವಿರುದ್ಧ ಹೋರಾಡುತ್ತದೆ ಎಂದು ಪ್ರತಿಪಾದಿಸಿದರು.

ಚಾಮುಂಡೇಶ್ವರಿ ದೇವಿಗೆ ಚಿನ್ನದ ರಥ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಲು ಸೂಚನೆ

• ಉದಯವಾಹಿನಿ, ಬೆಂಗಳೂರು

ನಾಡದೇವಿ ಮೈಸೂರಿನ ಚಾಮುಂಡೇಶ್ವರಿಗೆ ಚಿನ್ನದ ರಥ ನಿರ್ಮಿಸುವ ಸಂಬಂಧ ಪರಿಶೀಲಿಸಿ, ಕೂಡಲೇ ಪ್ರಸ್ತಾವನೆ ಸಲ್ಲಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಂದಾಯ ಇಲಾಖೆ ಧಾರ್ಮಿಕ ದತ್ತಿ ವಿಭಾಗದ ಪ್ರಧಾನ ಕಾರ್ಯದರ್ಶಿ ಅವರಿಗೆ ಆದೇಶಿಸಿದ್ದಾರೆ. ಶಾಸಕ ದಿನೇಶ್ ಗೂಳಿಗೌಡ ಅವರ ಮನವಿ ಮೇಲೆ ಈ ಆದೇಶ ಮಾಡಲಾಗಿದೆ. ನಾಡದೇವಿಗೆ ಚಿನ್ನದ ರಥ ನಿರ್ಮಿಸಬೇಕು ಎಂಬ ಭಕ್ತರ ಬೇಡಿಕೆಯನ್ನು ಅರಿತು, ಸಂಕಲ್ಪ ಮಾಡಿಕೊಂಡು ಪ್ರಯತ್ನಿಸಲಾಗಿತ್ತು. ಸಿಎಂ ಆದೇಶದಿಂದ ಈಗ ಆ ಪ್ರಯತ್ನದಲ್ಲಿ ಮೊದಲ ಹೆಜ್ಜೆಯನ್ನು ಇಟ್ಟಂತಾಗಿದೆ. ಚಾಮುಂಡೇಶ್ವರಿ ದೇವಿ ಕನ್ನಡ ನಾಡಿನ ಅಸ್ಮಿತೆಯಾಗಿದ್ದಾಳೆ. ಕನ್ನಡಿಗರ ಧಾರ್ಮಿಕ ಪ್ರತಿನಿಧಿಯಾಗಿದ್ದಾಳೆ, ಮೈಸೂರಿನ ಚಾಮುಂಡಿ ಬೆಟ್ಟಕ್ಕೆ, ದೇವಸ್ಥಾನಕ್ಕೆ, ದೇವಿಗೆ ಪೌರಾಣಿಕ, ಐತಿಹಾಸಿಕ ಹಿನ್ನೆಲೆ ಇದೆ. ಅದಕ್ಕಾಗಿಯೇ ಮೈಸೂರಿನಲ್ಲಿ ನಡೆಯುವ ದಸರಾವನ್ನು ನಾಡ ಹಬ್ಬ ಎಂದು ಕರೆಯಲಾಗುತ್ತದೆ.

ಈ ನಾಡದೇವಿಯನ್ನು ಚಿನ್ನದ ರಥದಲ್ಲಿ ಕೂರಿಸಿ ಮೆರೆಸಬೇಕು ಎಂಬುದು ಭಕ್ತ ಕೋಟಿಯ ಬೇಡಿಕೆ. ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರನ್ನು ಖುದ್ದಾಗಿ ಭೇಟಿಯಾಗಿ ಬೇಡಿಕೆ ಸಲ್ಲಿಸಿ, ಕೆಲವು ಸಲಹೆ ನೀಡಿದ್ದ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಆಚಾರಃ ಪರಮೋ ಧರ್ಮಃ

ಮನುಸ್ಮೃತಿಯ ಪ್ರಥಮಾಧ್ಯಾಯದ ಶ್ಲೋಕ. ಆಚಾರ ಶ್ರೇಷ್ಠ ಧರ್ಮ. ಧರ್ಮ ಎಂದರೆ ಒಳ್ಳೆಯದು. ನೆರವು ಮಾರ್ಗದರ್ಶನ ವಿದ್ಯಾದಾನ ಸಂರಕ್ಷಣೆ ಮುಂತಾದುದು ಧರ್ಮ. ಒಡೆಯುವುದು ಕೆಡವಿಹಾಕುವುದು ಮತ್ತೊಂದರ ಮೇಲೆ ತಮ್ಮದನ್ನು ಕಟ್ಟುವುದು ಅತಿಕ್ರಮಿಸುವುದು ಧರ್ಮದ ಹೆಸರಿನಲ್ಲಿ ಬೆದರಿಸುವುದು ಮತಾಂತರಕ್ಕೆ ಬಲಾತ್ಕರಿಸುವುದು ಹಿಂಸಿಸುವುದು ಕೊಲ್ಲುವುದು ಕದಿಯುವುದು ಅತ್ಯಾಚರಿಸುವುದು ಧರ್ಮವಲ್ಲ. ಧರ್ಮದ ಬಗ್ಗೆ ಹೇಳಿದರೆ ಕೇಳಿದರೆ ಭಾಷಣ ಮಾಡಿದರೆ ಪುಸ್ತಕ ಲೇಖನ ಸಂದೇಶ ಬರೆದರೆ ಕಳಿಸಿದರೆ ಸಾಲದು. ಅದರಂತೆ ನಡೆಯಬೇಕು. ಆಗ ಮಾತ್ರ ಧರ್ಮ ಮೂರ್ತರೂಪವಾಗಿ ನೆಲೆಗೊಳ್ಳುತ್ತದೆ, ಇತರರ ಮೇಲೆಯೂ ಪ್ರಭಾವ ಬೀರುತ್ತದೆ. ಹೇಳುವುದು ಸುಲಭ. ಅದರಂತೆ ಆಚರಿಸುವುದು ಕಷ್ಟ. ಕಷ್ಟವಾದುದನ್ನು ಈಡೇರಿಸುವುದೇ ಸಾಧನೆ ಶ್ರೇಷ್ಠ. ತೈತ್ತಿರೀಯ ಉಪನಿಷತ್ತು ಹೇಳುವುದೂ ಇದನ್ನೇ ಧರ್ಮಂ ಚರ = ಧರ್ಮವನ್ನು ಆಚರಿಸು ಎಂದು. ವೇದ ಮಂತ್ರಗಳು ಸ್ಮೃತಿಗಳು ಆಗಮ ಪುರಾಣ ಮುಂತಾದ ಸದ್‌ಗ್ರಂಥಗಳು ಅನುಸರಿಸಬೇಕಾದ ಆಚಾರಗಳನ್ನು ಪ್ರತಿಪಾದಿಸುತ್ತವೆ. ಇಂಥ ಉದಾತ್ತ ಆಚಾರಗಳನ್ನು ಜೀವನ ಆಚರಣೆಯಲ್ಲಿ ಮೈಗೂಡಿಸಿಕೊಳ್ಳುವುದೇ ಶ್ರೇಷ್ಠ ಧರ್ಮ. ದ್ವಿಜನಾದವನು ಎಂದೆಂದಿಗೂ ಆಚರಣೆ ತಪ್ಪಬಾರದು ಎನ್ನುವುದು ಮನುಸ್ಮೃತಿ. ಶೂದ್ರನನ್ನು ಹೊರತುಪಡಿಸಿರುವುದು ಸರಿಯಲ್ಲ. ವೇದ ಶಾಸ್ತ್ರಾಧ್ಯಯನವನ್ನು ಧರ್ಮಾಚರಣೆಯನ್ನು ಎಲ್ಲರಿಗೂ ವಿಸ್ತರಿಸುವುದೇ ನಿಜವಾದ ಧರ್ಮ.

ಮಹಾಭಾರತ ಪ್ರವಚನ ಮಾಲಿಕೆ – 4

• ಉದಯವಾಹಿನಿ, ಬೆಂಗಳೂರು

ಪೂರ್ಣಪ್ರಜ್ಞ ಪ್ರತಿಷ್ಠಾನದ ವತಿಯಿಂದ ನವೆಂಬರ್ 25 ರಿಂದ ಡಿಸೆಂಬರ್ 1ರ ವರೆಗೆ ಪ್ರತಿದಿನ ಸಂಜೆ 6–30ಕ್ಕೆ 'ಕನಕಶ್ರೀ ಪ್ರಶಸ್ತಿ' ಪುರಸ್ಕೃತ ಡಾ. ವ್ಯಾಸನಕೆರೆ ಪ್ರಭಂಜನಾಚಾರ್ಯ ರಿಂದ ಮಹಾಭಾರತ ಪ್ರವಚನ ಮಾಲಿಕೆ – 4 ವಿಷಯವಾಗಿ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ : ಶ್ರೀ ಪೂರ್ಣಪ್ರಜ್ಞ ವಿದ್ಯಾಪೀಠ, ಕತ್ರಿಗುಪ್ಪೆ ಮುಖ್ಯರಸ್ತೆ, ಬೆಂಗಳೂರು–560024

ಜಿಟಿಡಿ ಮಾತ್ರವಲ್ಲ, ಕಾಂಗ್ರೇಸ್ ಸೇರಲು ಬಿಜೆಪಿಯವರೂ ಬಯಸಿದ್ದಾರೆ: ಡಿಸಿಎಂ

• ಉದಯವಾಹಿನಿ, ಬೆಂಗಳೂರು

ಜನರು ಬಯಸಿದರೆ ಕಾಂಗ್ರೇಸ್ ಸೇರುವುದಾಗಿ ಜೆಡಿಎಸ್ ಶಾಸಕ ಜಿ.ಟಿ. ದೇವೇಗೌಡರ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿರುವ ಡಿಸಿಎಂ ಡಿ.ಕೆ.ಶಿವಕುಮಾರ್, ಇದು ಜಿಟಿಡಿ ಅವರೊಬ್ಬರ ಅಭಿಪ್ರಾಯ ಅಲ್ಲ, ಬಹಳಷ್ಟು ಜನ ಬಿಜೆಪಿಯವರು ಇದೇ ಅಭಿಪ್ರಾಯ ಹೊಂದಿದ್ದಾರೆ ಎಂದು ತಿಳಿಸಿದ್ದಾರೆ. ರಾಮನಗರದಲ್ಲಿ ಮಾತನಾಡಿದ ಡಿಸಿಎಂ ಡಿ.ಕೆ.ಶಿವಕುಮಾರ್, ಬಿಜೆಪಿಯವರು ಬೆಂಬಲ ನೀಡದೆ ಇದ್ದಿದ್ದರೆ ನಾವು ಚುನಾವಣೆಯಲ್ಲಿ ಗೆಲ್ಲಲು ಆಗುತ್ತಿರಲಿಲ್ಲ. ಬಿಜೆಪಿ ನಾಯಕ ಅಶ್ವತ್ಥ್ ನಾರಾಯಣ ಅವರು 'ನನಗೆ ಮೊದಲೇ ತಿಳಿದಿತ್ತು, ಯೋಗೇಶ್ವರ್ ಅವರು ಗೆಲ್ಲುತ್ತಾರೆ ಎಂದು ಹೇಳಿದ್ದಾರೆ. ಉಪಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಅವರು ಈ ರೀತಿ ಹೇಳಲು ದಡ್ಡರೇ ಅವರಿಗೆ ಜನರ ನಾಡಿ ಮಿಡಿತ ಗೊತ್ತಿತ್ತು ಎಂದು ಟಾಂಗ್ ನೀಡಿದರು. ಬಿಜೆಪಿ ಕಾರ್ಯಕರ್ತರನ್ನು ಬಿಟ್ಟು ಬಿಡೋಣ. ಎದುರಾಳಿ ಪಕ್ಷದವರು ಗುರುತು ಮಾಡಿಕೊಂಡು ಪ್ರತಿದಿನ ಒಂದಷ್ಟು ಜನರ ಮನೆಗೆ ಹೋಗುತ್ತಾ ಇದ್ದರು. ಅವರು ಹಾಗೂ ಅವರ ಬೂತ್ ಗಳಲ್ಲಿ ಯಾರಿಗೆ ಮತ ಬಿದ್ದಿದೆ ಎಂಬುದನ್ನು ಪರಿಶೀಲನೆ ಮಾಡಿ. ಎಲ್ಲವನ್ನೂ ಬಿಚ್ಚಿ ಹೇಳಲು ಹೋಗುವುದಿಲ್ಲ ಎಂದರು. ಇದೇ ವೇಳೆ ಜೆಡಿಎಸ್ ನಾಯಕರನ್ನು ಕಾಂಗ್ರೇಸ್ ಗುರಿಯಾಗಿಸಿಕೊಂಡಿದೆ ಎಂಬ ಆರೋಪಕ್ಕೆ ಸಮಯವೇ ಉತ್ತರ ಕೊಡುತ್ತದೆ ಎಂದರು.

ಇವಿಎಂ ಹ್ಯಾಕ್‌ನಿಂದ ಮಹಾರಾಷ್ಟ್ರದಲ್ಲಿ ಸೋಲು: ಜಿ. ಪರಮೇಶ್ವರ್

• ಉದಯವಾಹಿನಿ, ಬೆಂಗಳೂರು

ಇವಿಎಂ ಹ್ಯಾಕ್ ನಿಂದಾಗಿ ಮಹಾರಾಷ್ಟ್ರವನ್ನು ಕಳೆದುಕೊಂಡಿದ್ದೇವೆ ಅನಿಸುತ್ತಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು ಮಹಾರಾಷ್ಟ್ರದಲ್ಲಿ ಸ್ಟ್ರಾಟಜೀ ಮಾಡುವುದರಲ್ಲಿಯೂ ಫೇಲ್ ಆಗಿದ್ದೇವೆ. ಮಹಾವಿಕಾಸ ಅಘಾಡಿ ಅಧಿಕಾರಕ್ಕೆ ಬರುವ ನಿರೀಕ್ಷೆ ಇತ್ತು. ಆದರೆ ಎಲ್ಲವೂ ಉಲ್ಟಾ ಆಗಿದೆ ಎಂದು ಹೇಳಿದ್ದಾರೆ. ಬಹಳಷ್ಟು ಕಡೆ ಇವಿಎಂ ಮ್ಯಾನಿಪುಲೇಟ್ ಮಾಡಿದ್ದಾರೆ ಎನ್ನುವ ಶಂಕೆ ಇದೆ. ಆದರೆ, ಜಾರ್ಖಂಡ್ ಚುನಾವಣೆಯಲ್ಲಿ ಯಾಕೆ ಹಾಗಾಗಲಿಲ್ಲ ಅಂದರೆ ಬಿಜೆಪಿಯವರು ಪ್ಲಾನ್ ಆಫ್ ಆಕ್ಷನ್ ರೀತಿ ಇದನ್ನು ಮಾಡುತ್ತಾರೆ. ನಂಬಿಕೆ ಬರಬೇಕೆಂದು ಕೆಲವು ರಾಜ್ಯಗಳಲ್ಲಿ ಇವಿಎಂ ಹ್ಯಾಕ್ ಮಾಡುವುದಿಲ್ಲ ಎಂದು ಪರಮೇಶ್ವರ್ ಹೇಳಿದ್ದಾರೆ.

ಮಾಜಿ ಸೈನಿಕರಿಗೆ ಜೈಲು ವಾರ್ಡನ್ ಹುದ್ದೆಗೆ ಅರ್ಜಿ ಆಹ್ವಾನ, ಇಂದು ಲಾಸ್ಟ್ ಡೇಟ್

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯಾದ್ಯಾಂತ ಇರುವ ಜೈಲುಗಳಲ್ಲಿ ವಾರ್ಡನ್ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ಕಾರ್ಯ ನಿರ್ವಹಿಸಲು ಪೊಲೀಸ್ ಇಲಾಖೆಯಿಂದ ಆಸಕ್ತ ಮಾಜಿ ಸೈನಿಕರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಆಸಕ್ತ ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳಿಗೆ ಸಂಬಂಧಿಸಿದ ಮಾಜಿ ಸೈನಿಕರು ತಮ್ಮ ಇಚ್ಛೆಯನ್ನು ದಿನಾಂಕ 25–11– 2024 ರಂದು ಬೆಳಗೆ 10.00 ಘಂಟೆಯಿಂದ ಮಧ್ಯಾಹ್ನ 01.00 ಘಂಟೆಯೊಳಗೆ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಕಛೇರಿಯ ದೂರವಾಣಿ ಸಂಖ್ಯೆ 08182–220925 ಗೆ ಕರೆ ಮಾಡಿ ತಿಳಿಸಲು ಕೋರಲಾಗಿದೆ. ಶಿವಮೊಗ್ಗ – 30, ದಾವಣಗೆರೆ – 5 ಮತ್ತು ಚಿತ್ರದುರ್ಗ – 4 ಹುದ್ದೆಗಳು ಖಾಲಿ ಇದ್ದು. ಒಂದು ವರ್ಷದ ಗುತ್ತಿಗೆ ಅವಧಿಯು ಅವಶ್ಯಕತೆಗೆ ಅನುಗುಣವಾಗಿ ಮುಂದುವರೆಸುವ ಅವಕಾಶವೂ ಸಹ ಇರುತ್ತದೆ ಎಂಬುದನ್ನು ತಮ್ಮ ಮಾಹಿತಿಗಾಗಿ ನೀಡಿದೆ. ಕರ್ತವ್ಯದ ಅವಧಿಯು 8 ಘಂಟೆಗಳು ಮೂರು ಶಿಫ್ಟ್ ಆಗಿದ್ದು, ವೇತನ ರೂ. 28,499/– ಆಗಿರುತ್ತದೆ. ಆಸಕ್ತರ ಪಟ್ಟಿಯನ್ನು ಈ ಇಲಾಖೆಯ ನಿರ್ದೇಶನಾಲಯಕ್ಕೆ ದಿನಾಂಕ 25–11–2024 ರಂದೇ ನೀಡಬೇಕಾಗಿರುವುದರಿಂದ ಹೆಚ್ಚಿನ ಸಮಯವಕಾಶವಿರುವುದಿಲ್ಲ. ಉಪ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ರವರ ಆದೇಶದ ಮೇರೆಗೆ ಮೇಲಿನ ಮಾಹಿತಿಯನ್ನು ಹಂಚಿಕೊಳ್ಳಲಾಗಿದೆ.

ಕೆಪಿಎಸ್ ಹೆಚ್ಚುವರಿ ಎಲ್‌ಕೆಜಿ, 1ನೇ ತರಗತಿ ತೆರೆಯಲು ಅವಕಾಶ

• ಉದಯವಾಹಿನಿ, ಬೆಂಗಳೂರು

ರಾಜ್ಯದ 42 ಕರ್ನಾಟಕ ಪಬ್ಲಿಕ್ ಸ್ಕೂಲ್ (ಕೆಪಿಎಸ್) ಆಂಗ್ಲ ಮಾಧ್ಯಮದಲ್ಲಿ ಹೆಚ್ಚುವರಿಯಾಗಿ ಎಲ್ ಕೆಜಿ ತರಗತಿ ಮತ್ತು 51 ಕೆಪಿಎಸ್ ಶಾಲೆಗಳಲ್ಲಿ 1ನೇ ತರಗತಿಯ ಆಂಗ್ಲ ಮಾಧ್ಯಮದಲ್ಲಿ ಹೆಚ್ಚುವರಿ ವಿಭಾಗಗಳನ್ನು ತೆರೆಯಲು ರಾಜ್ಯ ಸರ್ಕಾರ ಅನುಮತಿ ನೀಡಿದೆ. ರಾಜ್ಯದಲ್ಲಿ ಪ್ರಸ್ತುತ 286 ಕೆಪಿಎಸ್ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು ಎಲ್‌ಕೆಜಿಯಿಂದ ದ್ವಿತೀಯ ಪಿಯು ತನಕ ಒಂದೇ ಕ್ಯಾಂಪಸ್‌ನಲ್ಲಿ ಶಿಕ್ಷಣ ನೀಡುತ್ತಿವೆ. ಕೆಪಿಎಸ್ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಪ್ರಮಾಣ ಉತ್ತಮವಾಗಿರುವ ಹಿನ್ನೆಲೆಯಲ್ಲಿ ಹೆಚ್ಚುವರಿ ತರಗತಿಗಳನ್ನು ಸ್ಥಾಪಿಸಲು ರಾಜ್ಯ ಸರ್ಕಾರ ತೀರ್ಮಾನಿಸಿದೆ.

ಹೆಚ್ಚುವರಿಯಾಗಿ 1ನೇ ತರಗತಿಯನ್ನು ಪ್ರಾರಂಭಿಸುವ ಶಾಲೆಗಳಲ್ಲಿ ಅವಶ್ಯವಿರುವ ಶಿಕ್ಷಕರನ್ನು ಪ್ರಾಥಮಿಕ ಶಾಲಾ ಶಿಕ್ಷಕರ ಮರು ನಿಯೋಜನೆಯ ಮೂಲಕ ತುಂಬಿಕೊಳ್ಳುವಂತೆ ಸೂಚಿಸಲಾಗಿದೆ.

ಮೂರು ಲೋಕವನ್ನೇ ಗೆದ್ದ ಭ್ರಮೆಯಲ್ಲಿದ್ದೀರಿ: ಅಶೋಕ್

ಮುಡಾ ಹಗರಣದಲ್ಲಿ ತಮ್ಮ ವಿರುದ್ಧ ತನಿಖೆ ಅಗತ್ಯ ಇದೆ ಮಾನ್ಯ ಹೈಕೋರ್ಟ್ ಘಂಟಾಘೋಷವಾಗಿ ಹೇಳಿದ್ದು ಸುಳ್ಳಾ?

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ಮೂರು ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆಯಲ್ಲಿ ಕಾಂಗ್ರೇಸ್ ಭರ್ಜರಿ ಗೆಲುವು ಸಾಧಿಸಿದ್ದು, ಈ ಬಗ್ಗೆ ವಿಪಕ್ಷ ನಾಯಕ ಆರ್. ಅಶೋಕ್ ವ್ಯಂಗ್ಯ ಮಾಡಿದ್ದಾರೆ. ಹಣದ ಹೊಳೆ ಹರಿಸಿ, ಓಲೈಕೆ ರಾಜಕಾರಣದ ಮೂಲಕ ಒಂದು ಸಮುದಾಯದ ಮತಗಳಿಸಿ ಉಪಚುನಾವಣೆ ಗೆದ್ದ ಮಾತ್ರಕ್ಕೆ ಮೂರು ಲೋಕವನ್ನೇ ಗೆದ್ದು ಬಿಟ್ಟೆವು ಎಂಬ ಭ್ರಮೆಯಲ್ಲಿದೆ ಕಾಂಗ್ರೇಸ್ ಪಕ್ಷ ಎಂದು ಕಾಲೆಳೆದಿದ್ದಾರೆ. ಸಿಎಂ ಸಿದ್ದರಾಮಯ್ಯನವರೇ ಯಾವುದು ಸುಳ್ಳು, ಯಾವುದು ಅಪಪ್ರಚಾರ ವಾಲ್ಮೀಕಿ ನಿಗಮದಲ್ಲಿ ಕೋಟಿ ಕೋಟಿ ಹಣ ಅವ್ಯವಹಾರ ಆಗಿದೆ ಎಂದು ಸ್ವತಃ ತಾವೇ ಸದನ ದಲ್ಲಿ ಒಪ್ಪಿಕೊಂಡರಲ್ಲ, ಅದು ಸುಳ್ಳಾ? ಮೂಡ ಹಗರಣದಲ್ಲಿ ತಮ್ಮ ಪತ್ನಿಯವರ ಹೆಸರಿನಲ್ಲಿರುವ 14 ಸೈಟು ವಾಪಸ್ಸು ಕೊಡುವ ಮೂಲಕ ಪರೋಕ್ಷವಾಗಿ ತಮ್ಮ ತಪ್ಪನ್ನ ಒಪ್ಪಿಕೊಂಡಿದ್ದೀರಲ್ಲ ಅದು ಸುಳ್ಳಾ? ಮೂಡಾ ಹಗರಣದಲ್ಲಿ ತಮ್ಮ ವಿರುದ್ಧ ತನಿಖೆ ಅಗತ್ಯ ಇದೆ ಮಾನ್ಯ ಹೈಕೋರ್ಟ್ ಘಂಟಾಘೋಷವಾಗಿ ಹೇಳಿದ್ದು ಸುಳ್ಳಾ? ಎಂದು ಪ್ರಶ್ನೆ ಕೇಳಿದ್ದಾರೆ. ಮದ್ಯ ಮಾರಾಟಗಾರರ ಸಂಘ ತಮಗೆ ಬರೆದಿರುವ ಪತ್ರದಲ್ಲಿ ಅಬಕಾರಿ ಇಲಾಖೆಯಲ್ಲಿ ತಿಂಗಳ ಮನಿ ಹೆಸರಿನಲ್ಲಿ ವರ್ಗಾವಣೆ ದಂಧೆಯಲ್ಲಿ, ಲೈಸೆನ್ಸ್ ನವೀಕರಣದಲ್ಲಿ 700 ಕೋಟಿ ರೂಪಾಯಿ ಲಂಚದ ವ್ಯವಹಾರ ನಡೆದಿದೆ ಎಂದು ಹೇಳಿರುವುದು ಸುಳ್ಳಾ? ವಕ್ಸ್ ಮಂಡಳಿ ಹೆಸರಿನಲ್ಲಿ ಸರ್ಕಾರಿ ಆಸ್ತಿ ಪಾಸ್ತಿ, ಮಠ ಮಂದಿರಗಳ ಜಾಗ, ರೈತರ ಕೃಷಿ ಜಮೀನುಗಳಿಗೆ ಕಳಿಸಿ, ರಾತ್ರೋರಾತ್ರಿ ದಾಖಲೆಗಳನ್ನು ತಿದ್ದುತ್ತಿರುವುದು ಸುಳ್ಳಾ? ತಮ್ಮ ಸರ್ಕಾರದ ಭ್ರಷ್ಟಾಚಾರಕ್ಕೆ, ಕಿರುಕುಳಕ್ಕೆ ಈವರೆಗೂ ನಾಲ್ಕು ಜನ ಪ್ರಾಮಾಣಿಕ ಸರ್ಕಾರಿ ಅಧಿಕಾರಿಗಳು, ಸಿಬ್ಬಂದಿಗಳು, ಗುತ್ತಿಗೆದಾರರು ಆತ್ಮಹತ್ಯೆಗೆ ಶರಣಾಗಿರುವ ಘಟನೆಗಳು ಸುಳ್ಳಾ? ನಿಮ್ಮ ಈ ಕುತಂತ್ರ, ಷಡ್ಯಂತ್ರ ನಾಟಕ ಜಾಸ್ತಿ ದಿನ ನಡೆಯುವುದಿಲ್ಲ. ತಡವಾದರೂ ಸತ್ಯಕ್ಕೆ ಎಂದಿಗೂ ಜಯ. ಸತ್ಯಮೇವ ಜಯತೇ ಎಂದು ಸಿದ್ದರಾಮಯ್ಯ ವಿರುದ್ಧ ಅಶೋಕ್ ಹೇಳಿದ್ದಾರೆ. ಎಂದು ಗುಡುಗಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರೂ ಗ್ಯಾರಂಟಿಗಳ ಬಗ್ಗೆ ಅಪಪ್ರಚಾರ ಮಾಡಿದ್ದರು. ಮಹಾ ರಾಷ್ಟ್ರ ಸರ್ಕಾರ ಕರ್ನಾಟಕದಲ್ಲಿ ಗ್ಯಾರಂಟಿಗಳೇ ಜಾರಿ ಆಗಿಲ್ಲ ಎಂದು ಸುಳ್ಳು ಜಾಹಿರಾತನ್ನೇ ನೀಡಿತ್ತು. ನಿರಂತರ ಸುಳ್ಳು, ಅಪಪ್ರಚಾರದಲ್ಲೇ ಈ ಉಪಚುನಾವಣೆ ನಡೆಸಿದ್ದರು. ಎಲ್ಲಾ ಸುಳ್ಳು, ಅಪಪ್ರಚಾರಗಳಿಗೂ ರಾಜ್ಯದ ಜನತೆ ತಕ್ಕ ಉತ್ತರ ನೀಡಿದ್ದಾರೆ ಎಂದು ಹೇಳಿದ್ದರು.

ಮಹಾರಾಷ್ಟ್ರ ಗೆಲುವಿಗೆ ಅಭಿನಂದನೆ: ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿರುವ ಹಿನ್ನೆಲೆ ಆರ್.ಅಶೋಕ್ ಟ್ವಿಟ್ ಮೂಲಕ ಅಭಿನಂದನೆ ತಿಳಿಸಿದ್ದಾರೆ.

ಮಹಾರಾಷ್ಟ್ರ ಅಸೆಂಬ್ಲಿ ಚುನಾವಣೆಯಲ್ಲಿ ಅದ್ಭುತ ಗೆಲುವು ಸಾಧಿಸಿದ ಮಹಾರಾಷ್ಟ್ರ ಬಿಜೆಪಿಗೆ ಅಭಿನಂದನೆಗಳು. ಈ ಮಹತ್ವಪೂರ್ಣ ಗೆಲುವು ಪ್ರಧಾನಿಯವರ ಮೇಲಿನ ಜನರ ನಂಬಿಕೆ ಮತ್ತು ವಿಶ್ವಾಸವನ್ನು ಪ್ರತಿಬಿಂಬಿಸುತ್ತದೆ. ಸಮೃದ್ಧ ಮಹಾರಾಷ್ಟ್ರಕ್ಕಾಗಿ ನರೇಂದ್ರ ಮೋದಿ ಅವರ ದೃಷ್ಟಿ, ಎಲ್ಲಾ ಮಹಾಯುತಿ ನಾಯಕರಿಗೆ ಮತ್ತು ಕಾರ್ಯಕರ್ತರಿಗೆ ಶುಭಾಶಯಗಳು ಎಂದಿದ್ದಾರೆ. ಇನ್ನು ಜಾರ್ಖಂಡ್ ನಲ್ಲಿ ಜೆಎಂಎಂ ಬಹುಮತ ಪಡೆದಿದ್ದು ಸರ್ಕಾರದ ರಚನೆಗೆ ಸಜ್ಜಾಗಿದೆ.

ಉದಯವಾಹಿನಿ ಚಿತ್ರ

ರಾಜ್ಯದ ಜನತೆ ತಕ್ಕ ಉತ್ತರ ನೀಡಿದ್ದಾರೆ

> ಬಿಜೆಪಿ, ಜೆಡಿಎಸ್ ಇಬ್ಬರೂ ಸೇರಿ ಅಪಪ್ರಚಾರ ಮಾಡಿದರು. ಇಬ್ಬರೂ ಒಟ್ಟಾಗಿ ಪಾದಯಾತ್ರೆ ಮಾಡಿದ್ದೇನು, ಗ್ಯಾರಂಟಿಗಳ ಬಗ್ಗೆ ಅಪಪ್ರಚಾರ ಮಾಡಿ ನಿರಂತರವಾಗಿ ಫಲಾನುಭವಿಗಳನ್ನು ಅವಮಾನಿಸಿದ್ದೇನು, ಸರ್ಕಾರ ಬೀಳಿಸುತ್ತೇವೆ ಎಂದು ಬೆದರಿಕೆ ಒಡ್ಡಿದ್ದೇನು, ಜೊತೆಜೊತೆಗೆ ಚುನಾವಣಾ ಪ್ರಚಾರ ಮಾಡಿದ್ದೇನು, ಇವೆಲ್ಲವನ್ನೂ ಜನರು ಬಹಳ ತಾಳ್ಮೆಯಿಂದ ನೋಡಿ, ಪ್ರಜ್ಞಾಪೂರ್ವಕವಾಗಿ ಯೋಚಿಸಿ ಮತ ನೀಡಿದ್ದಾರೆ
> –ಸಿದ್ದರಾಮಯ್ಯ, ಮುಖ್ಯಮಂತ್ರಿ

> ತಮ್ಮ ಸರ್ಕಾರದ ಭ್ರಷ್ಟಾಚಾರಕ್ಕೆ, ಕಿರುಕುಳಕ್ಕೆ ಈವರೆಗೂ ನಾಲ್ಕು ಜನ ಪ್ರಾಮಾಣಿಕ ಸರ್ಕಾರಿ ಅಧಿಕಾರಿಗಳು, ಸಿಬ್ಬಂದಿಗಳು, ಗುತ್ತಿಗೆದಾರರು ಆತ್ಮಹತ್ಯೆಗೆ ಶರಣಾಗಿರುವ ಘಟನೆಗಳು ಸುಳ್ಳಾ? ನಿಮ್ಮ ಈ ಕುತಂತ್ರ, ಷಡ್ಯಂತ್ರ ನಾಟಕ ಜಾಸ್ತಿ ದಿನ ನಡೆಯುವುದಿಲ್ಲ. ತಡವಾದರೂ ಸತ್ಯಕ್ಕೆ ಎಂದಿಗೂ ಜಯ. ಸತ್ಯಮೇವ ಜಯತೇ ಎಂದು ಸಿದ್ದರಾಮಯ್ಯ ವಿರುದ್ಧ ಅಶೋಕ್ ಹೇಳಿದ್ದಾರೆ.

ಕಡಲೆಕಾಯಿ ಪರೀಷೆ ಆರಂಭ; ಹರಿದು ಬಂದ ಜನಸ್ತೋಮ

• ಉದಯವಾಹಿನಿ, ಬೆಂಗಳೂರು

ಉದಯವಾಹಿನಿ ಚಿತ್ರ

ಬೆಂಗಳೂರಿನ ಬಸವನಗುಡಿಯಲ್ಲಿ ಭಾನುವಾರದಿಂದ ಕಡಲೆಕಾಯಿ ಪರೀಷೆ ಆರಂಭವಾಗಿದ್ದು, ಬಸವನಗುಡಿ ಸರ್ಕಲ್‌ಯಿಂದ ಬಿಎಮ್‌ಎಸ್ ಕಾಲೇಜಿನವರೆಗೆ ಫುಲ್ ಟ್ರಾಫಿಕ್ ಜಾಮ್ ಉಂಟಾಗಿದೆ. ಭಾನುವಾರ ಹಿನ್ನೆಲೆಯಲ್ಲಿ ಕಡಲೆಕಾಯಿ ಪರಿಷೆಯಲ್ಲಿ ಭಾರಿ ಜನಸ್ತೋಮ ಕಂಡುಬಂದಿದ್ದು, ಒಂದು ವಾರದವರೆಗೂ ಕಡಲೆಕಾಯಿ ಪರಿಷೆ ನಡೆಯಲಿದೆ. ಹೌದು ಐತಿಹಾಸಿಕ ಬೆಂಗಳೂರಿನ ಬಸವನಗುಡಿಯ ಕಡಲೆಕಾಯಿ ಪರಿಷೆ ಕಳೆಗಟ್ಟಿದ್ದು, ವಿದ್ಯುತ್ ದೀಪಾಲಂಕಾರಗಳಿಂದ ಜಘಮಘಿಸುತ್ತಿದೆ. ಈಗಾಗಲೇ ಪರಿಷೆ ಪ್ರಾರಂಭವಾಗಲಿದೆ.

ಆದರೆ ಎರಡು ದಿನಕ್ಕೂ ಮುಂಚಿತವಾಗಿಯೇ ಜಾತ್ರೆ ಜೋರಾಗಿ ನಡೆಯುತ್ತಿದೆ. ರಾಮಕೃಷ್ಣ ಆಶ್ರಮ ವೃತ್ತದಿಂದ ಬ್ಯೂಗಲ್‌ಕ್, ಬುಲ್ ಟೆಂಪಲ್ ರಸ್ತೆ, ದೊಡ್ಡಗಣಪತಿ ದೇವಸ್ಥಾನಕ್ಕೆ ಹೊಂದಿಕೊಂಡಂತಿರುವ ರಸ್ತೆಗಳ ಬದಿಗಳಲ್ಲಿ ರಾಶಿರಾಶಿ ಕಡಲೆಕಾಯಿ, ಮಕ್ಕಳ ಆಟಿಕೆ ಸಾಮಾನುಗಳು ಸೇರಿದಂತೆ ಇತರೆ ಸಾಮಗ್ರಿಗಳ ವ್ಯಾಪಾರ ಜೋರಾಗಿದೆ. ವಾರಾಂತ್ಯದ ರಜೆಯ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಬರುತ್ತಿದ್ದು, ಪರಿಷೆಯ ಸಡಗರ ಸಂಭ್ರಮ ಮತ್ತಷ್ಟು ಹೆಚ್ಚಾಗಿದೆ. ಒಂದು ಸೇರು ಕಡಲೆಕಾಯಿಗೆ 50 ರೂ.ಗಳಿಂದ 60 ರೂ.ಗೆ ಮಾರಾಟವಾಗುತ್ತಿದೆ. ಮಾಗಡಿ ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಹೊಸಕೋಟೆ ಸೇರಿದಂತೆ ಇತರೆ ಪ್ರದೇಶಗಳಿಂದ ಕಡಲೆಕಾಯಿಯನ್ನು ತಂದು ಮಾರಾಟ ಮಾಡಲಾಗುತ್ತಿದೆ.ಈ ಬಾರಿ ಕಾಲಕಾಲಕ್ಕೆ ಸರಿಯಾಗಿ ಮಳೆ ಬಾರದ ಹಿನ್ನೆಲೆಯಲ್ಲಿ ಕಡಲೆಕಾಯಿ ಬೆಲೆ ತುಸು ಹೆಚ್ಚಾಗಿದೆ. ಇದು ಕರ್ನಾಟಕ ಮಾತ್ರವಷ್ಟೇ ಅಲ್ಲದೆ, ತಮಿಳುನಾಡು, ಆಂಧ್ರಪ್ರದೇಶದಲ್ಲೂ ಸಹ ಉತ್ತ ಮಳೆ ಭಾಗದಿರುವುದರಿಂದ ಬೆಲೆ ಕುಸು ಏರಿಕೆಯಾಗಿದೆ.

'ಬಗರ್ ಹುಕುಂ' ಸಾಗುವಳಿದಾರರಿಗ

ಎಚ್‌ಡಿಕೆ ವಿರುದ್ಧ ಜೆಡಿಎಸ್ ಶಾಸಕ ಜಿಟಿ ದೇವೇಗೌಡ ಆಕ್ರೋಶ

ಅಧಿಕಾರ ಕೊಡುವ ಸಮಯ ಬಂದಾಗ ದೂರ ಮಾಡುತ್ತಾರೆ : ಎಚ್‌ಡಿಕೆ ವಿರುದ್ಧ ಮತ್ತೆ ಸಿಡಿದೆದ್ದ ಜಿಟಿ ದೇವೇಗೌಡ

• ಉದಯವಾಹಿನಿ, ಮೈಸೂರು

ನನ್ನ ಕುಮಾರಸ್ವಾಮಿ ನಡುವೆ ಮುನಿಸು ಸಾಕಷ್ಟು ಬಾರಿ ಆಗಿದೆ. ನೊಂದಿದ್ದರು ಸಹ ನಾನು ಅವರೊಂದಿಗೆ ಮಾತನಾಡಿದ್ದೇನೆ. ನೀನು ಇದ್ದರೆ 5 ಸ್ಥಾನ ಗೆಲ್ಲುತ್ತಿದ್ವಿ ಅಂತ ಕರೆದುಕೊಂಡವರು ಕೂಡ ಅವರೇ. ಆದರೆ ಅಧಿಕಾರ ಕೊಡುವ ಸಮಯ ಬಂದಾಗ ದೂರ ಮಾಡುತ್ತಾರೆ ಎಂದು ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಜೆಡಿಎಸ್ ಶಾಸಕ ಜಿಟಿ ದೇವೇಗೌಡ ಆಕ್ರೋಶ ವ್ಯಕ್ತಪಡಿಸಿದರು.

ವ್ಯವಹಾರ ಕರ್ನಾಟಕ ಮೈಸೂರಲ್ಲಿ ಮಾಧ್ಯಮ ಗಳೊಂದಿಗೆ ಮಾತನಾಡಿದ ಅವರು, ನಿಖಿಲ ಸೋಲಿನ ಬಗ್ಗೆ ಪ್ರತಿಕ್ರಿಯಿಸಲು ಇಷ್ಟಪಡಲ್ಲ. ನಿಖಿಲ್ ಕುಮಾರ್‌ಗೆ ಸೋಲು ಆಗಿರುವ ವಿಚಾರವಾಗಿ ಸೋಲು ಯಾಕಾಗಿದೆ ಅಂತ ಗೊತ್ತಿಲ್ಲ ಎಲ್ಲಾ ಹೆಚ್‌ಡಿ ಕುಮಾರಸ್ವಾಮಿಗೆ ಗೊತ್ತಿದೆ. ಚನ್ನಪಟ್ಟಣ ಪ್ರಚಾರಕ್ಕೆ

ಉದಯವಾಹಿನಿ ಚಿತ್ರ

ನನ್ನನ್ನು ಕರೆಯಲಿಲ್ಲ.

ಹಾಗಾಗಿ ನಾನು ಕೂಡ ಹೋಗಿಲ್ಲ. ಮಗ ಹರೀಶ್ ಗೌಡ ಬಂದಿದ್ದಾನೆ ನಾನು ಬೇಡ ಅಂತ ಇರಬಹುದು. ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷನಾಗಿ ರಾಜ್ಯ ಪ್ರವಾಸ ಮಾಡಿದ್ದೆ. ಚುನಾವಣಾ ಪ್ರಚಾರಕ್ಕೆ ಏಕೆ ಕರೆದಿಲ್ಲ ಅಂತ ಅವರನ್ನೇ ಕೇಳಬೇಕು. ನನ್ನ ಕುಮಾರಸ್ವಾಮಿ ನಡುವೆ ಮುನಿಸು ಸಾಕಷ್ಟು ಬಾರಿ ಆಗಿದೆ. ನೊಂದಿದ್ದರು ಸಹ ನಾನು ಅವರೊಂದಿಗೆ ಮಾತನಾಡಿದ್ದೇನೆ. ನೀನು ಇದ್ದರೆ 5 ಸ್ಥಾನ ಗೆಲ್ಲುತ್ತಿದ್ವಿ

> ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ಎಲ್ಲರ ಎದುರು ಮಾತಾಡಿದ್ದೇನೆ. ಸಿದ್ದರಾಮಯ್ಯ ಎಚ್‌ಡಿ ಕುಮಾರಸ್ವಾಮಿ ಆರ್ ಅಶೋಕ್ ಎಲ್ಲರ ಬಗ್ಗೆ ಮಾತನಾಡಿದ್ದೇನೆ ಯಾಕೆ ರಾಜೀನಾಮೆ ಕೊಡಬೇಕು ಅಂತ ಕೂಡ ಕೇಳಿದ್ದೇನೆ. ಕೊಡುವುದಾದರೆ ಎಲ್ಲಾ ಕೊಡಬೇಕು ಅಂತ ಹೇಳಿದ್ದರಲ್ಲಿ ತಪ್ಪೇನಿದೆ
> –ಜಿ.ಟಿ. ದೇವೇಗೌಡ, ಜೆಡಿಎಸ್ ಶಾಸಕ

ಅಂತ ಕರೆದುಕೊಂಡವರು ಕೂಡ ಅವರೇ. ಆದರೆ ಅಧಿಕಾರ ಕೊಡುವ ಸಮಯ ಬಂದಾಗ ದೂರ ಮಾಡುತ್ತಾರೆ. ಸೀನಿಯರ್ ಅಂತ ನನ್ನನ್ನು ಯಾವತ್ತೂ ಪರಿಗಣಿಸಿಲ್ಲ. ಆದರೆ ಅವರು ಜೂನಿಯರ್ ತಂಡ ಕಟ್ಟಿಕೊಂಡಿದ್ದಾರೆ. ಮನಸ್ಸಿನಲ್ಲಿ ಏನಿದೆ ಅಂತ ಅರ್ಥ ಮಾಡಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದರು. ನನ್ನನ್ನು ಪೂರ್ಣವಾಗಿ ಅರ್ಥ ಮಾಡಿಕೊಂಡವರು ಯಾರು ಇಲ್ಲ. ಯಡಿಯೂರಪ್ಪಗೆ ಅಧಿಕಾರ ಕೊಡದಿದ್ದಾಗ ನಾನೇ ಬಿಜೆಪಿಗೆ ಹೋದೆ. ಜೆಡಿಎಸ್ ನವರು ಮಾತಿಗೆ ತಪ್ಪಿದ್ದಿ ಅಂತ ನಾನು ಬಿಜೆಪಿಗೆ ಹೋಗಿದ್ದೆ. ರಾಜಕೀಯದಲ್ಲಿ ನನ್ನ ಮನಸ್ಸಿಗೆ ಒಪ್ಪುವುದನ್ನು ನಾನು ಮಾಡುತ್ತೇನೆ. ಕೆಲವರು ಸತ್ಯವನ್ನು ಮರೆಮಾಚಿ ಮಾತನಾಡುತ್ತಾರೆ. ಮೈಸೂರಿಗೆ ಬಂದು ನನಗೆ ಧರಂಸಿಂಗ್ ಜೊತೆ ಮಂತ್ರಿ ಮಾಡ್ತೀವಿ ಅಂತ ಅಂದ್ರು ಜನ ಹೋಗಿ ಸಚಿವ ಸ್ಥಾನ ಕೊಡಿ ಅಂತ ಕೇಳಿದರೆ ಬೈದು ಕಳುಹಿಸುತ್ತಿದ್ದರು.

ನನ್ನವರಿಗೆ ಕಣ್ಣೀರಾಕಿಸಿದರು ಎಚ್ ಡಿ ಕುಮಾರಸ್ವಾಮಿ ಬದಲಾಗಲಿಲ್ಲ. ಉನ್ನತ ಶಿಕ್ಷಣ ಇಲಾಖೆ, ಕೊಟ್ಟು ಫೇಲ್ ಆಗಲಿ ಅಂತ ಮಾಡಿದರು. ವ್ಯವಹಾರ ನನ್ನಲ್ಲಿ ದೈವ ಇದ್ದಾನೆ ಅದಕ್ಕಾಗಿ ಇಲಾಖೆಯನ್ನು ಸರಿಯಾಗಿ ನಿಭಾಯಿಸಿದೆ.

ಎಲ್ಲಾ ಶಾಸಕರ ಮನಸಲ್ಲಿತ್ತು

ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಮಾಡಿದ ತಕ್ಷಣ ಇಡೀ ರಾಜ್ಯವನ್ನು ಸುತ್ತಿದೆ. ನನ್ನನ್ನು ಡಿಪ್ಯೂಟಿ ಲೀಡರ್ ಮಾಡಲಿಲ್ಲ. ಕರ್ನಾಟಕ ಇದರಿಂದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನನ್ನನ್ನು ಅಣಕಿಸಿದರು. ಜೆಡಿಎಲ್‌ಪಿ ನಾಯಕ ಮಾಡಬೇಕು ಅಂತ ಎಲ್ಲಾ ಶಾಸಕರ ಮನಸಲ್ಲಿತ್ತು. ಶಾಸಕರು ಕೇಳಿದರೆ ಅವರ ವಿಚಾರ ಗೊತ್ತಿಲ್ಲ ಅಂತಿದ್ರು ಎಂದು ಜೆಡಿಎಸ್ ಶಾಸಕ ಜಿಟಿ ದೇವೇಗೌಡ ಕುಮಾರಸ್ವಾಮಿ ವಿರುದ್ಧ ಅಸಮಾಧಾನ ಹೊರಹಾಕಿದರು.

ಯೋಗೇಶ್ವರ್‌ರನ್ನು ಜೆಡಿಎಸ್ ನಾಯಕರು ಬೆಂಬಲಿಸಿದ್ದಾರೆ: ಡಿಸಿಎಂ

• ಉದಯವಾಹಿನಿ, ರಾಮನಗರ

ಚನ್ನಪಟ್ಟಣ ಕ್ಷೇತ್ರದಲ್ಲಿ ಕಾಂಗ್ರೇಸ್ ಭರ್ಜರಿ ಗೆಲುವು ದಾಖಲಿಸಿದೆ. ಈ ಒಂದು ಗೆಲುವಿನ ಕುರಿತಾಗಿ ಉಪಮುಖ್ಯಮಂತ್ರಿಯ ಡಿಕೆ ಶಿವ ಕುಮಾರ್ ಅವರು ಸ್ಫೋಟಕ ವಾದಂತಹ ಹೇಳಿಕೆ ನೀಡಿದ್ದು, ಬಿಜೆಪಿ ಮತ್ತು ಜೆಡಿಎಸ್ ನಾಯಕರು ಪರೋಕ್ಷವಾಗಿ ನಮಗೆ ಸಹಾಯ ಮಾಡಿದ್ದರಿಂದ ಈ ಒಂದು ಗೆಲುವು ಸಿಕ್ಕಿದೆ ಎಂದು ತಿಳಿಸಿದರು. ರಾಮನಗರ ಜಿಲ್ಲೆಯ ಕನಕಪುರದಲ್ಲಿ ಮಾತನಾಡಿದ ಅವರು, ಜನರು ಸಾಲದ ಹೊರೆಯನ್ನು ಹೊರೆಸಿದ್ದಾರೆ. ಮನೆ ಸೈಟ್ ಕೊಡುವುದಾಗಿ ನಾವು ವಾಗ್ದಾನ ನೀಡಿದವು. ಅನೇಕ ಅಭಿವೃದ್ಧಿ ಕೆಲ ಸಗಳಿಗೆ ಚಾಲನೆ ಕೊಡಬೇಕಿದೆ. ಜೆಡಿಎಸ್ ಮುಕ್ತ ರಾಮನಗರ ಜಿಲ್ಲೆ ಎಂಬ ವಿಚಾರವಾಗಿ ಮಾತನಾಡಿದ ಅವರು, ನಮಗೆ ಅದು ಮುಖ್ಯ ಅಲ್ಲ. ಮೊದಲು 19 ಶಾಸಕರು ಇದ್ದರು ಈಗ 18 ಆಗಿದ್ದಾರಷ್ಟೇ ಎಂದರು.



ಇನ್ನು ಚನ್ನಪಟ್ಟಣ ಫಲಿತಾಂಶದ ಬಗ್ಗೆ, ಡಿಸಿಎಂ ಡಿಕೆ ಶಿವಕುಮಾರ್ ಸ್ಫೋಟಕ ಹೇಳಿಕೆ ನೀಡಿದ್ದು, ಬಿಜೆಪಿ ಜೆಡಿಎಸ್ ನಾಯಕರ ಪರೋಕ್ಷ ಮತ್ತು ಪ್ರತ್ಯಕ್ಷವಾಗಿ ಸಹಾಯದಿಂದ ನಮಗೆ ಗೆಲವು ಸಿಕ್ಕಿದೆ. ಬಿಜೆಪಿ ಜೆಡಿಎಸ್ ನಾಯಕರು ನಮಗೆ ಸಹಾಯ ಮಾಡಿದ್ದಾರೆ. ಕಳೆದ ಅಸೆಂಬ್ಲಿ ಚುನಾವಣೆಯಲ್ಲಿ ಕಾಂಗ್ರೇಸ ಇದ್ದಿದ್ದೇ ಕೇವಲ 16,000 ವೋಟ್ ಆಗಿದೆ. ಹಾಗಾಗಿ ಈ ಬಾರಿ ಬಿಜೆಪಿ ಮತ್ತು ಜೆಡಿಎಸ್ ನ ಕೆಲ ನಾಯಕರೆಲ್ಲ ನಮಗೆ ಬೆಂಬಲ ನೀಡಿದ್ದಾರೆ.

> ಬಿಜೆಪಿಯವರು ಮತ್ತು ದಳದವರು ಪರೋಕ್ಷವಾಗಿ ಮತ್ತು ಪ್ರತ್ಯಕ್ಷವಾಗಿ ಸಹಾಯ ಮಾಡಿರಲಿಲ್ಲ ಅಂದರೆ ಇಷ್ಟು ಓಟು ಬರುತ್ತಿರಲಿಲ್ಲ ಎಂದು ತಿಳಿಸಿದರು. ಚನ್ನಪಟ್ಟಣ ಗೆಲುವಿನಿಂದ ನಾನು ಸಿಎಂ ಆಗಬೇಕಾಗಿಲ್ಲ ಅವರು ಸಿಎಂ ಇವರು ಸಿಎಂ ಅನ್ನೋದು ಇಲ್ಲಿ ಬೇಡ. ಅಲ್ಲಿನ ಜನರು ನಮ್ಮನ್ನು ನಂಬಿ ವೋಟ್ ಹಾಕಿದ್ದಾರೆ. ಹೀಗಾಗಿ ಜನರಿಗೆ ನಾವು ಗ್ಯಾರಂಟಿಯನ್ನು ಕೊಟ್ಟಿದ್ದೇವೆ
> –ಡಿಕೆ ಶಿವಕುಮಾರ್, ಡಿಸಿಎಂ

ಬಿಜೆಪಿಯವರು ಬೆಂಬಲ ನೀಡದಿದ್ದರೆ, ಜೆಡಿಎಸ್ ನಾಯಕರು ಇವರೆಲ್ಲ ಬಂದು ಬೆಂಬಲವಾಗಿ ನಿಂತುಕೊಳ್ಳಲಿಲ್ಲ ಅಂದರೆ ಗೆಲುವು ಕಷ್ಟವಾಗುತ್ತಿತ್ತು.

ಧಾರ್ಮಿಕ ಮೆರವಣಿಗೆಯಲ್ಲಿ ಯಾಂತ್ರಿಕ ಆನೆ ಬಳಕೆ

• ಉದಯವಾಹಿನಿ, ಕೋಲಾರ



ಜಿಲ್ಲೆಯಲ್ಲೇ ಮೊದಲ ಬಾರಿಗೆ ಯಾಂತ್ರಿಕ ಆನೆಗಳ ಮೂಲಕ ಧಾರ್ಮಿಕ ಮೆರವಣಿಗೆಯೊಂದು ನಡೆಯಲಿದ್ದು, ನೂರಾರು ವರ್ಷಗಳ ಇತಿಹಾಸವಿರುವ ತಾಲ್ಲೂಕಿನ ನಾಗಲಾಪುರದ ಶ್ರೀಮದ್ ವೀರ ಸಿಂಹಾಸನ ಮಠವು ಇದಕ್ಕೆ ವೇದಿಕೆಯನ್ನೊದಗಿಸಲಿದೆ. ನಾಗಲಾಪುರದ ಶ್ರೀಮದ್ ಮಠವು ಪ್ರತಿ ಕಾರ್ತಿಕ ಮಾಸದಲ್ಲಿ ಲೋಕ ಕಲ್ಯಾಣಾರ್ಥವಾಗಿ ಶಿವ ಪಾರ್ವತಿ ಕಲ್ಯಾಣೋತ್ಸವ, ಲಿಂಗೈಕ್ಯ ಶ್ರೀ ಗುರುಲಿಂದರಾಜಚಾರ್ಯ ಸ್ವಾಮಿಗಳ 22ನೇ ವರ್ಷದ ಸಂಸ್ಕರಣೋತ್ಸವ ಹಾಗೂ ಮಹಾ ಮೃತ್ಯುಂಜಯ ಹೋಮ ಧರ್ಮಜಾಗೃತಿ ಕಾರ್ಯದಲ್ಲಿ ಯಾಂತ್ರಿಕ ಆನೆಗಳ ಧಾರ್ಮಿಕ ಮೆರವಣಿಗೆ ನಡೆಸುವಂತ ಐತಿಹಾಸಿಕ ನಿರ್ಧಾರ ತೆಗೆದುಕೊಂಡಿದೆ.

ಯಾವಾಗ?: ಕಾರ್ತಿಕ ಮಾಸದ ಕೊನೆಯ ಸೋಮವಾರ ನ.25ರಂದು ನಾಗಲಾಪುರ ಮಠದಲ್ಲಿ ನಡೆಯುವ ಧಾರ್ಮಿಕ ಮೆರವಣಿಗೆಯಲ್ಲಿ ಯಾಂತ್ರಿಕ ಆನೆಗಳನ್ನು ಬಳಸಲಾಗುತ್ತಿದೆ. ಹೀಗೆ ಯಾಂತ್ರಿಕ ಆನೆಗಳನ್ನು ಬಳಸಿ ಧಾರ್ಮಿಕ ಮೆರವಣಿ ಮಾಡಲು ಮಠದ ಶ್ರೀತೇಜೇಶಲಿಂಗ ಶಿವಾಚಾರ್ಯ ಸ್ವಾಮಿಗಳೇ ಆಸಕ್ತಿ ವಹಿಸಿರುವುದು ವಿಶೇಷವೆನಿಸಿದೆ.

ಈ ಧರ್ಮ ಜಾಗೃತಿ ಕಾರ್ಯಕ್ರಮ, ಕಲ್ಯಾಣೋತ್ಸವ ಹಾಗೂ ಯಾಂತ್ರಿಕ ಆನೆಗಳ ಮೆರವಣಿಗೆಗೆ ಬೇಲಿಮಠದ ಶ್ರೀ ಶಿವಾನುಭವ ಚರಮೂರ್ತಿ ಶ್ರೀ ಶಿವರುದ್ರ ಮಹಾಸ್ವಾಮಿ, ಕಡೇನಂದಿಹಳ್ಳಿ ಮಠದ ಶ್ರೀರೇವಣ ಸಿದ್ದೇಶ್ವರ ಶಿವಾಚಾರ್ಯ ಸ್ವಾಮಿ, ಚಿಕ್ಕಕಲ್ಲುಬಾಳು ಮಠದ ಶ್ರೀ ಶಿವಾನಂದ ಶಿವಾಚಾರ್ಯ ಸ್ವಾಮಿ, ಸಂಸ್ಥಾನ ಮಠದ ಡಾ. ರಾಜೇಶ್ವರ ಶಿವಾಚಾರ್ಯ ಸ್ವಾಮಿ, ಬೆಳ್ಳಾವಿ ಸಂಸ್ಥಾನ ಮಠದ ಶ್ರೀ ಮಹಂತ ಶಿವಾಚಾರ್ಯ ಸ್ವಾಮಿ ಹಾಗೂ ಹುಣಸಮಾರನಹಳ್ಳಿ ಸಂಸ್ಥಾನ ಮಠದ ಶ್ರೀ ಗುರುನಂಜೇಶ್ವರ ಶಿವಾಚಾರ್ಯ ಸ್ವಾಮಿ ಹಾಗೂ ಜಿಲ್ಲೆಯ ಜನಪ್ರತಿನಿಧಿಗಳು ಸೇರಿದಂತೆ ಸಾವಿರಾರು ಸಂಖ್ಯೆಯ ಭಕ್ತರು ಆಗಮಿಸುತ್ತಿದ್ದಾರೆ.

14 ಸಾವಿರ ಟಿಕೆಟ್‌ಗೆ ಡಿಜಿಟಲ್ ಪಾವತಿ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಪ್ರಯಾಣಿಸುವವರು ಡೈನಮಿಕ್ ಯುಪಿಐ ಕ್ಯೂ.ಆರ್ ಕೋಡ್ ಮೂಲಕ ಹಣ ಪಾವತಿಸಿ ಟಿಕೆಟ್ ಪಡೆಯಲು ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಒಂದೊಂದೇ ಜಿಲ್ಲೆಯಲ್ಲಿ ಈ ಪ್ರಕ್ರಿಯೆಗೆ ಚಾಲನೆ ನೀಡಲಾಗುತ್ತಿದೆ.

ಚಿಕ್ಕಬಳ್ಳಾಪುರ ವಿಭಾಗದ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ನ.18ರಿಂದ ಈ ಅವಕಾಶ ಕಲ್ಪಿಸಲಾಗಿದೆ. ಈ ಆರು ದಿನಗಳಲ್ಲಿ ಚಿಕ್ಕಬಳ್ಳಾಪುರ ಕೆಎಸ್‌ಆರ್‌ಟಿಸಿ ವಿಭಾಗದ ಬಸ್‌ಗಳಲ್ಲಿ ಡಿಜಿಟಲ್ ಪಾವತಿ ವ್ಯವಸ್ಥೆ ಮೂಲಕ ಒಟ್ಟು 14,747 ಟಿಕೆಟ್ ಗಳನ್ನು ವಿತರಿಸಲಾಗಿದೆ. ಹೀಗೆ ನೀಡಿದ ಟಿಕೆಟ್ ಗಳಿಂದ ಒಟ್ಟು 10,14,120 ಸಂಗ್ರಹವಾಗಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡ ಬಳ್ಳಾಪುರ ಘಟಕವೂ ಚಿಕ್ಕಬಳ್ಳಾಪುರ ಕೆಎಸ್‌ಆರ್‌ಟಿಸಿ ವಿಭಾಗದ ವ್ಯಾಪ್ತಿಯಲ್ಲಿದೆ. ವಿಭಾಗದ ವ್ಯಾಪ್ತಿಯ ಆರು ಘಟಕಗಳಲ್ಲಿ ಒಟ್ಟು 14,747 ಟಿಕೆಟ್ ಗಳನ್ನು ಡಿಜಿಟಲ್ ವ್ಯವಸ್ಥೆ ಮೂಲಕ ವಿತರಿಸಲಾಗಿದೆ.

ಡಿಜಿಟಲ್ ಪಾವತಿಗೆ ಚಾಲನೆ

ಚಿಕ್ಕಬಳ್ಳಾಪುರ ವಿಭಾಗದ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ನ.14ರಿಂದ 17ರವರೆಗೆ ಒಟ್ಟು 30 ಡಿಜಿಟಲ್ ಯಂತ್ರಗಳ ಮೂಲಕ ಪ್ರಾಯೋಗಿಕವಾಗಿ ಡಿಜಿಟಲ್ ಪಾವತಿ ವ್ಯವಸ್ಥೆ ಮೂಲಕ ಟಿಕೆಟ್‌ಗಳನ್ನು ವಿತರಿಸಲಾಯಿತು. ನಂತರ ಡಿ.18ರಿಂದ ವಿಭಾಗದ 700 ಬಸ್‌ಗಳಲ್ಲಿಯೂ ಈ ಮಾದರಿಯನ್ನು ಪರಿಚಯಿಸಲಾಯಿತು. ಈ ಮೂಲಕ ಪೂರ್ಣ ಪ್ರಮಾಣದಲ್ಲಿಯೇ ಡಿಜಿಟಲ್ ಪಾವತಿಗೆ ಚಾಲನೆ ನೀಡಲಾಯಿತು.

ಪ್ರಯಾಣಿಕರಿಂದ ಉತ್ತಮ ಸ್ಪಂದನೆ ದೊರೆಯುತ್ತಿದ್ದು ಮುಂ ದಿನ ದಿನಗಳಲ್ಲಿ ಡಿಜಿಟಲ್ ಪಾವತಿ ಮೂಲಕ ಟಿಕೆಟ್ ಪಡೆಯುವ ವ್ಯವಸ್ಥೆ ಹೆಚ್ಚಲಿದೆ ಎಂದು ಕೆಎಸ್ ಆರ್‌ಟಿಸಿ ಅಧಿಕಾರಿಗಳು ವಿಶ್ವಾಸ ವ್ಯಕ್ತಪಡಿಸುವರು.

ವಕ್ಫ್‌ಗೆ ಭೂಮಿ: ಬಿಜೆಪಿ ಪ್ರತಿಭಟನೆ

• ಉದಯವಾಹಿನಿ, ತುಮಕೂರು

ರೈತರು, ಮಠಗಳು, ದೇವಾಲಯಗಳು, ಸರ್ಕಾರಿ ಶಾಲೆಗಳು, ಸಾರ್ವಜನಿಕರ ಆಸ್ತಿಯನ್ನು ವಕ್ಫ್‌ಗೆ ಪರಭಾರೆ ಮಾಡುತ್ತಿರುವುದನ್ನು ವಿರೋಧಿಸಿ ಬಿಜೆಪಿ ಕಾರ್ಯಕರ್ತರು ನಗರದ ಬಿಜಿಎಸ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ಸಚಿವ ಜಮೀರ್ ಅಹಮ್ಮದ್ ಖಾನ್ ವಿರುದ್ಧ ಭಿತ್ತಿ ಪತ್ರಗಳನ್ನು ಪ್ರದರ್ಶಿಸಿ, ಅವರ ವಿರುದ್ಧ ಘೋಷಣೆ ಕೂಗಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾಂಗ್ರೇಸ್ ವಿರುದ್ಧ ಧಿಕ್ಕಾರ ಘೋಷಣೆಗಳು ಮೊಳಗಿದವು. ನಮ್ಮ ಭೂಮಿ– ನಮ್ಮ ಹಕ್ಕು' ಹೆಸರಿನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು. ರೈತರು, ಮಠ ಮಾನ್ಯಗಳು ಸೇರಿದಂತೆ ಹಿಂದೂಗಳಿಗೆ ಸೇರಿದ ಜಮೀನ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಿಸಿ, ಕಬಳಿಸಲಾಗುತ್ತಿದೆ. ರೈತರಿಗೆ ನೋಟಿಸ್ ನೀಡಿ ಒಕ್ಕಲೆಬ್ಬಿಸಿ, ಬೀದಿಗೆ ತಂದು ನಿಲ್ಲಿಸಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಶಾಸಕ ಜಿ.ಬಿ.ಜ್ಯೋತಿಗಣೇಶ್, ಅಲ್ಪಸಂಖ್ಯಾತರ ಒಲೈಕೆಗಾಗಿ ರೈತರು, ಮಠಗಳು, ದೇವಸ್ಥಾನಗಳ

ಉದಯವಾಹಿನಿ ಚಿತ್ರ

> ಮುಖಂಡ ಎಂ.ಡಿ.ಲಕ್ಷ್ಮಿನಾರಾಯಣ, 'ರೈತರ ಜಮೀನಿನ ಪಹಣಿಯಲ್ಲಿ ನಮೂದಿಸಿರುವ ವಕ್ಫ್ ಹೆಸರನ್ನು ತೆಗೆದು ರೈತರ ಹೆಸರು ನಮೂದಿಸಬೇಕು. ಇಂತಹ ವಿಚಾರ ಇಟ್ಟುಕೊಂಡು ರೈತರ ಜೀವನ ಹಾಳು ಮಾಡಲು ಹೊರಟಿದೆ' ಎಂದು ಕಿಡಿಕಾರಿದರು.

ಜಮೀನನ್ನು ಕಬಳಿಕೆ ಮಾಡಲಾಗುತ್ತಿದೆ. ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಿಸಿ ರೈತರನ್ನು ಬೀದಿಗೆ ತಳ್ಳಲಾಗುತ್ತಿದೆ. ದೇಶದ ಭದ್ರತೆ, ಕಾನೂನು ಸುವ್ಯವಸ್ಥೆ ಹಾಳು ಮಾಡುವ ಕೆಲಸದಲ್ಲಿ ಕಾಂಗ್ರೇಸ್ ಸರ್ಕಾರ ತೊಡಗಿದೆ. ವೋಟಿಗಾಗಿ ಮುಸ್ಲಿಮರಿಗೆ ದೇಶವನ್ನು ಒತ್ತೆ ಇಡಲಾಗುತ್ತಿದೆ ಎಂದು ಟೀಕಿಸಿದರು. ರಾಜ್ಯದಲ್ಲಿ ಕಾಂಗ್ರೇಸ್ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಅಭಿವೃದ್ಧಿ ಕೆಲಸಗಳು ನಡೆಯುತ್ತಿಲ್ಲ. ಅಭಿವೃದ್ಧಿ ಶೂನ್ಯ ಸರ್ಕಾರ ಎಂಬ ಕಳಂಕ ಹೊತ್ತುಕೊಂಡಿದೆ. ಜನರ ಗಮನವನ್ನು ಬೇರೆಡೆ ಸೆಳೆಯುವ ಸಲುವಾಗಿ ವಕ್ಫ್ ವಿಚಾರವನ್ನು ಮುನ್ನೆಲೆಗೆ ತರಲಾಗಿದೆ ಎಂದು ಆರೋಪಿಸಿದರು.

ಚನ್ನಪಟ್ಟಣ ಉಪಚುನಾವಣೆ ಕಾಂಗ್ರೇಸ್ ಸೈನಿಕರ ವಿಜಯೋತ್ಸವ

• ಉದಯವಾಹಿನಿ, ಚನ್ನಪಟ್ಟಣ

ಉದಯವಾಹಿನಿ ಚಿತ್ರ

ಕಾಂಗ್ರೇಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಅವರು ಭರ್ಜರಿ ಜಯ ಸಾಧಿಸುತ್ತಿದ್ದಂತೆ ತಾಲ್ಲೂಕಿನೆಲ್ಲೆಡೆ ಸಂಭ್ರಮಾಚರಣೆ ಮುಗಿಲು ಮುಟ್ಟಿತ್ತು. ಉಪ ಚುನಾವಣೆಯಲ್ಲಿ ಸೈನಿಕನ ಗೆಲುವಿಗಾಗಿ ಸೈನಿಕರಂತೆ ದುಡಿದಿದ್ದ ಕಾಂಗ್ರೇಸ್ ಮುಖಂಡರು, ಕಾರ್ಯಕರ್ತರು ಮತ್ತು ಯೋಗೇಶ್ವರ್ ಅಭಿಮಾನಿಗಳು ವಿಜಯೋತ್ಸವ ಆಚರಿಸಿದರು. ರಾಮನಗರದ ಸರ್ಕಾರಿ ಎಂಜಿನಿಯರಿಂಗ್ ಕಾಲೇಜು ಎದುರು ತಮ್ಮ ನೆಚ್ಚಿನ ಅಭ್ಯರ್ಥಿ ಸಿ.ಪಿ. ಯೋಗೇಶ್ವರ್ ಗೆಲುವಿನ ಸುದ್ದಿ ಕೇಳಿಸಿಕೊಳ್ಳಲು ಕಾತರರಾಗಿ ನಿಂತಿದ್ದ ಕಾಂಗ್ರೇಸ್ ಕಾರ್ಯಕರ್ತರು ಯೋಗೇಶ್ವರ್ ಸಾವಿರ ಮತಗಳ ಮುನ್ನಡೆ ಪಡೆಯುತ್ತಿದ್ದಂತೆ ವಿಜಯೋತ್ಸವ ಮೊಳಗಿಸಿದರು.

ಕಾಂಗ್ರೇಸ್ ಬಾವುಟ, ಯೋಗೇಶ್ವರ್, ಡಿ.ಕೆ. ಸಹೋದರರ ಭಾವಚಿತ್ರ ಹಿಡಿದು ತಮಟೆ, ನಗಾರಿ ಬಾರಿಸಿಕೊಂಡು, ಕುಣಿದು ಸಂಭ್ರಮಿಸಿದರು. ಮತ ಎಣಿಕೆ ಆರಂಭದ 6ನೇ ಸುತ್ತಿನ ಮತ ಎಣಿಕೆವರೆಗೂ ಜೆಡಿಎಸ್ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅವರು ಮುನ್ನಡೆ ಕಾಯ್ದುಕೊಂಡಿದ್ದರು. 7ನೇ ಸುತ್ತಿನಲ್ಲಿ ಸಿ.ಪಿ. ಯೋಗೇಶ್ವರ್ ಸುಮಾರು 3,500 ಮತ ಮುನ್ನಡೆ ಪಡೆದುಕೊಳ್ಳುತ್ತಿದ್ದಂತೆ ಆರಂಭವಾದ ಕಾಂಗ್ರೇಸ್ ಕಾರ್ಯಕರ್ತರ ಜೈಕಾರ, ನರ್ತನ ಮತ್ತು ಸಡಗರ ಅಂತಿಮ 20 ಸುತ್ತಿನ ವರೆಗೂ ಮನೆ ಮಾಡಿತು. ಪ್ರತಿ ಸುತ್ತಿನ ಮತ ಎಣಿಕೆಗಳಲ್ಲೂ ಯೋಗೇಶ್ವರ್ ಮುನ್ನಡೆ ಕಾಯ್ದುಕೊಂಡು ಸಾವಿರ ಸಾವಿರ ಮತಗಳನ್ನು ತಮ್ಮ ಖಾತೆಗೆ ಜಮೆ ಮಾಡಿಕೊಳ್ಳುತ್ತಿರುವ ಸುದ್ದಿ ತಿಳಿದು ಕಾರ್ಯಕರ್ತರು ಮತ್ತಷ್ಟು ಕುಣಿದು ಸಂಭ್ರಮಿಸಿದರು.

ಚನ್ನಪಟ್ಟಣ ಅಭಿವೃದ್ಧಿ ಭರವಸೆ ಉಳಿಸಿಕೊಳ್ಳುತ್ತೇವೆ

• ಉದಯವಾಹಿನಿ, ಕನಕಪುರ

ಚನ್ನಪಟ್ಟಣದ ಜನತೆಯ ಆಶೋತ್ತರಗಳನ್ನು

ಅಂತರಾಳದಿಂದ... EDITORIAL

ಬಿಪಿಎಲ್ ಪಡಿತರ ಚೀಟಿ ಪರಿಷ್ಕರಣೆ
ರಾಜ್ಯ ಸರ್ಕಾರ ದೃಢ ನಿಲುವು ತಳೆಯಲಿ

ಬಡತನ ರೇಖೆಗಿಂತ ಕೆಳಗಿರುವ (ಬಿಪಿಎಲ್) ಪಡಿತರ ಚೀಟಿಗಳನ್ನು ಅರ್ಹರಲ್ಲದವರೂ ಪಡೆದುಕೊಂಡಿದ್ದಾರೆ. ಅಂತಹವುಗಳನ್ನು ಗುರುತಿಸಿ, ರದ್ದುಗೊಳಿಸುವ ಕೆಲಸ ಆಗಲೇಬೇಕಾಗಿದೆ. ಸರ್ಕಾರದ ಕಲ್ಯಾಣ ಕಾರ್ಯಕ್ರಮಗಳ ಪ್ರಯೋಜನವು ಅರ್ಹ ಫಲಾನುಭವಿಗಳಿಗೆ ಮಾತ್ರ ತಲುಪುವುದನ್ನು ಖಾತರಿ ಪಡಿಸಿಕೊಳ್ಳುವ ದೃಷ್ಟಿಯಿಂದ ಇದು ಅಗತ್ಯವಾಗಿ ಮಾಡಲೇಬೇಕಾದ ಕೆಲಸ. ನೀತಿ ಆಯೋಗವು ಈ ವರ್ಷದ ಜನವರಿಯಲ್ಲಿ ಬಿಡುಗಡೆ ಮಾಡಿರುವ ವರದಿ ಪ್ರಕಾರ, ಭಾರತದಲ್ಲಿ ಬಹು ಆಯಾಮದ ಬಡತನದ ಪ್ರಮಾಣವು 2022-23ರ ವೇಳೆಗೆ ಶೇಕಡ 11.28ಕ್ಕೆ ಕುಸಿದಿದೆ. ಆದರೆ, ಕರ್ನಾಟಕದ ಶೇ. 85ರಷ್ಟು ಕುಟುಂಬಗಳು ಬಿಪಿಎಲ್ ಪಡಿತರ ಚೀಟಿಗಳನ್ನು ಹೊಂದಿವೆ. ಕರ್ನಾಟಕವು ಈಗ ದಕ್ಷಿಣ ಭಾರತದಲ್ಲಿ ಅತ್ಯಧಿಕ ಬಿಪಿಎಲ್ ಪಡಿತರ ಚೀಟಿಗಳನ್ನು ಹೊಂದಿರುವ ರಾಜ್ಯವಾಗಿದೆ. ದುರ್ಬಲರಿಗಾಗಿ ಜಾರಿಯಲ್ಲಿರುವ ಕಲ್ಯಾಣ ಕಾರ್ಯಕ್ರಮಗಳ ಸೌಲಭ್ಯಗಳನ್ನು ಕೆಲವು ಸರ್ಕಾರಿ ನೌಕರರೂ ಸೇರಿದಂತೆ ಆರ್ಥಿಕವಾಗಿ ಸುಸ್ಥಿತಿಯಲ್ಲಿರುವವರು ಕಬಳಿಸುತ್ತಿದ್ದಾರೆ. ಅರ್ಹರಲ್ಲದವರು ಹೊಂದಿರುವ ಬಿಪಿಎಲ್ ಪಡಿತರ ಚೀಟಿಗಳನ್ನು ರದ್ದು ಮಾಡುವುದು ಸಂಪನ್ಮೂಲದ ಸರಿಯಾದ ಹಂಚಿಕೆಗೆ ಅವಕಾಶ ಕಲ್ಪಿಸುವುದಲ್ಲದೆ ರಾಜ್ಯದ ಬೊಕ್ಕಸದ ಮೇಲಿನ ಹೊರೆಯನ್ನೂ ತಗ್ಗಿಸಲಿದೆ.

ಉದಯವಾಹಿನಿ ಚಿತ್ರ

ಸರಿಯಾದ ನಿಗಾ ವ್ಯವಸ್ಥೆ ಇಲ್ಲದಿರುವುದು ಮತ್ತು ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಅರ್ಹರಲ್ಲದವರು ಈ ಯೋಜನೆಗಳನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಇದು, ಬಡವರಿಗೆ ಅಗತ್ಯವಿರುವ ನೆರವಿನ ನಿರಾಕರಣೆಗೆ ಕಾರಣವಾಗುತ್ತಿದೆ. ಸ್ಥಳೀಯ ಅಧಿಕಾರಿಗಳು ಮತ್ತು ಚುನಾಯಿತ ಪ್ರತಿನಿಧಿಗಳು ಬಿಪಿಎಲ್ ಪಡಿತರ ಚೀಟಿಗಳ ದುರ್ಬಳಕೆಯಲ್ಲಿ ದೊಡ್ಡ ಪ್ರಮಾಣದಲ್ಲಿ ಶಾಮೀಲಾಗಿದ್ದಾರೆ. ಹಲವು ಪ್ರಕರಣಗಳಲ್ಲಿ ಅಧಿಕಾರಿಗಳು ರಾಜಕೀಯ ಒತ್ತಡಕ್ಕೆ ಮಣಿದು, ಅರ್ಹತಾ ಮಾನದಂಡಗಳನ್ನೇ ಉಲ್ಲಂಘಿಸಿ ಅರ್ಹರಲ್ಲದವರಿಗೆ ಬಿಪಿಎಲ್ ಪಡಿತರ ಚೀಟಿಗಳನ್ನು ಮಂಜೂರು ಮಾಡಿರುವ ಉದಾಹರಣೆಗಳಿವೆ. ಬಿಪಿಎಲ್ ಕುಟುಂಬಗಳ ಪಟ್ಟಿಯನ್ನು ತಂತ್ರಜ್ಞಾನದ ನೆರವಿನಿಂದ ನಿಯಮಿತವಾಗಿ ಪರಿಷ್ಕರಿಸದೇ ಇರುವುದು ಕೂಡ ಈ ಸಮಸ್ಯೆ ಜಟಿಲವಾಗಿ ಬೆಳೆಯಲು ಕಾರಣ. ಇದನ್ನು ತಡೆಯಬೇಕಾದರೆ, ಅರ್ಹತಾ ಮಾನದಂಡಗಳ ಉಲ್ಲಂಘನೆಗೆ ಅವಕಾಶವೇ ಇಲ್ಲದಂತಹ ಅತ್ಯಂತ ಬಲಿಷ್ಠವಾದ ಮೇಲುಸ್ತುವಾರಿ ವ್ಯವಸ್ಥೆಯೊಂದನ್ನು ರಾಜ್ಯ ಸರ್ಕಾರ ರೂಪಿಸಬೇಕು. ಬಿಪಿಎಲ್ ಕುಟುಂಬಗಳ ಪಟ್ಟಿಯನ್ನು ನಿರಂತರವಾಗಿ ಪರಿಷ್ಕರಿಸುವ ವ್ಯವಸ್ಥೆ ಇರಬೇಕು. ಅದು, ಪಾರದರ್ಶಕವಾಗಿರಬೇಕು ಮತ್ತು ನಿಯಮಿತವಾಗಿ ಪರಿಶೀಲನೆಗೂ ಒಳಗಾಗಬೇಕು. ಈ ದಿಸೆಯಲ್ಲಿ ಸ್ವತಂತ್ರ ವ್ಯವಸ್ಥೆಯೊಂದನ್ನು ಅಸ್ತಿತ್ವಕ್ಕೆ ತರುವ ಬಗ್ಗೆಯೂ ರಾಜ್ಯ ಸರ್ಕಾರ ಯೋಚಿಸಬೇಕು. ಯಾವ ಅರ್ಹ ಫಲಾನುಭವಿಯೂ ಪಟ್ಟಿಯಿಂದ ಹೊರಗುಳಿಯಬಾರದು ಮತ್ತು ಕಾನೂನಿನ ಅಡಿಯಲ್ಲಿ ಅವರಿಗೆ ಸಿಗಬೇಕಾದ ಸೌಲಭ್ಯಗಳು ಸಿಗಬೇಕು. ಇದನ್ನು ಖಾತರಿಪಡಿಸುವುದೇ ಈ ಪ್ರಕ್ರಿಯೆಯ ಗುರಿಯಾಗಿರಬೇಕು. ಸರ್ಕಾರದ ಯೋಜನೆಗಳ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಮುಕ್ತ ಮತ್ತು ನ್ಯಾಯಸಮ್ಮತ ವ್ಯವಸ್ಥೆಯೊಂದನ್ನು ರೂಪಿಸಲು ಈ ಶುದ್ದೀಕರಣ ಪ್ರಕ್ರಿಯೆಯು ಬಳಕೆಯಾಗಬೇಕು. ರಾಜ್ಯ ಸರ್ಕಾರದ ಬೊಕ್ಕಸದ ಮೇಲೆ ಆಗುತ್ತಿರುವ ಹೊರೆಯನ್ನು ತಪ್ಪಿಸಲು ಹಾಗೂ ಅರ್ಹರಲ್ಲದವರು ಸರ್ಕಾರದ ಯೋಜನೆಗಳ ದುರ್ಲಾಭ ಪಡೆಯುವುದನ್ನು ತಡೆಯಲು ಈ ಹೆಜ್ಜೆ ಅತಿ ಅಗತ್ಯ ಎಂಬುದನ್ನು ಸರ್ಕಾರವು ಜನರಿಗೆ ಮನವರಿಕೆ ಮಾಡಿಕೊಡಬೇಕು. ರಾಜಕೀಯ ಲಾಭಕ್ಕಾಗಿ ಮಾಡುವ ವಿರೋಧವನ್ನು ಲೆಕ್ಕಿಸದೇ ದೃಢವಾದ ನಿಲುವು ತಳೆಯಬೇಕಾದ ಹೊಣೆಗಾರಿಕೆ ಆಡಳಿತ ನಡೆಸುತ್ತಿರುವವರ ಮೇಲಿದೆ. ಬಿಪಿಎಲ್ ಕುಟುಂಬಗಳ ಪಟ್ಟಿ ಪರಿಷ್ಕರಣೆಯು ದೀರ್ಘಕಾಲದಿಂದಲೂ ಕಗ್ಗಂಟಾಗಿಯೇ ಉಳಿದಿದೆ. ಅದಕ್ಕೆ ಅಂತ್ಯ ಹಾಡಲು ಇದು ಸಕಾಲ. ಜೊತೆಗೆ ಈಗಲೂ ಅಂತಹ ಸೌಲಭ್ಯಗಳಿಂದ ದೂರವೇ ಉಳಿದಿರುವ ಅರ್ಹ ಬಡ ಕುಟುಂಬಗಳನ್ನು ಬಿಪಿಎಲ್ ಪಟ್ಟಿಗೆ ಸೇರಿಸಿ ನ್ಯಾಯ ಒದಗಿಸಬೇಕಾದ ಜವಾಬ್ದಾರಿಯೂ ಸರ್ಕಾರದ ಮೇಲಿದೆ. ಈ ದಿಸೆಯಲ್ಲಿ ಭ್ರಷ್ಟಾಚಾರ, ರಾಜಕೀಯ ಹಸ್ತಕ್ಷೇಪ, ಪಕ್ಷಪಾತಕ್ಕೆ ಅವಕಾಶವೇ ಇಲ್ಲದಂತಹ ಕಟ್ಟುನಿಟ್ಟಿನ ಪ್ರಕ್ರಿಯೆಯೊಂದನ್ನು ರೂಪಿಸಿ, ಅನುಷ್ಠಾನಕ್ಕೆ ತಂದರಷ್ಟೇ ಈ ಎಲ್ಲವೂ ಸಾಧ್ಯ.

ಎಸ್‌ಎಸ್‌ಎಲ್‌ಸಿ ಪರೀಕ್ಷೆ ನೋಂದಣಿ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನ ರಹಿತ ಶಾಲೆಗಳಿಂದ ಹಾಜರಾಗುವ, ಖಾಸಗಿ ಮತ್ತು ಪುನರಾವರ್ತಿತ ವಿದ್ಯಾರ್ಥಿಗಳಿಗೆ 2025ರ ಮಾರ್ಚ್‌ನಲ್ಲಿ ನಡೆಯಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1ಕ್ಕೆ ನೋಂದಣಿಯಾಗಲು ನವೆಂಬರ್ 30 ರವರೆಗೆ ಕಾಲಾವಕಾಶ ನೀಡಲಾಗಿದೆ. ರಾಷ್ಟ್ರೀಯ ಜಗತ್ತು ವಾಣಿಜ್ಯ ಕ್ರೀಡೆ ಕರ್ನಾಟಕ ಶಾಲಾ ಪರೀಕ್ಷೆ, ಮೌಲ್ಯ ನಿರ್ಣಯ ಮಂಡಳಿ ಈ ಮೊದಲು ನವೆಂಬರ್ 20 ನೋಂದಣಿಗೆ ಕೊನೆಯ ದಿನಾಂಕ ಎಂದು ಹೇಳಿತ್ತು. ಆದರೆ, ಕೆಲವು ಶಾಲೆಗಳು ಮತ್ತು ಪೋಷಕರಿಂದ ದಿನಾಂಕ ವಿಸ್ತರಣೆಗೆ ಒತ್ತಾಯ ಬರುತ್ತಿರುವ ಹಿನ್ನೆಲೆಯಲ್ಲಿ ನೋಂದಣಿ ದಿನಾಂಕವನ್ನು ವಿಸ್ತರಿಸಲಾಗಿದೆ.

ನ.30ರ ಬಳಿಕ ದಿನಾಂಕ ವಿಸ್ತರಣೆ ಮಾಡುವುದಿಲ್ಲ ಎಂದು ಮಂಡಳಿ ಸ್ಪಷ್ಟಪಡಿಸಿದೆ. ಉಡುಪಿ ಉತ್ತರ ಕನ್ನಡ Learn more eu ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು ನ. 30 ಕೊನೆಯ ದಿನಾಂಕ, ಪರೀಕ್ಷಾ ಶುಲ್ಕದ ಚಲನ್ ಮುದ್ರಿಸಲು ಡಿ.2 ರಿಂದ ಡಿ. 7ರ ವರೆಗೆ, ಚಲನ್ ಬ್ಯಾಂಕ್‌ಗೆ ಜಮೆ ಮಾಡಲು ಡಿ. 2ರಿಂದ ಡಿ.12ರವರೆಗೆ ಸಮಯ ನೀಡಲಾಗಿದೆ.

ರಾಮಾಯಣ
ಭಗೀರಥನು ಗಂಗೆಯನ್ನು ಭೂಮಿಗೆ ತಂದದ್ದು

• ಹಿಂದಿನ ಸಂಚಿಕೆಯಿಂದ **26ನೆಯ ಅಧ್ಯಾಯ**

'' ಆಮೇಲೆ ಭಗೀರಥನು ಅಂಗುಷ್ಠಾಗ್ರದಲ್ಲಿ ಭೂಮಿಯಮೇಲೆ ನಿಂತುಕೊಂಡು ಒಂದು ವರುಷ ಈಶ್ವರನನ್ನು ಕುರಿತು ತಪಸ್ಸನ್ನು ಮಾಡಲು, ಪಾರ್ವತೀರಮಣನಾದ ಪರಮೇಶ್ವರನು ಆತನಿಗೆ ಪ್ರಸನ್ನನಾಗಿ ನಿನ್ನ ತಪಸ್ಸಿನಿಂದ ನಾನು ಸುಪ್ರೀತನಾದೆನು. ನಿನ್ನೆ ಇಷ್ಟಾರ್ಥವನ್ನು ಸಲ್ಲಿಸಿ ಕೊಡುವೆನು'' ಎಂದು ಹೇಳಿದನು. ಭಗೀರಥನು ಆ ಸ್ವಾಮಿಯನ್ನು ಕುರಿತು ಹೇ ಸ್ವಾಮಿ, ಸ್ವರ್ಗಲೋಕದಿಂದ ಅವತರಿಸಿ ಬರುವ ಗಂಗೆಯನ್ನು ನೀನು ಧರಿಸಬೇಕು' ಎಂದು ಬೇಡಿಕೊಂಡನು. ಪರಮೇಶ್ವರನು ಹಿಮವತ್ಪರ್ವತರಾಜನ ಹಿರಿಯ ಕುಮಾರಿಯಾದ ಗಂಗಾದೇವಿಯನ್ನು ಶಿರಸ್ಸಿನಲ್ಲಿ ಧರಿಸುವುದಾಗಿ ನುಡಿದನು. ಆ ಮಾತನ್ನು ಕೇಳಿ ಗಂಗೆಯು ಅನೇಕರೂಪಳಾಗಿ, ಯಾರಿಗೂ ಸಹಿಸಲು ಶಕ್ಯವಲ್ಲದ ವೇಗವುಳ್ಳವಳಾಗಿ, ಸಮಸ್ತಲೋಕಗಳೂ ನಮಸ್ಕರಿಸಲು ಯೋಗ್ಯನಾದ ಪರಮೇಶ್ವರನ ಮಹಿಮೆಯನ್ನು ಅಜ್ಞಾನದಿಂದ ವಿಚಾರಿಸದೆ, ತನ್ನ ಅತಿವೇಗವಾದ ಪ್ರವಾಹದಲ್ಲಿ ಆತನೆನ್ನು ಮುಳುಗಿಸಿ ಪಾತಾಳಲೋಕಕ್ಕೆ ಸೆಳೆದುಕೊಂಡುಹೋಗಬೇಕೆಂದು ರಭಸದಿಂದ ಬರುತ್ತಿದ್ದಳು. ಆಕೆಯ ಹಂಕಾರವನ್ನು ಕಂಡು ಪರಮೇಶ್ವರನು ಅತ್ಯಂತ ಕೋಪಯುಕ್ತನಾಗಿ ಅವಳ ಗರ್ವವನ್ನು ಪರಿಹರಿಸಬೇಕೆಂದು ತನ್ನ ಜಟಾಮಕುಟದಲ್ಲಿ ಗಂಗೆಯನ್ನು ಅಡಕಮಾಡಿಕೊಂಡನು ಆಗ ಗಂಗೆಯು ಹಿಮವತ್ಪರ್ವತಕ್ಕೆ ಸಮಾನವಾಗಿ ಅತಿಪವಿತ್ರವಾದ ಪರಮೇಶ್ವರನ ಜಟಾಮಕುಟದಲ್ಲಿ ಬಿದ್ದು ಭೂಲೋಕದಲ್ಲಿ ಪ್ರವಹಿಸುವುದಕ್ಕೆ ಸಮರ್ಥಳಲ್ಲದೆ ಬಹುಕಾಲಪರ್ಯಂತ ಆ ಜಟಾಮಕುಟ ದಲ್ಲಿಯೇ ಪ್ರವಹಿಸುತ್ತ ಭೂಲೋಕಕ್ಕೆ ಇಳಿಯಲು ದಾರಿಯನ್ನು ಕಾಣದೆ ಇದ್ದಳು. ಭಗೀರಥನು ಅದು ಪರಮೇಶ್ವರನ ಮಾಯೆಯೆಂದು ತಿಳಿದು ಮತ್ತೂ ತಪಸ್ಸು ಮಾಡುತ್ತಿದ್ದನು. ಆ ಬಳಿಕ ಪರಮೇಶ್ವರನು ಭಗೀರಥನಿಗೆ ಪ್ರಸನ್ನನಾಗಿ ತನ್ನ ಜಟಾಮಕುಟದಿಂದ ಗಂಗೆಯನ್ನು ಬಿಟ್ಟನು. ಗಂಗೆಯು ಹಿಮವತ್ಪರ್ವತದಲ್ಲಿರುವ ಬಿಂದುಸರಸ್ಸು ಎಂಬ ಕೊಳದಲ್ಲಿ ಬಿದ್ದು ಅಲ್ಲಿಂದ ಏಳು ಪ್ರವಾಹಗಳಾದಳು. ಅವುಗಳಲ್ಲಿ ಹ್ಲಾದಿನೀ ಪಾವನೀ ನಳಿನೀ ಎಂಬ ಮೂರು ಪ್ರವಾಹಗಳು ಮೂಡಣ ದಿಕ್ಕಿಗೆ ತೆರಳಿದವು. ಸುಚಕ್ಷು ಸೀತಾ ಸಿಂಧು ಎಂಬ ಮೂರು ಪ್ರವಾಹಗಳು ಪಡುವಣ ದಿಕ್ಕಿಗೆ ನಡೆದವು ಏಳನೆಯ ಪ್ರವಾಹವಾದ ಅಲಕನಂದೆಯು ರಾಜರ್ಷಿಯಾದ ಭಗೀರಥನು ಯಾವ ಮಾರ್ಗ ದಲ್ಲಿ ನಡೆದನೋ ಆ ಮಾರ್ಗದಲ್ಲೇ ಅತನ ಬೆನ್ನು ಹಿಡಿದು ನಡೆದಳು. ಈ ಪ್ರಕಾರದಲ್ಲಿ ಗಂಗೆಯು ಸ್ವರ್ಗಲೋಕದಿಂದ ಪರಮೇಶ್ವರನ ಜಟಾಮಕುಟದಲ್ಲಿ ಬಿದ್ದು ಭೂಮಿಗೆ ಇಳಿದು ಮಹತ್ತಾದ ಧ್ವನಿಯೊಡನೆ ಕೂಡಿ ಭೂಮಿಯಲ್ಲಿ ಪ್ರವಹಿಸಿದಳು. ಗಂಗೆಯು ಆಕಾಶದಿಂದ ಬೀಳುವಾಗ ಮತ್ಸ್ಯಗಳು ನೀರಾನೆಗಳು ಮೊದಲಾದ ಜಲಚರಪ್ರಾಣಿಗಳಿಂದ ವಿಶೇಷವಾಗಿ ಒಪ್ಪುತ್ತಿತ್ತು.

ಮುಂದುವರಿಯುವುದು...

ನವ ಪಂಚಮ ಯೋಗ

ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಈ ರಾಶಿಗೆ ಆರ್ಥಿಕ ಲಾಭ ಈ ರಾಷ್ಟ್ರೀಯ ಉತ್ತುಂಗ

ನವೆಂಬರ್ 25 ರಂದು ಚಂದ್ರನು ಕನ್ಯಾರಾಶಿಗೆ ತೆರಳಲಿದ್ದಾನೆ. ಅಲ್ಲದೆ ಈ ದಿನ ಗುರು ಮತ್ತು ಚಂದ್ರನ ನಡುವೆ ನವ ಪಂಚಮ ಯೋಗ ರೂಪುಗೊಳ್ಳುತ್ತಿದೆ. ಅಲ್ಲದೆ ಇಂದು ಮಾರ್ಗಶೀರ್ಷ ಮಾಸದ ಕೃಷ್ಣ ಪಕ್ಷದ ಹತ್ತನೇ ದಿನವಾಗಿದ್ದು, ಈ ದಿನ ನವ ಪಂಚಮ ಯೋಗದೊಂದಿಗೆ ಬುಧಾದಿತ್ಯ ಯೋಗ ಮತ್ತು ಉತ್ತರ ಫಲ್ಗುಣಿ ನಕ್ಷತ್ರದ ಮಂಗಳಕರ ಸಂಯೋಗ ಸಂಭವಿಸುತ್ತದೆ. ಹಾಗಾದರೆ ಇಂದು ಯಾವ ರಾಶಿಯವರಿಗೆ ಅದೃಷ್ಟ ಒಲಿಯಲಿದೆ ಎಂಬುದನ್ನು ತಿಳಿಯೋಣ.

ಮೇಷ ರಾಶಿ: ನವೆಂಬರ್ 25 ಮೇಷ ರಾಶಿಯವರಿಗೆ ಪ್ರಯೋಜನಕಾರಿಯಾಗಲಿದೆ. ಕೆಲಸ ಮಾಡುವವರಿಗೆ ಇಂದು ಬೇರೆ ಯಾವುದಾದರೂ ಕಂಪನಿಯಿಂದ ಉತ್ತಮ ಆಫರ್ ಬರಬಹುದು. ಅದು ಸಂಬಳವನ್ನು ಹೆಚ್ಚಿಸುತ್ತದೆ. ನಿಮ್ಮ ವೃತ್ತಿಯನ್ನು ಬಲಪಡಿಸುತ್ತದೆ. ಮೇಷ ರಾಶಿಯ ಜನರು ಇಂದು ದೈಹಿಕವಾಗಿ ಮೊದಲಿಗಿಂತ ಆರೋಗ್ಯವಾಗಿರುತ್ತಾರೆ. ಸಣ್ಣಪುಟ್ಟ ಸಮಸ್ಯೆಗಳು ದೂರವಾಗುತ್ತವೆ. ನೀವು ಸಂಪೂರ್ಣವಾಗಿ ಆರೋಗ್ಯವಾಗಿರುತ್ತೀರಿ. ನಾಳೆ ನೀವು ಹೊಸ ಹೂಡಿಕೆಯ ಅವಕಾಶಗಳನ್ನು ಪಡೆಯುವ ಸಾಧ್ಯತೆಗಳಿವೆ. ಆದರೆ ನೀವು ಪ್ರತಿ ಹೂಡಿಕೆಯನ್ನು ವಿವರವಾಗಿ ಅಧ್ಯಯನ ಮಾಡಿ ನಂತರವೇ ಹಣವನ್ನು ಹೂಡಿಕೆ ಮಾಡಬೇಕು. ಹಾಗೆ ಮಾಡುವುದರಿಂದ ಉತ್ತಮ ಲಾಭ ಸಿಗುತ್ತದೆ.

ಕರ್ಕಾಟಕ ರಾಶಿ: ನವೆಂಬರ್ 25 ಕರ್ಕಾಟಕ ರಾಶಿಯವರಿಗೆ ಸಂತಸದ ದಿನವಾಗಿರುತ್ತದೆ. ವ್ಯಾಪಾರದ ಖ್ಯಾತಿ ಹೆಚ್ಚಾಗುತ್ತದೆ. ಉದ್ಯೋಗಿಗಳು ಇಂದು ಕೆಲಸದ ಸ್ಥಳದಲ್ಲಿ ಮಾಡಿದ ಕೆಲಸಕ್ಕಾಗಿ ಪ್ರಶಂಸಿಸಲ್ಪಡುತ್ತಾರೆ. ಈ ಕಾರಣದಿಂದಾಗಿ ನಿಮ್ಮ ಶತ್ರುಗಳು ಸಹ ನಿಮ್ಮ ಸ್ನೇಹಿತರಾಗುತ್ತಾರೆ. ನಿಮ್ಮ ಯಾವುದೇ ಪ್ರಮುಖ ಸರ್ಕಾರಿ ಕೆಲಸ ನಿಮ್ಮ ಸಂಬಂಧಿಕರ ಸಹಾಯದಿಂದ ಇಂದು ಪೂರ್ಣಗೊಳಿಸಬಹುದು. ಕರ್ಕಾಟಕ ರಾಶಿಯ ಜನರು ಇಂದುಬೆಳಿಗೆ ಕುಟುಂಬದ ಸದಸ್ಯರಿಂದ ಒಳ್ಳೆಯ ಸುದ್ದಿಯನ್ನು ಪಡೆಯುವ ಸಾಧ್ಯತೆಯಿದೆ. ಈ ಕಾರಣದಿಂದಾಗಿ ನೀವು ತುಂಬಾ ಸಂತೋಷವಾಗಿರುತ್ತೀರಿ. ಕುಟುಂಬದಲ್ಲಿಯೂ ಉತ್ಸಾಹದ ವಾತಾವರಣವಿರುತ್ತದೆ. ಕೋರ್ಟ್ ಕೇಸ್ ಗಳಲ್ಲಿ ಸಿಕ್ಕಿ ಹಾಕಿಕೊಂಡರೆ ನಾಳೆ ಕೇಸ್ ನಿಮ್ಮ ಪರವಾಗಿ ತಿರುಗುವ ಸಂಭವವಿದ್ದು ನಿಮಗೂ ಸಮಾಧಾನ ಸಿಗುತ್ತದೆ.

ಕನ್ಯಾ ರಾಶಿ: ನವೆಂಬರ್ 25 ಕನ್ಯಾ ರಾಶಿಯವರಿಗೆ ಪೂರ್ಣ ಪ್ರಗತಿಯ ದಿನವಾಗಿರುತ್ತದೆ. ವ್ಯಾಪಾರಸ್ಥರು ನಾಳೆ ಹೆಚ್ಚಿನ ಲಾಭವನ್ನು ಗಳಿಸುವಲ್ಲಿ ಯಶಸ್ವಿಯಾಗುತ್ತಾರೆ. ಉದ್ಯೋಗದಲ್ಲಿರುವವರು ಇಂದು ಅಧಿಕಾರಿಗಳು, ಸಹೋದ್ಯೋಗಿಗಳಿಂದ ಬೆಂಬಲವನ್ನು ಪಡೆಯುತ್ತಾರೆ. ಇದು ಹೊಸ ಯೋಜನೆಗಳಲ್ಲಿ ಕೆಲಸ ಮಾಡಲು ಅವಕಾಶವನ್ನು ನೀಡುತ್ತದೆ. ಕುಟುಂಬದಲ್ಲಿ ಧಾರ್ಮಿಕ ಕಾರ್ಯಕ್ರಮವನ್ನು ಆಯೋಜಿಸುವ ಬಗ್ಗೆ ನೀವು ಕುಟುಂಬದ ಎಲ್ಲಾ ಸದಸ್ಯರೊಂದಿಗೆ ಚರ್ಚಿಸಬಹುದು. ನಾಳೆ ಮಹಾದೇವನ ಕೃಪೆಯಿಂದ ಕನ್ಯಾ ರಾಶಿಯವರಿಗೆ ಹಲವು ಇಷ್ಟಾರ್ಥಗಳು ನೆರವೇರಲಿದ್ದು, ಧನ ಪ್ರಾಪ್ತಿಯಾಗುವ ಸಂಭವವಿದೆ. ಇದರಿಂದ ಆರ್ಥಿಕ ಸ್ಥಿತಿ ಸುಧಾರಿಸುತ್ತದೆ. ಸ್ವಂತ ಮನೆ ಕನಸು ನಾಳೆ ನನಸಾಗಬಹುದು.

ವೃಶ್ಚಿಕ ರಾಶಿ: ನವೆಂಬರ್ 25 ವೃಶ್ಚಿಕ ರಾಶಿಯವರಿಗೆ ಧನಾತ್ಮಕ ಫಲಿತಾಂಶಗಳನ್ನು ತರುತ್ತದೆ. ಹೊಸ ಉದ್ಯಮವನ್ನು ಪ್ರಾರಂಭಿಸಲು ಬಯಸಿದರೆ, ನೀವು ಅದನ್ನು ಮಹಾದೇವನ ಹೆಸರಿನಲ್ಲಿ ನಾಳೆ ಪ್ರಾರಂಭಿಸಬಹುದು. ಅದು ನಿಮಗೆ ಉತ್ತಮ ಲಾಭವನ್ನು ನೀಡುತ್ತದೆ. ಉದ್ಯೋಗದ ನಿರೀಕ್ಷೆಯಲ್ಲಿರುವ ಯುವಕರ ಕಾಯುವಿಕೆ ಕೊನೆಗೊಳ್ಳುವ ಲಕ್ಷಣಗಳಿವೆ.

ಇಂದು ನಿಮ್ಮ ವೃತ್ತಿಜೀವನವನ್ನು ಪ್ರಾರಂಭಿಸಲು ನಿಮಗೆ ಅವಕಾಶ ಸಿಗುತ್ತದೆ. ವೃಶ್ಚಿಕ ರಾಶಿಯವರು ನಾಳೆ ತಮ್ಮ ವ್ಯಕ್ತಿತ್ವ ವಿಕಸನ ಹೊಂದಲಿದ್ದು, ಮಹಾದೇವನ ಕೃಪೆಯಿಂದ ಸಿಕ್ಕಿಬಿದ್ದ ಹಣ ಸಿಗುವ ಸಾಧ್ಯತೆಗಳಿವೆ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸುತ್ತಿರುವ ವಿದ್ಯಾರ್ಥಿಗಳ ಏಕಾಗ್ರತೆ ಹೆಚ್ಚಾಗುತ್ತದೆ. ಇದರಿಂದಾಗಿ ಅವರು ಅಧ್ಯಯನದ ಮೇಲೆ ಕೇಂದ್ರೀಕರಿಸುತ್ತಾರೆ. ಅವರ ಶಿಕ್ಷಕರ ಬೆಂಬಲವನ್ನು ಸಹ ಪಡೆಯುತ್ತಾರೆ.

ಕುಂಭ ರಾಶಿ: ಕುಂಭ ರಾಶಿಯವರಿಗೆ ನವೆಂಬರ್ 25 ಇತರ ದಿನಗಳಿಗಿಂತ ಉತ್ತಮ ದಿನವಾಗಿರುತ್ತದೆ. ಸಮಾಜದಲ್ಲಿ ನಿಮ್ಮ ಗೌರವ ಹೆಚ್ಚಾಗುತ್ತದೆ. ನಾಳೆ ನೀವು ಮಾಡಿದ ಕೆಲಸವನ್ನು ಪ್ರಶಂಸಿಸಲಾಗುತ್ತದೆ. ಕೆಲವು ಹೊಸ ಸಾರ್ವಜನಿಕ ಸಭೆಗಳನ್ನು ನಡೆಸಲು ನಿಮಗೆ ಅವಕಾಶ ಸಿಗುತ್ತದೆ. ಆರ್ಥಿಕ ಸ್ಥಿತಿಯನ್ನು ಬಲಪಡಿಸುವ ಅವಕಾಶವನ್ನು ಪಡೆಯುವಿರಿ. ಶಿಕ್ಷಣಕ್ಕಾಗಿ ವಿದೇಶಕ್ಕೆ ಹೋಗಲು ಬಯಸುವವರಿಗೆ ಕೆಲವು ಉತ್ತಮ ಅವಕಾಶಗಳು ಸಿಗುತ್ತವೆ. ನಿಮ್ಮ ಹಿರಿಯರ ಆಶೀರ್ವಾದ ಮತ್ತು ಕಠಿಣ ಪರಿಶ್ರಮದಿಂದ ನೀವು ಬಹಳ ದಿನಗಳಿಂದ ಬಯಸುತ್ತಿರುವ ಕೆಲವು ಬೆಲೆಬಾಳುವ ವಸ್ತು ಅಥವಾ ಆಸ್ತಿಯನ್ನು ನಾಳೆ ನೀವು ಪಡೆಯುತ್ತೀರಿ.

ದಿನಕ್ಕೊಂದು ಮುಕ್ತಕ -33

ಹೆಚ್.ಎಸ್. ಪ್ರತಿಮಾ
• ಉದಯವಾಹಿನಿ ವಿಶೇಷ

ಯುವ ಪೀಳಿಗೆ ಮಾರುಹೋಗೆ
ಸಂಸ್ಕೃತಿ ಮರೆತು
ಸವೆಯುತಿಹ ಹೀರಿಜೀವ ಉಳಿಸಲಿಕ್ಕೆ
ಸರಿಯಾಗಿ ಉಳಿಯುವುದೇ ಸಂಬಂಧ ಹೇಳುತಲಿ
ನವಿರಾಗಿ ಉಳಿಸಬಂದು ಲಕ್ಷ್ಮಿದೇವಿ.....

ಈ ಮೇಲಿನ ಮುಕ್ತಕದಂತೆ ನಮ್ಮ ಸಂಸ್ಕೃತಿಯಲ್ಲಿ ಯುವ ಪೀಳಿಗೆಯು ಇತರ ಸಂಸ್ಕೃತಿಗೆ ಮಾರುಹೋಗುತ್ತಿದೆ. ಅದನ್ನು ಉಳಿಸುವುದಕ್ಕಾಗಿ ಹಿರಿಯರು ತಮ್ಮ ಜೀವನವನ್ನು ಮುಡಿಪಾಗಿಟ್ಟರೂ ಸಹ ಯಾರು ಅದನ್ನು ಅರ್ಥಮಾಡಿಕೊಳ್ಳುವ ಮನೋಭಾವದವರಿಲ್ಲ.ಇದೇ ರೀತಿ ನಡೆದುಕೊಂಡು ಹೋದರೆ ಮುಂದೆ ಸಂಸ್ಕೃತಿಯ ಪಾಡೇನು ? ಎಂಬುದನ್ನು ಯೋಚಿಸುತ್ತಿದ್ದರೆ ಎದರಿಕೆ

ಪುರಸಭೆ ವ್ಯಾಪ್ತಿ 1.60ಕೋಟಿ ರೂ.ವಿವಿಧ ಕಾಮಗಾರಿಗಳ ಶಂಕುಸ್ಥಾಪನೆ

ಪೌರಕಾರ್ಮಿಕರು ತಮ್ಮ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಿ ಐಎಎಸ್,ಐಪಿಎಸ್ ಮಾಡಿ: ಅಧ್ಯಕ್ಷ ಆನಂದ ಟೈಗರ್

• ಉದಯವಾಹಿನಿ, ಚಿಂಚೋಳಿ

ಉದಯವಾಹಿನಿ ಚಿತ್ರ

ಪಟ್ಟಣದ ಪುರಸಭೆಯ ವ್ಯಾಪ್ತಿಯಲ್ಲಿ ಪುರಸಭೆ ಸದಸ್ಯರ ನಿರ್ದೇಶನದಂತೆ 1.60ಕೋಟಿ ರೂ.ವಿವಿಧ ಕಾಮಗಾರಿಗಳು ಮಾಡಲಾಗುತ್ತಿದೆ ಎಂದು ಪುರಸಭೆ ಅಧ್ಯಕ್ಷ ಆನಂದಕುಮಾರ ಟೈಗರ್ ಹೇಳಿದರು.

ಪಟ್ಟಣದ ನೂತನ ತಹಶೀಲ್ ಆವರಣದಲ್ಲಿ ಪುರಸಭೆ ವ್ಯಾಪ್ತಿ 2022-23ನೇ ಸಾಲಿನ ಎಸ್.ಬಿ.ಎಮ್.-2.00ರಲ್ಲಿ ಶೌಚಾಲಯ ನಿರ್ಮಾಣ, ಶೇಡ್ ನಿರ್ಮಾಣ ಮತ್ತು 2023-24ನೇ ಸಾಲಿನ 15ನೇ ಹಣಕಾಸು ಯೋಜನೆಯಡಿಯಲ್ಲಿ 1.60ಕೋಟಿಯ ಶಂಕುಸ್ಥಾಪನೆ ನೆರವೇರಿಸಿ ಮತ್ತು ಪುರಸಭೆ ಕಾರ್ಯಾಲಯದಲ್ಲಿ ಹಮ್ಮಿಕೊಂಡ ಪೌರಕಾರ್ಮಿಕರ ದಿನಾಚರಣೆ ಅಂಗವಾಗಿ ಪೌರಕಾರ್ಮಿಕರಿಗೆ ಸನ್ಮಾನಿಸಿ ಸರ್ಕಾರದಿಂದ ಬಂದ ಗೌರವಧನ ಚೆಕ್ ವಿತರಿಸಿ ಮಾತನಾಡಿದ ಅವರು,2009ರಲ್ಲಿ ಅ.2ರಂದು ಕಾಂಗ್ರೇಸ್ ಸರ್ಕಾರ ಇದ್ದಾಗ ಜಾರಿಗೆ ತಂದಾಗ ಶೌಚಾಲಯ ನಿರ್ಮಾಣ ಯೋಜನೆಯನ್ನು ಬಿಜೆಪಿ ಕೇಂದ್ರ ಸರ್ಕಾರ ಶೌಚಾಲಯ ಮುಕ್ತ ಭಾರತವೆಂದು ಯೋಜನೆ ಜಾರಿಗೆ ತರಲಾಯಿತು.

ಪುರಸಭೆ ಸಂಪೂರ್ಣ ವ್ಯಾಪ್ತಿ ಅಭಿವೃದ್ಧಿಗೆ ಬದ್ಧನಾಗಿದ್ದೇನೆ ಜಿಲ್ಲೆಯ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ,ಪೌರಾಡಳಿತ ಸಚಿವ ರಹೀಂ ಖಾನ್ ಮನವೋಲಿಸಿ ಅನುದಾನ ತಂದು ಅಭಿವೃದ್ಧಿ ಮಾಡಲಾಗುವುದು. ಪೌರಕಾರ್ಮಿಕರು ತಮ್ಮ ಆರೋಗ್ಯ ಲೆಕ್ಕಿಸದೆ ಸಾರ್ವಜನಿಕರಿಗೆ ಆರೋಗ್ಯ ನೀಡುತ್ತೀರಿ ಚಳಿ ಮಳೆಗಾಳಿ ಎನ್ನದೆ ಜನರಿಗೆ ಆರೋಗ್ಯ ರಕ್ಷಣೆ ನೀಡುತ್ತೀರಿ,ನಿಮಗೆ ರಕ್ಷಣೆ ಮಾಡುವ ಕೆಲಸ ನಮ್ಮದ್ದಾಗಿದೆ,ಸ್ವಚ್ಛತೆ ಕಾರ್ಯನಿರ್ವಹಿಸುತ್ತಿರುವುದರಿಂದ ಪಟ್ಟಣದಲ್ಲಿ ಎಲ್ಲೋರು ಆರೋಗ್ಯಕರವಾಗಿರುತ್ತಾರೆ. ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ,ಆರೋಗ್ಯ ಕಿಟ್,ಶೂ,ಸರ್ಕಾರದಿಂದಲ್ಲೇ ನಿಡಲಾಗುತ್ತದೆ,ತಮ್ಮ ಮಕ್ಕಳಿಗೆ ಉತ್ತಮ ಭವಿಷ್ಯ ನಿರ್ಮಾಣ ಮಾಡಲು ಗುಣಮಟ್ಟದ ಶಿಕ್ಷಣ ನೀಡಲೇಬೇಕು.

ಮಕ್ಕಳಿಗೆ ಉತ್ತಮ ಭವಿಷ್ಯ ನಿರ್ಮಾಣ

ಪೌರಕಾರ್ಮಿಕರು ಗೌರವ ಬದುಕು ರೂಪಿಸಿಕೊಳ್ಳಲು ಸರ್ಕಾರ ಅನೇಕ ಯೋಜನೆಗಳು ರೂಪಿಸಿವೆ ಅದನ್ನು ಸದುಪಯೋಗ ಪಡೆದುಕೊಳ್ಳಬೇಕು.

ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ಮಾತನಾಡಿದ ಅವರು,ಪಟ್ಟಣದ್ಯಂತ ಪೌರಕಾರ್ಮಿಕರು ಸ್ವಚ್ಛತೆ ಮಾಡಿ ಜನರಿಗೆ ಉತ್ತಮ ಆರೋಗ್ಯ ನೀಡುತ್ತೀರಿ,ಇನ್ನೋಂದೆಡೆ ತಾವು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು. ಮನೆಯ ಕುಟುಂಬಗಳು ಚನ್ನಾಗಿ ಸಾಗಲು ಮಹಿಳೆಯರೆ ಕಾರಣಿಭೂತರುತ್ತಾರೆ,ಅವರ ದುಡಿಮೆಯ ಹಣ ಅತ್ಯಂತ ಮಹತ್ವದಾಗಿದೆ,ಪೌರಕಾರ್ಮಿಕರು ಆರೋಗ್ಯ ಕಡೆ ಹೆಚ್ಚಿನ ಗಮನ ಕೊಡಬೇಕು,ತಾವು ಆರೋಗ್ಯಕರವಾಗಿದರೆ ಪಟ್ಟಣ ಕೂಡ ಆರೋಗ್ಯಕರವಾಗಿರುತ್ತದೆ. ಪೌರಕಾರ್ಮಿಕರ ಕಷ್ಟದುಃಖದಲ್ಲಿ ಎಲ್ಲೋರು ಜೋತೆಯಲ್ಲಿದ್ದೆವೆ. ಸರ್ಕಾರಿ ನೌಕರರಿಗೆ ಬೋನಸ್ ಇಲ್ಲ ಆದರೆ ಸರ್ಕಾರ ಪೌರಕಾರ್ಮಿಕರಿಗೆ 7000ರೂ.ಬೋನಸ್ ನೀಡುತ್ತಿದೆ ಹಣ ವ್ಯರ್ಥಗೋಳಿಸದೆ ಒಳ್ಳೆಯ ಕಾರ್ಯಕ್ಕೆ ಉಪಯೋಗಿಸಿಕೊಳ್ಳಬೇಕು. ನಾನು ಹೇಳಿದೆ ಪುರಸಭೆಯಲ್ಲಿ ಅನುದಾನ ಬಂದಿದ್ದರೆ ತಹಸೀಲ್ ಆವರಣದಲ್ಲಿ ನೂತನ ಶೌಚಾಲಯ ನಿರ್ಮಿಸಿ ಕೊಡಿವೆಂದು ಹೇಳಿದೆ ಅದರಂತೆ ಅನುದಾನ ಬಂದಕ್ಷಣ ಶೌಚಾಲಯ ನಿರ್ಮಿಸಲು ಮುಂದಾಗಿರುವುದು ಸಂತೋಷ ನೀಡಿದೆ ಎಂದರು. ಮುಖ್ಯಾಧಿಕಾರಿ ಕಾಶಿನಾಥ ಧನ್ನಿ,ಪುರಸಭೆ ಉಪಾಧ್ಯಕ್ಷ ಸುಲ್ತಾನಬೇಗಂ ಖಲೀಲ್ ಪಟೇಲ, ಅಬ್ದುಲ್ ಬಾಷೀದ್, ಅನ್ವರ್ ಖತೀಬ್,ನಾಗೇಂದ್ರಪ್ಪ ಗುರಂಪಳ್ಳಿ,ರಾಜು ಪವ್ಹಾರ,ಶಶಿಧರ ಕಳಸ್ಕರ್,ಶಬ್ಬೀರ ಅಹೇಮದ್,ಲಕ್ಷ್ಮಿಕಾಂತ ಸುಂಕದ,ಸತೀಶಕುಮಾರ, ಶ್ರೀಕಾಂತ,ಸುಮಂತ್,ಶರಣಪ್ಪ,ಸಮೂದಾಯ ಸಂಘಟನಾ ಅಧಿಕಾರಿಗಳು ಸರೋಜಾ ಪಾಟೀಲ,ಜೆಇ ದೇವೀಂದ್ರಪ್ಪಾ ಕೋರವಾರ,ಆನಂದ ಕಾಂಬ್ಳೆ,ಜಗನ್ನಾಥ ಕಟ್ಟಿ,ಗುಂಡಪ್ಪಾ ಪೂಜಾರಿ,ಮಹಾನಂದಾ,ಕಾಂಚನಾ, ಅಂಬರಾಯ ಅನೇಕರಿದ್ದರು.

> ಪೌರಕಾರ್ಮಿಕರು ತಮ್ಮ ಆರೋಗ್ಯ ಲೆಕ್ಕಿಸದೆ ಜನರ ಆರೋಗ್ಯ ಸುರಕ್ಷಿತವಾಗಿಡಲು ಹಗಲಿರುಳು ದುಡಿಯುತ್ತಾರೆ,ಅವರು ಮಾಡುವ ಕೆಲಸದಿಂದ ಸದಸ್ಯರ ಅಧ್ಯಕ್ಷರ ಮರ್ಯಾದೆಯಿದೆ,ನಿಮ್ಮ ಯಾವುದೇ ಕೆಲಸವಿದ್ದಲ್ಲಿ ಹೇಳಿ ತಕ್ಷಣ ಮಾಡುತ್ತೇವೆ,ಪೌರಕಾರ್ಮಿಕರು ಸಮಯಕ್ಕೆ ಕೆಲಸಕ್ಕೆ ಆಗಮಿಸಿ ಕೆಲಸ ಮಾಡಲು ಮನವಿ ಮಾಡುತ್ತೇನೆ,ಪೌರಕಾರ್ಮಿಕರು ಸಹ ತಮ್ಮ ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಉನ್ನತಮಟ್ಟದ ಐಪಿಎಸ್,ಐಎಎಸ್ ಅಧಿಕಾರಿ ತಹಸೀಲ್ದಾರ್ ಮಾಡಿ,ಮಕ್ಕಳಿಗೆ ಒಳ್ಳೆಯ ಭವಿಷ್ಯ ಸಿಗುತ್ತದೆ. ಒಳ್ಳೆಯ ಕೆಲಸ ಮಾಡಿದರೆ ನಮ್ಮೆಲ್ಲರ ಮರ್ಯಾದೆ ಜೋತೆ ಉನ್ನತಮಟ್ಟದಲ್ಲಿ ಹೆಸರಾಗುತ್ತದೆ **- ಅಬ್ದುಲ್ ಬಾಷೀದ್,** ಪುರಸಭೆ ಸದಸ್ಯರು ಚಿಂಚೋಳಿ.

> ಸರ್ಕಾರದಿಂದ ಗೃಹಭಾಗ್ಯ ಯೋಜನೆಯಲ್ಲಿ ಪೌರಕಾರ್ಮಿಕರಿಗೆ ಮನೆಗಳು,ಗೌರವಧನ ಈಗಾಗಲೇ ಸರ್ಕಾರ 7ಸಾವಿರ ನೀಡಲಾಗಿದೆ. ನೂತನ ತಹಶೀಲ್ ಕಛೇರಿಯಲ್ಲಿ ಶೌಚಾಲಯ ನಿರ್ಮಾಣ ಮಾಡುವುದು,ಅಭಿವೃದ್ಧಿಗಾಗಿ ಎಲ್ಲೋರ ಸಹಕಾರ ಅಗತ್ಯವಿದೆ,ತಮ್ಮ ತಮ್ಮ ವಾರ್ಡಗಳಲ್ಲಿ ಮೂಲಭೂತ ಸಮಸ್ಯೆಗಳ ಬಗ್ಗೆ ಪಟ್ಟಿ ಮಾಡಿಕೊಂಡು ಸಾಮಾನ್ಯ ಸಭೆಯಲ್ಲಿ ಅಥವಾ ಅನುದಾನ ಮೀಸಲಿದ್ದಾಗ ಕೆಲಸಗಳು ಇಟ್ಟಿಕೊಳ್ಳಬೇಕು **- ಆನಂದ ಟೈಗರ್,**ಪುರಸಭೆ ಅಧ್ಯಕ್ಷ

ಉಪ ಚುನಾವಣೆ ಶಾಂತಿಯುತ ಮತದಾನ, 26 ರಂದು ಮತ ಎಣಿಕೆ: ತಹಶೀಲ್ದಾರ್

• ಉದಯವಾಹಿನಿ, ಸಿಂಧನೂರು

ಉದಯವಾಹಿನಿ ಚಿತ್ರ

ತಾಲ್ಲೂಕಿನಲ್ಲಿ ವಿವಿಧ ಕಾರಣಗಳಿಂದ ತೆರವಾದ ಸ್ಥಾನಗಳಿಗೆ ನಗರ ಮತ್ತು ಗ್ರಾಮ ಪಂಚಾಯತಿಗಳಿಗೆ ಉಪ ಚುನಾವಣೆಗಳು ಜರುಗಿದ್ದು ನಗರದಲ್ಲಿ ಶೇ.61.19, ಸಾಲಗುಂದಾ ಗ್ರಾ,ಪಂನಲ್ಲಿ ಶೇ.64.86 ಮತ್ತು ಗಾಂಧಿನಗರದಲ್ಲಿ ಶೇ.64.15ರಷ್ಟು ಶಾಂತಿಯುತ ಮತದಾನವಾಗಿದೆ ಎಂದು ತಹಶೀಲ್ದಾರರು ಹಾಗೂ ತಾಲೂಕಾ ದಂಡಾಧಿಕಾರಿಗಳಾದ ಅರುಣ ಹೆಚ್. ದೇಸಾಯಿ ತಿಳಿಸಿದರು.

ನಂತರ ಪತ್ರಿಕೆಯೊಂದಿಗೆ ಮಾತನಾಡಿದ ಅವರು ವಿವಿಧ ಕಾರಣಗಳಿಂದ ತೆರವಾದ ಸ್ಥಾನಗಳಿಗೆ ಹೊಸ ಸದಸ್ಯರ ಆಯ್ಕೆಗಾಗಿ ಉಪ ಚುನಾವಣೆ ನಡೆದಿದ್ದು, ನಗರದ ಜಿಲ್ಲಾ ಪಂಚಾಯತಿ ಸಿಂಧನೂರು ನಗರದ ವಾರ್ಡ್ ನಂ-6ರಲ್ಲಿ ಒಟ್ಟು 2108 ಮತದಾರರಿದ್ದು, 1033-ಪುರುಷ ಮತದಾರರು, 1075-ಮಹಿಳಾ ಮತದಾರರ ಪೈಕಿ 664 ಪುರುಷ ಮತದಾರರು, 626-ಮಹಿಳಾ ಮತದಾರರು ಸೇರಿ ಒಟ್ಟು-1290 ಮತ ಗಳನ್ನು ದಾಖಲಿಸಿ, ಶೇ.61.19ರಷ್ಟು ಮತದಾನವಾಗಿದೆ. ಎಂದು ನಗರಸಭೆ ಚುನಾವಣಾಧಿಕಾರಿ ವೀರೇಶ ಗೋನವಾರ ಹೇಳಿದರು.

ಹೊಸ ಸದಸ್ಯರ ಆಯ್ಕೆಗಾಗಿ ಉಪ ಚುನಾವಣೆ

ಇನ್ನು ಗಾಂಧಿನಗರ ಗ್ರಾಮ ಪಂಚಾಯತಿಯಲ್ಲಿ ಒಟ್ಟು 1102 ಮತದಾರರಿದ್ದು, 530-ಪುರುಷ ಮತದಾರರು, 572-ಮಹಿಳಾ ಮತದಾರರ ಪೈಕಿ 338-ಪುರುಷ ಮತದಾರರು, 369-ಮಹಿಳಾ ಮತದಾರರು ಸೇರಿ ಒಟ್ಟು-707 ಮತಗಳನ್ನು ದಾಖಲಿಸಿ, ಶೇ. 64.15ರಷ್ಟು ಮತದಾನವಾಗಿದೆ.

ಅದೇ ರೀತಿ ಸಾಲಗುಂದಾ ಗ್ರಾಮ ಪಂಚಾಯತಿಯಲ್ಲಿ ಒಟ್ಟು 1068 ಮತದಾರರಿದ್ದು, 493-ಪುರುಷ ಮತದಾರರು, 575-ಮಹಿಳಾ ಮತದಾರರ ಪೈಕಿ 339-ಪುರುಷ ಮತದಾರರು, 354-ಮಹಿಳಾ ಮತದಾರರು ಸೇರಿ ಒಟ್ಟು-693 ಮತಗಳನ್ನು ದಾಖಲಿಸಿ, ಶೇ.64.88ರಷ್ಟು ಮತದಾನವಾಗಿದೆ.

ಶಾಂತಿಯುತ ಮತದಾನ: ಬೆಳಿಗ್ಗೆ 7.00ರಿಂದ ಆರಂಭವಾದ ಮತದಾನ ಸಾಯಂಕಾಲ 5.00ರವರೆಗೆ ಎಲ್ಲಾ ಮಗಟ್ಟೆಗಗಳಲ್ಲಿ ಶಾಂತಿಯುತವಾಗಿ ಮತದಾನ ನಡೆಯಿತು.

ಮತ ಎಣಿಕೆ : ಇಂದು ಸಂಜೆ ಟ್ರಜರಿ ಸ್ಟಾಂಗ್ ರೂಮಿನಲ್ಲಿ ದಾಖಲಿಸಿದ ಮತ ಯಂತ್ರಗಳು ಮತ್ತು ಮತ ಪಟ್ಟಿಗೆಗಳನ್ನು ಇಟ್ಟಿದ್ದು, ಖಜಾನೆ ಇಲಾಖೆಯ ಸುಪರ್ಧಿಗೆ ವಹಿಸಲಾಗಿದೆ. ಇದೇ ನವೆಂಬರ್-26ರಂದು ಮಂಗಳವಾರ ಬೆಳಿಗ್ಗೆ 8.00 ಗಂಟೆಯಿಂದ ತಹಶೀಲ್ದಾರರ ಕಛೇರಿಯಲ್ಲಿ ಮತ ಎಣಿಕೆ ಕಾರ್ಯ ನಡೆಯುತ್ತದೆ.

ಎಂದು ಚುನಾವಣಾಧಿಕಾರಿಗಳಾದ ದುರ್ಗಾ ಪ್ರಸಾದ, ವಿರುಪಣ್ಣ, ಸಹಾಯಕ ಚುನಾವಣಾಧಿಕಾರಿ ರಾಮದಾಸ ನಾಯ್ಕ ತಿಳಿಸಿದರು.

ವ್ಯಕ್ತಿಗತ ದಾಳಿಯ ಹಿಂದೆ ವಿಜಯೇಂದ್ರ ಬೆಂಬಲಿತ ಟ್ರೋಲ್ ಪಡೆ ಕೆಲಸ ಮಾಡುತ್ತಿದೆ: ಮಧು ಬಂಗಾರಪ್ಪ

• ಉದಯವಾಹಿನಿ, ಶಿವಮೊಗ್ಗ

> ಈ ಸಮಸ್ಯೆ ನಿವಾರಿಸಲು ಅಗತ್ಯವಿರುವ ಕಡೆ ಗ್ರಾಮ ಪಂಚಾಯಿತಿ ನೆರವಿನೊಂದಿಗೆ ಮೊಟ್ಟೆ ವಿತರಣೆ ಕೆಲಸವನ್ನು ಹೊರಗುತ್ತಿಗೆಗೆ ನೀಡುವ ಚಿಂತನೆಯೂ ನಡೆದಿದೆ **-ಮಧು ಬಂಗಾರಪ್ಪ**

ನನಗೆ ಕನ್ನಡ ಮಾತನಾಡಲು ಬರುವುದಿಲ್ಲ ಎಂದು ಸಾಮಾಜಿಕ ಜಾಲತಾಣಗಳಲ್ಲಿ ಅಪಪ್ರಚಾರ ಮಾಡಲಾಗುತ್ತಿದೆ. ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಪ್ರಾಯೋಜಿತ ಟ್ರೋಲ್ ಪಡೆ ಇದರ ಹಿಂದೆ ಕೆಲಸ ಮಾಡುತ್ತಿದೆ' ಎಂದು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಆರೋಪಿಸಿದರು.

ಹಿಂಬಾಗಿಲ ಮೂಲಕ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷರಾಗಿರುವ ವಿಜಯೇಂದ್ರ, ಹಣದ ದರ್ಪದಿಂದ ಈ ರೀತಿ ವರ್ತಿಸುತ್ತಿದ್ದಾರೆ. ಬೆಂಗಳೂರು ಗ್ರಾಮಾಂತರ ಖಾಸಗಿಯಾಗಿ ಟ್ರೋಲ್ ಪಡೆ ಇಟ್ಟುಕೊಂಡು ಸಾಮಾಜಿಕ ಜಾಲತಾಣಗಳಲ್ಲಿ ವ್ಯಕ್ತಿಗತವಾಗಿ ದಾಳಿ ಮಾಡಿಸುತ್ತಿದ್ದಾರೆ. ಯಾವ ವಿಳಾಸದಿಂದ ನನ್ನ ವಿರುದ್ಧ ಟ್ರೋಲ್ ಮಾಡಿಸಲಾಗುತ್ತಿದೆ ಎಂಬ ಮಾಹಿತಿಯನ್ನು ಕಲೆಹಾಕಿದ್ದೇನೆ. ಅಗತ್ಯ ಬಿದ್ದಾಗ ದಾಖಲೆ ಬಹಿರಂಗಗೊಳಿಸುತ್ತೇನೆ' ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. 'ಸಿಇಟಿ ಪರೀಕ್ಷೆಗಾಗಿ ಇಲಾಖೆಯಿಂದ ಪ್ರಸಕ್ತ ವರ್ಷದಿಂದ 25,000 ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗುತ್ತಿದೆ. ತರಬೇತಿಯಿಂದ ತಮಗೆ ಆಗಿರುವ ಅನುಕೂಲಕ್ಕಾಗಿ ಮುಖ್ಯಮಂತ್ರಿ ಹಾಗೂ ನನಗೆ ವಿದ್ಯಾರ್ಥಿಗಳು ಕಾರ್ಯಕ್ರಮವೊಂದರಲ್ಲಿ ಧನ್ಯವಾದ ಹೇಳಿದರು. ಆ ವಿಚಾರ ಬಿಟ್ಟು ಬೇರೆ ಏನನ್ನೋ ಟ್ರೋಲ್ ಮಾಡಲಾಯಿತು' ಎಂದು ಕಿಡಿಕಾರಿದರು.

ಮೊಟ್ಟೆ ಬೆಲೆ ದುಬಾರಿ ಆಗಿದೆ. ಸರ್ಕಾರ ಕೊಡುತ್ತಿರುವ ಹಣ ಸಾಕಾಗುತ್ತಿಲ್ಲ ಮೊಟ್ಟೆ ವಿತರಣೆ ಕೆಲಸದಿಂದಾಗಿ ಶಿಕ್ಷಕರ ದೈನಂದಿನ ಕರ್ತವ್ಯಕ್ಕೆ ಅಡಚಣೆಯಾಗುತ್ತಿದೆ ಎಂಬ ಆರೋಪಗಳು ಕೇಳಿಬಂದಿವೆ.

ಕುಕ್ಕೆ ದೇವಸ್ಥಾನದ ಸೇವೆಗಳಲ್ಲಿ ವ್ಯತ್ಯಯ

• ಉದಯವಾಹಿನಿ, ಸುಬ್ರಹ್ಮಣ್ಯ


ಉದಯವಾಹಿನಿ ಚಿತ್ರ

ಕುಕ್ಕೆ ಶ್ರೀಸುಬ್ರಹ್ಮಣ್ಯ ದೇವಸ್ಥಾನದಲ್ಲಿ ಚಂಪಾಷಷ್ಠಿ ಜಾತ್ರಾ ಮಹೋತ್ಸವ ನ.27ರಿಂದ ಡಿ.12ರ ತನಕ ನೆರವೇರಲಿದೆ. ಜಾತ್ರೋತ್ಸವದ ನಿಮಿತ್ತ ಕ್ಷೇತ್ರದ ಪ್ರಧಾನ ಸೇವೆಗಳಲ್ಲಿ ಒಂದಾದ ಸರ್ಪ ಸಂಸ್ಕಾರವು ನ.25ರಿಂದ ಡಿ.12ರ ತನಕ ನೆರವೇರುವುದಿಲ್ಲ, ಆದರೆ ಇತರ ಸೇವೆಗಳು ಎಂದಿನಂತೆ ನೆರವೇರುತ್ತದೆ. ಲಕ್ಷದೀಪೋತ್ಸವ, ಚೌತಿ, ಪಂಚಮಿ ಮತ್ತು ಷಷ್ಠಿ ದಿನ ಕೆಲವು ಸೇವೆಗಳು ನೆರವೇರುವುದಿಲ್ಲ ಎಂದು ದೇಗುಲದ ಪ್ರಕಟನೆ ತಿಳಿಸಿದೆ. ಲಕ್ಷದೀಪೋತ್ಸವ (ನ.30), ಚೌತಿ (ಡಿ.5), ಪಂಚಮಿ (ಡಿ.6) ದಿನದಂದು ರಾತ್ರಿ ಹೊತ್ತಿನಲ್ಲಿ ಪ್ರಾರ್ಥನೆ ಸೇವೆ ಇರುವುದಿಲ್ಲ. ಚಂಪಾಷಷ್ಠಿ (ಡಿ.7) ದಿನದಂದು ಮಧ್ಯಾಹ್ನ ಪ್ರಾರ್ಥನೆ ಸೇವೆ ನಡೆಯುವುದಿಲ್ಲ ಚಂಪಾಷಷ್ಠಿ ದಿನ ಆಶ್ಲೇಷಾ ಬಲಿ ಮತ್ತು ನಾಗಪ್ರತಿಷ್ಠೆ ಸೇವೆಗಳು ಇರುವುದಿಲ್ಲ. ನ.30, ಡಿ.5, ಡಿ.6, ಡಿ.7 ಮತ್ತು ಡಿ.12ರಂದು ಪಂಚಾಮೃತ ಮಹಾಭಿಷೇಕ ಸೇವೆ ನಡೆಯುವುದಿಲ್ಲ, ನ.27ರಿಂದ ಡಿ 12ರ ತನಕ ಸಾಯಂಕಾಲದ ಆಶ್ಲೇಷಾ ಬಲಿ ಸೇವೆ ನೆರವೇರುವುದಿಲ್ಲ. ನ.26: ಮಧ್ಯಾಹ್ನದವರೆಗೆ ದೇವರ ದರ್ಶನ ಇಲ್ಲ.ವಾರ್ಷಿಕ ಚಂಪಾಷಷ್ಠಿ ಜಾತ್ರಾ ಮಹೋತ್ಸವದ ಅಂಗವಾಗಿ ನ.26ರಂದು ಮೂಲಮೃತ್ತಿಕಾ ಪ್ರಸಾದ ತೆಗೆಯುವ ಪವಿತ್ರ ಕಾರ್ಯದ ಕಾರಣ ಭಕ್ತಾದಿಗಳಿಗೆ ಬೆಳಗ್ಗಿನಿಂದ ಮಧ್ಯಾಹ್ನ 2 ಗಂಟೆಯ ತನಕ ಶ್ರೀ ದೇವರ ದರುಶನ ಹಾಗೂ ಸೇವೆಗಳನ್ನು ನೆರವೇರಿಸಲು ಅವಕಾಶ ಇರುವುದಿಲ್ಲ, 2 ಗಂಟೆಯ ಬಳಿಕ ಶ್ರೀ ದೇವರ ದರ್ಶನಕ್ಕೆ ಹಾಗೂ ಆಯ್ದ ಸೇವೆಗಳನ್ನು ನೆರವೇರಿಸಲು ಅವಕಾಶವಿದೆ ಎಂದು ಪ್ರಕಟನೆ ತಿಳಿಸಿದೆ.

ಡಿ.12ರ ತನಕ ಸರ್ಪ ಸಂಸ್ಕಾರ ನೆರವೇರುವುದಿಲ್ಲ

ರಜೆ ಮೇಲೆ ಬಂದಿದ್ದ ಯೋಧ ಕೆರೆಗೆ ಹಾರಿ ಆತ್ಮಹತ್ಯೆ

• ಉದಯವಾಹಿನಿ, ಬೆಳಗಾವಿ

ರಜೆಯ ಮೇಲೆ ಬಂದಿದ್ದ ಯೋಧನೊಬ್ಬ ಕೆರೆಗೆ ಹಾರಿ ಆತ್ಮಹತ್ಯೆಗೆ ಶರಣಾಗಿರುವ ಘಟನೆ ಬೆಳಗಾವಿ ಜಿಲ್ಲೆಯ ಕಿತ್ತೂರು ತಾಲೂಕಿನ ಪರಸನಟ್ಟಿ ಗ್ರಾಮದಲ್ಲಿ ನಡೆದಿದೆ. ನರೇಶ್ ಯಲ್ಲಪ್ಪ ಆಗಸರ (28) ಮೃತ ದುರ್ದೈವಿ. 20 ದಿನಗಳ ಹಿಂದೆ ನರೇಶ್ ರಜೆ ಮೇಲೆ ಊರಿಗೆ ಬಂದಿದ್ದರು.

ನಿನ್ನ ಕೆಲಸಕ್ಕೆ ವಾಪಾಸ್ ಹೋಗುವುದಾಗಿ ಹೇಳಿ ಹೊರಟವರು ಕಿತ್ತೂರು ತಾಲ್ಲೂಕಿನ ಪರಸಟ್ಟಿ ಗ್ರಾಮದ ಕೆರೆಗೆ ಹಾರಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ಯೋಧನ ಸಾವಿಗೆ ನಿಖರ ಕಾರಣ ತಿಳಿದುಬಂದಿಲ್ಲ. ಆರೋಗ್ಯ ಯೋಧನ ಮೃತದೇಹಕ್ಕಾಗಿ ಕೆರೆಯಲ್ಲಿ ಶೋಧಕಾರ್ಯ ನಡೆಯುತ್ತಿದೆ. ಘಟನಾ ಸ್ಥಳಕ್ಕೆ ಕಿತ್ತೂರು ಪಿಎಸ್ ಐ ಪ್ರವೀಣ ಗಂಗೋಳ ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಉದಯವಾಹಿನಿ ಚಿತ್ರ

ಆರ್‌ಎಸ್‌ಎಸ್ ಕುರಿತು ಪುರುಷೋತ್ತಮ ಬಿಳಿಮಲೆ ಟೀಕೆ: ವಾಗ್ವಾದ

• ಉದಯವಾಹಿನಿ, ಕೊಪ್ಪಳ

ಉದಯವಾಹಿನಿ ಚಿತ್ರ

ನಗರದಲ್ಲಿ ಭಾನುವಾರ ನಡೆದ ಕವಿ ದಿ. ಗವಿಸಿದ್ದ ಎನ್. ಜಿಲ್ಲೆ ಬಳ್ಳಾರಿ ಸಾಹಿತ್ಯೋತ್ಸವ ಕಾರ್ಯಕ್ರಮದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಅವರು ಆರ್‌ಎಸ್‌ಎಸ್ ಕುರಿತು ಮಾಡಿದ ಟೀಕೆಗೆ ಆಕ್ಷೇಪ ವ್ಯಕ್ತವಾಗಿದ್ದು, ಇದು ವಾಗ್ವಾದಕ್ಕೂ ಕಾರಣವಾಯಿತು.

ಬೆಂಗಳೂರು ಗ್ರಾಮಾಂತರ ಬೀದರ್ ಚಾಮರಾಜ ನಗರ ಸಾಹಿತ್ಯೋತ್ಸವದಲ್ಲಿ ಬಿಳಿಮಲೆಯವರು 1924ರಲ್ಲಿ ಮಹಾತ್ಮ ಗಾಂಧೀಜಿ ಬೆಳಗಾವಿನಲ್ಲಿ ನಡೆದ ಕಾಂಗ್ರೇಸ್ ಅಧಿವೇಶನದ ಅಧ್ಯಕ್ಷತೆ ವಹಿಸಿದ್ದರು. ಅವರು ಅಧ್ಯಕ್ಷತೆ ವಹಿಸಿದ್ದ ಏಕೈಕ ಕಾಂಗ್ರೇಸ್ ಅಧಿವೇಶನಕ್ಕೆ ಈಗ 100 ವರ್ಷಗಳಾಗಿವೆ. ಕರ್ನಾಟಕ ಏಕೀಕರಣವೂ ನಮ್ಮಲ್ಲಿ ಮಹತ್ವದ ಘಟವಾಗಿದೆ.

ಇಂಥ ಪ್ರಮುಖ ವಿಷಯಗಳನ್ನೆಲ್ಲ ಸರ್ಕಾರವೇ ದಾಖಲಿಸಿ. ಪುಸ್ತಕ ರೂಪದಲ್ಲಿ ಅತ್ಯಂತ ಕಡಿಮೆ ಬೆಲೆಗೆ ಜನರಿಗೆ ಕೊಡಬೇಕು. ಈ ಮೂಲಕ ಇತಿಹಾಸ ಉಳಿಸುವ ಕೆಲಸ ಮಾಡಬೇಕು. ಆದರೆ ವೈಭವೀಕರಿಸುವುದು ಬೇಡ.

ವೈಭವೀಕರಿಸುವ ಕೆಲಸವನ್ನು ಆರ್‌ಎಸ್‌ಎಸ್‌ನವರು ಮಾಡುತ್ತಾರೆ' ಎಂದರು. ಇದಕ್ಕೂ ಮೊದಲು ಬೇರೆ ಬೇರೆ ಘಟನೆಗಳನ್

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	07:30 ರಿಂದ 09:00
ಗುಳಿಕ ಕಾಲ	ಮಧ್ಯಾಹ್ನ	01:30 ರಿಂದ 03:00
ಯಮಗಂಡ ಕಾಲ	ಬೆಳಿಗ್ಗೆ	10:30 ರಿಂದ 12:00

ಮೇಷ ಒಂದು ಹಂತವನ್ನು ದಾಟಿ ನಿಮ್ಮನ್ನು ದಂಡಿಸಬೇಡಿ ಮತ್ತು ಸರಿಯಾದ ವಿಶ್ರಾಂತಿ ತೆಗೆದುಕೊಳ್ಳಿ. ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ.

ವೃಷಭ ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ.

ಮಿಥುನ ನಿಮ್ಮ ಸಕಾರಾತ್ಮಕ ದೃಷ್ಟಿಕೋನ ಮತ್ತು ಆತ್ಮವಿಶ್ವಾಸದಿಂದ ನಿಮ್ಮ ಸುತ್ತಲಿರುವ ಜನರನ್ನು ಪ್ರಭಾವಿಸಬಹುದಾದ ಸಾಧ್ಯತೆಗಳಿವೆ. ಇಂದು ಈ ರಾಶಿಚಕ್ರದ ಕೆಲವು ನಿರುದ್ಯೋಗಿಗಳಿಗೆ ಉದ್ಯೋಗ ಸಿಗಬಹುದು.

ಕರ್ಕಾಟಕ ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಇಂದು ಹಣದ ನಷ್ಟವು ಸಂಭವಿಸಬಹುದು.

ಸಿಂಹ ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ಇಂದು ನಿಮ್ಮ ಯಾವುದೇ ಚಲಿಸಬಲ್ಲ ಆಸ್ತಿಯನ್ನು ಕದಿಯಬಹುದು ಆದ್ದರಿಂದ ಸಾಧ್ಯವಾದಷ್ಟು ಅದರ ಬಗ್ಗೆ ಗಮನ ಹರಿಸಿ.

ಕನ್ಯಾ ನಿಮ್ಮ ಚೈತನ್ಯವನ್ನು ಪುನಃ ಸಂಪಾದಿಸಲು ವಿಶ್ರಾಂತಿ ತೆಗೆದುಕೊಳ್ಳಿ. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು ಇಲ್ಲದಿದ್ದರೆ ಮುಂಬರುವ ಸಮಯ ತೊಂದರೆಗಳಿಂದ ತುಂಬಿರಬಹುದು.

ತುಲಾ ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ರಾತ್ರಿಯ ವೇಳೆಯಲ್ಲಿ ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ.

ವೃಶ್ಚಿಕ ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆವರಿಸಬಹುದು. ಖಾಲಿ ಮೆದುಳು ದೆವ್ವಗಳ ಕಾರ್ಖಾನೆಯಾದ್ದರಿಂದ ದೈಹಿಕ ವ್ಯಾಯಾಮದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಲು ಪ್ರಯತ್ನಿಸಿ.

ಧನಸ್ಸು ನಿರಂತರ ಸಕಾರಾತ್ಮಕ ಚಿಂತನೆಯನ್ನು ಪ್ರಶಂಸಿಸಲಾಗುತ್ತದೆ. ನಿಮ್ಮ ಪ್ರಯತ್ನದಲ್ಲಿ ನೀವು ಯಶಸ್ವಿಯಾಗಬಹುದು. ಜೀವನ ಸಂಗಾತಿಯೊಂದಿಗೆ ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯದ ಬಗ್ಗೆ ಜಗಳವಾಗುವ ಸಾಧ್ಯತೆ ಇದೆ.

ಮಕರ ಆರೋಗ್ಯ ಸಂಬಂಧಿತ ಸಮಸ್ಯೆಗಳು ಅಸ್ವಸ್ಥತೆಯನ್ನು ಉಂಟುಮಾಡಬಹುದು. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ.

ಕುಂಭ ಮನೆಯಲ್ಲಿ ಒತ್ತಡ ನಿಮಗೆ ಸಿಟ್ಟು ತರಿಸಬಹುದು. ಅವುಗಳನ್ನು ದಮನಗೊಳಿಸುವುದು ಕೇವಲ ದೈಹಿಕ ಸಮಸ್ಯೆಯನ್ನು ಹೆಚ್ಚಿಸುತ್ತದೆ. ದೈಹಿಕ ಚಟುವಟಿಕೆಯೊಂದಿಗೆ ಇದನ್ನು ತೊಡೆದುಹಾಕಿ.

ಮೀನ ಗರ್ಭಿಣಿಯರಿಗೆ ವಿಶೇಷ ಕಾಳಜಿಯ ದಿನ. ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ. ಈ ಹಣ ನಿಮ್ಮ ಅನೇಕ ಸಮಸೆಗಳನ್ನು ದೂರ ಮಾಡಬಹುದು.

ಬಿಜೆಪಿ ಹೈಕಮಾಂಡ್ ವಿರುದ್ಧವೇ ಗುಡುಗಿದ ಬಸನಗೌಡ ಯತ್ನಾಳ್

ಒಳ ಒಪ್ಪಂದದಿಂದ ಬಿಜೆಪಿಗೆ ಈ ದುಸ್ಥಿತಿ ಬರ್ತಿದೆ ಎಂದು ವಿಜಯೇಂದ್ರ ಹೆಸರನ್ನು ಉಲ್ಲೇಖಿಸದೆ ಯತ್ನಾಳ್ ವಾಗ್ದಾಳಿ

• ಉದಯವಾಹಿನಿ ಧಾರವಾಡ

ಬಿಜೆಪಿ ನಾಯಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಬಿಜೆಪಿಯ ಹೈಕಮಾಂಡ್ ವಿರುದ್ಧವೇ ತಿರುಗಿ ಬಿದಿದ್ದಾರೆ. ಅಲ್ಲದೇ ಹೈಕಮಾಂಡ್‌ಗೆ ಈ ವಿಚಾರದಲ್ಲಿ ಎಚ್ಚರಿಕೆ ವಹಿಸಬೇಕು ಎಂದು ಹೇಳಿದ್ದಾರೆ. ಕರ್ನಾಟಕದ ಮೂರು ವಿಧಾನಸಭೆ ಉಪ ಚುನಾವಣೆಯಲ್ಲಿ ಬಿಜೆಪಿ ಹಾಗೂ ಮೈತ್ರಿ ಪಕ್ಷ ಸೋಲುತ್ತಿದ್ದಂತೆಯೇ ಯತ್ನಾಳ್ ಅವರು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಬಿಜೆಪಿ ಹೈಕಮಾಂಡ್ ವಿರುದ್ಧ ತಿರುಗಿ ಬಿದ್ದಿದ್ದಾರೆ.

ರಾಜ್ಯದಲ್ಲಿ ಬಿಜೆಪಿಯ (ರಾಜ್ಯಾಧ್ಯಕ್ಷ) ಉಸ್ತುವಾರಿಯನ್ನು ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರ ಮಗ ಬಿ.ವೈ ವಿಜಯೇಂದ್ರ ಅವರಿಗೆ ಕೊಟ್ಟಾಗಿನಿಂದಲೂ ಯತ್ನಾಳ ಗುಡುಗುತ್ತಲ್ಲೇ ಇದ್ದಾರೆ.

ಅವರ ಕೋಪ ಒಮ್ಮೆಲೆ ಸ್ಫೋಟಗೊಂಡಿದೆ. ಬೆಂಗಳೂರು (ಮೈಸೂರು 23 ಬೆಳಗಾವಿ 2. ಶಿವಮೊಗ್ಗ ಜಿಲ್ಲೆಗಳು ಇದೀಗ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಬೆಳಗಾವಿಯಲ್ಲಿ ಮೂರು ವಿಧಾನಸಭೆ ಉಪ ಚುನಾವಣೆಯ ಫಲಿತಾಂಶದ ಬಗ್ಗೆ ಮಾತನಾಡಿದ್ದಾರೆ. ಮೂರು ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿಗೆ (ಮೈತ್ರಿ ಪಕ್ಷಗಳಿಗೆ) ಸೋಲಾಗಿದೆ. ಇದನ್ನು ನನ್ನ (ಯಾಕೆ ಈ ರೀತಿ ಆಯ್ತು ಎನ್ನುವುದನ್ನು) ಬಳಿ ಯಾಕೆ ಕೇಳೀರಿ ರಾಜ್ಯಾಧ್ಯಕ್ಷರಿಗೆ ಈ ಪ್ರಶ್ನೆ ಕೇಳೀ ಎಂದಿದ್ದಾರೆ. ವಿಜಯೇಂದ್ರ ಅವರ ನಾಯಕತ್ವ ಜನರು ಒಪ್ಪಿದ್ದಾರೋ ಇಲ್ಲವೋ ಅವರಿಗೆ ಗೊತ್ತು ಎಂದು ವ್ಯಂಗ್ಯವಾಡಿದ್ದಾರೆ.

ನಿನ್ನೆ ದೆಹಲಿಯಲ್ಲಿ ಹೇಳಿದ್ದ (ವಿಜಯೇಂದ್ರ) ಎಲ್ಲಾ ಬಾಗಿಲು ಬಂದಾಗಿದೆ. ಒಂದೇ ಬಾಗಿಲು ಇರುತ್ತೆ ಎಂದು ಎಲ್ಲಾ ಬಾಗಿಲು ಬಂದಾಗಿ, ಬಿಜೆಪಿಗೆ ಇಂತಹ ಹೀನಾಯ ಸೋಲು ಆಗಿದೆ. ಈ ಬಗ್ಗೆ ನಮಗೂ ದುಃಖ ವಿದೆ. ಅವರ ಒಳ ಒಪ್ಪಂದದಿಂದ ಬಿಜೆಪಿಗೆ ಈ ದುಸ್ಥಿತಿ ಬರ್ತಿದೆ ಎಂದು ವಿಜಯೇಂದ್ರ ಅವರ ಹೆಸರನ್ನು ಉಲ್ಲೇಖಿಸದೆ ಯತ್ನಾಳ್ ಅವರು ವಾಗ್ದಾಳಿ ನಡೆಸಿದ್ದಾರೆ.

ಹೈಕಮಾಂಡ್ ಗಮನಿಸಲಿ ಇನ್ನು ಯತ್ನಾಳ್ ಅವರು ಇದೇ ಸಂದರ್ಭದಲ್ಲಿ ಬಿಜೆಪಿ ಹೈಕಮಾಂಡ್ ಬಗ್ಗೆಯೂ ತಮ್ಮ ಅಸಮಾಧಾನವನ್ನು ಹೊರಹಾಕಿದ್ದಾರೆ.

ಹೈಕಮಾಂಡ್ ರಾಜ್ಯಕ್ಕೆ ಉಸ್ತುವಾರಿಯಾಗಿ ನೇಮಿಸುವಾಗ ಪ್ರಾಮಾಣಿಕರು ಹಾಗೂ ಸಂಸ್ಕಾರ ಇದ್ದವವರನ್ನು ನೇಮಿಸಬೇಕು.

ಈ ಹಿಂದೆ ಅರುಣ್‌ಸಿಂಗ್ ಎನ್ನುವ ನಾಯಕನಿದ್ದ. ಆತ ಯಡಿಯೂರಪ್ಪ ಹಾಗೂ ವಿಜಯೇಂದ್ರ ಸಂದೇಶ ಕಾರಕನಾಗಿ ಕೆಲಸ ಮಾಡಿದ್ದರ ಪರಿಣಾಮ ಇದು ಎಂದು ಹೇಳಿದ್ದಾರೆ.

ಈ ಫಲಿತಾಂಶ ಕರ್ನಾಟಕದಲ್ಲಿ ವಿಜಯೇಂದ್ರ ಮಾಡಿದನ್ನ ಜನ ತಿರಸ್ಕಾರ ಮಾಡಿದ್ದಾರೆ.

ಬಿಜೆಪಿ ಹೈಕಮಾಂಡ್ ಇನ್ನಾದರೂ ಪೂಜ್ಯ ತಂದೆ ಹಾಗೂ ಮಗನ ವ್ಯಾಮೋಹವನ್ನು ಬಿಡಬೇಕು ಎಂದು ವಿನಂತಿ ಮಾಡ್ತೀನಿ ಎಂದು ಹೇಳಿದ್ದಾರೆ.

ವಕ್ಫ ಬೋರ್ಡ್ ಚುನಾವಣೆಯಲ್ಲಿ ವರ್ಕೌಟ್ ಆಗಲಿಲ್ಲವೇ ಎನ್ನುವ ಪ್ರಶ್ನೆಗೆ ಉತ್ತರಿಸಿದ ಅವರು, ವಕ್ಫ್ ಬೋರ್ಡ್ ಈಗ ಆರಂಭವಾಗಿದೆ. ಇನ್ನೂ ಜನರಿಗೆ ಗೊತ್ತಗಬೇಕಿದೆ. ಅದೇ ಮಹಾರಾಷ್ಟ್ರದ ವಕ್ಫ್ ಬೋರ್ಡ ವಿಚಾರವಾಗಿಯೇ ಚುನಾವಣೆ ಮಾಡಿದ್ದರು.

ಉದ್ಭವ್ ಠಾಕ್ರೆ ಔರಂಗಜೇಬ್ ಸಮಾಧಿಗೆ ಹೋಗಿ ನಮಸ್ಕಾರ ಮಾಡಿದ್ದರು. ಈಗ ಅವರ ಪಕ್ಷ ಹೀನಾಯ ಸೋಲು ಕಂಡಿದೆ.

ಬಿಜೆಪಿಯಲ್ಲಿ ಅಸಮಾಧಾನ

ಮಹಾರಾಷ್ಟ್ರ ಹಾಗೂ ಜಾರ್ಖಂಡ್‌ನಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿದೆ. ಆದರೆ, ಕರ್ನಾಟಕದಲ್ಲಿ ಬಿಜೆಪಿ ಹೀನಾಯ ಸೋಲಿಗೆ ಪೂಜ್ಯ ತಂದೆ, ಮಗ (ಯಡಿಯೂರಪ್ಪ ಹಾಗೂ ಬಿ.ವೈ ವಿಜಯೇಂದ್ರ) ಕಾರಣ ಎಂದು ಯತ್ನಾಳ್ ಹೆಸರು ಉಲ್ಲೇಖಿಸದೆ ಪರೋಕ್ಷ ವಾಗ್ದಾಳಿಯನ್ನು ಮುಂದುವರಿಸಿದ್ದಾರೆ. ಕರ್ನಾಟಕದಲ್ಲಿ ಮೂರು ವಿಧಾನಸಭೆ ಚುನಾವಣೆ ಮುಕ್ತಾಯವಾಗುತ್ತಿದ್ದಂತೆಯೇ ಬಿಜೆಪಿಯಲ್ಲಿ ಅಸಮಾಧಾನ ಬುಗಿಲೆದ್ದಿದೆ.

ಉದಯವಾಹಿನಿ ಚಿತ್ರ

ರಾಜ್ಯ ವಿಧಾನಸಭೆಯಲ್ಲಿ ಹೀನಾಯ ಸೋಲು ಕಂಡಿದ್ದ ಬಿಜೆಪಿ, ಲೋಕಸಭೆ ಚುನಾವಣೆಯಲ್ಲಿ ಸಮಾಧಾನಕರ ಸಾಧನೆ ಮಾಡಿ ನಿಟ್ಟುಸಿರು ಬಿಟ್ಟಿತ್ತು. ಆದರೆ, ಈಗ ಮತ್ತೆ ಸೋಲಿನ ಸುಳಿಯಲ್ಲಿ ಸಿಲುಕಿದೆ. ಈ ನಡುವೆ ಬಿಜೆಪಿಯಲ್ಲಿ ಆಂತರಿಕ ಕಚ್ಚಾಟ ಹೆಚ್ಚಾಗಿದೆ.

ಬಿಜೆಪಿಯಲ್ಲಿ ಆಂತರಿಕ ಕಚ್ಚಾಟ

ಯಾವುದೇ ಭಾಷೆಗಳನ್ನು ಕಲಿತರೂ ಕನ್ನಡಕ್ಕೆ ಮೊದಲ ಪ್ರಾಶಸ್ತ್ಯ ನೀಡಬೇಕು : ಲೇಖಕ ಯೋಗೀಶ್ ಸಹ್ಯಾದ್ರಿ

• ಉದಯವಾಹಿನಿ, ಚಿತ್ರದುರ್ಗ

ಕನ್ನಡಿಗರು ಎಷ್ಟೇ ಭಾಷೆಗಳನ್ನು ಕಲಿತರೂ ಕನ್ನಡಕ್ಕೆ ಮೊದಲ ಪ್ರಾಶಸ್ತ್ಯ ನೀಡಬೇಕು. ಭಾರತದ ನೆಲದಲ್ಲಿ ಕನ್ನಡ ಭಾಷೆಗೆ ತನ್ನದೇ ಆದ ವಿಶಿಷ್ಟ ಸ್ಥಾನಮಾನವಿದೆ ಎಂದು ಲೇಖಕ ಹಾಗೂ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷ ಯೋಗೀಶ್ ಸಹ್ಯಾದ್ರಿ ಅಭಿಪ್ರಾಯಪಟ್ಟರು.

ನಗರದ ತುರುವನೂರು ರಸ್ತೆಯಲ್ಲಿರುವ ಕೆ.ಕೆ. ನ್ಯಾಷನಲ್ ಆಂಗ್ಲ ಹಿರಿಯ ಹಾಗೂ ಪ್ರೌಢಶಾಲೆ ಚಿತ್ರದುರ್ಗ ಇಲ್ಲಿ ಹಮ್ಮಿಕೊಳ್ಳಲಾಗಿದ್ದ ಕನ್ನಡ ರಾಜ್ಯೋತ್ಸವ ಮತ್ತು ಇತ್ತೀಚೆಗೆ ನಡೆದ ಪ್ರಬಂಧ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಲೇಖಕ ಯೋಗೀಶ್ ಸಹ್ಯಾದ್ರಿ ಅವರು, ಕನ್ನಡಿಗರಿಗೆ ಕನ್ನಡ ಭಾಷೆಯೆ ಸ್ವರ್ಗ ಹಾಗೂ ಹಬ್ಬವಿದ್ದಂತೆ. ಆದರೆ ಕನ್ನಡ ಮಾತೃಭಾಷೆಯು ಉದ್ಯೋಗದ ಭಾಷೆಯಾಗುವಂತೆಯೂ ಸರ್ಕಾರ ಮತ್ತು ಸಾಹಿತಿಗಳು, ಕನ್ನಡ ಪ್ರೇಮಿಗಳು ಕಾರ್ಯಗತರಾಗಬೇಕು ಎಂದು ಅಭಿಪ್ರಾಯಪಟ್ಟರು.

ಕನ್ನಡದ ಮಕ್ಕಳ ಪ್ರೇಮವನ್ನು ಮಾತಿನಲ್ಲಿ ಬಣ್ಣಿಸಲಾಗದು ಎಂದು ಹೇಳುತ್ತಾ, ಕನ್ನಡ ಭಾಷೆಯ ಇತಿಹಾಸ, ಪ್ರಾಮುಖ್ಯತೆ, ಕವಿಗಳು, ಕವಿವಾಣಿಗಳು, ಬಸವಣ್ಣ, ಕನಕದಾಸರು ಮೊದಲಾದ ಕವಿ ಶ್ರೇಷ್ಠರನ್ನು ನೆನಪಿಸಿ

ಉದಯವಾಹಿನಿ ಚಿತ್ರ

ಕೊಂಡರು. ನಾವು ವ್ಯವಹರಿಸಲು ಮತ್ತು ಬದುಕಲು ಎಷ್ಟೇ ಭಾಷೆಗಳನ್ನು ಕಲಿಯಬಹುದು. ಆದರೆ ಕನ್ನಡಿಗನಾಗಿರುವುದಕ್ಕೆ ಹೆಮ್ಮೆ ಪಡಬೇಕು ಎಂದು ಮಕ್ಕಳಿಗೆ, ಪೋಷಕರಿಗೆ, ಶಿಕ್ಷಕರಿಗೆ ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಡಾ|| ಹೆಚ್. ಆರ್. ಮಂಜುನಾಥ್ ರವರು ಎಷ್ಟೇ ದೇಶ ವಿದೇಶ ಸುತ್ತಿದರೂ ಭಾರತೀಯನಾಗಿ, ಕನ್ನಡಿಗನಾಗಿ ಹೆಮ್ಮೆ ಇದೆ, ಮಕ್ಕಳ ಪ್ರತಿಭೆಯನ್ನು ಗುರುತಿಸುವುದಕ್ಕೆ ಇದು ಒಂದು ವೇದಿಕೆ ಎಂದರು. ಆಡಳಿತ ಅಧಿಕಾರಿ ಶ್ರೀಯುತ ಕಾರ್ತಿಕ್‌ರವರು ಪ್ರಬಂಧ ಸ್ಪರ್ಧೆಯ ರೂಪು-ರೇಷೆಗಳನ್ನು ವಿವರಿಸಿ ವಿಜೇತರಾದವರನ್ನು ಘೋಷಿಸಿದರು. ಶ್ರೀಮತಿ ಸುಶೀಲಾ ಕಾರ್ಯಕ್ರಮ ನಿರೂಪಿಸಿದರು, ಪ್ರಾರ್ಥನೆ

- ಮೊದಲ ಬಹುಮಾನ - ಆಧ್ಯಾ (ತರಳಬಾಳು)
- ಎರಡನೆಯ ಬಹುಮಾನ-ಜಯಶ್ರೀ (ಸಂತ ಜೋಸೆಫರ ಶಾಲೆ)
- ತೃತೀಯ ಬಹುಮಾನ - ಬೇಬಿ.ಆರ್ (ಕೆ.ಕೆ.ನ್ಯಾಷನಲ್ ಆಂಗ್ಲ ಹಿರಿಯ ಹಾಗೂ ಪ್ರೌಢಶಾಲೆ) ಹಾಗೂ ಆಧ್ಯಾ ಕೌಸರ್ (ಸಂತ ಜೋಸೆಫರ ಶಾಲೆ)

ಶ್ರೀಮತಿ ಲಾವಣ್ಯ ಅವರದು, ಸ್ವಾಗತವನ್ನು ಶ್ರೀಮತಿ ರೂಪಿಣಿ ನೆರವೇರಿಸಿದರು. ವಂದನಾರ್ಪಣೆಯನ್ನು ಶ್ರೀಮತಿ ವಿಜಯಲಕ್ಷ್ಮಿ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಪ್ರೌಢಶಾಲಾ ಮುಖ್ಯೋಪಾಧ್ಯಾಯರಾದ ಶ್ರೀಯುತ ಮಹೇಶ್ವರಪ್ಪ ಹಾಗೂ ಕಿರಿಯ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಸಂಧ್ಯಾ ರವರು, ಹಿರಿಯ ಶಿಕ್ಷಕಿ ಸಿ.ಬಿ ನಿರ್ಮಲಾ ರವರು ಉಪಸ್ಥಿತರಿದ್ದರು, ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಮಗು ಅಪಹರಣ: ಸಿಸಿಟಿವಿಯಲ್ಲಿ ದೃಶ್ಯ

• ಉದಯವಾಹಿನಿ, ವಿಜಯಪುರ

ನಗರದ ಜಿಲ್ಲಾಸ್ಪತ್ರೆಯಲ್ಲಿ ಒಂದು ವರ್ಷದ ಮಗುವನ್ನು ಅಪರಿಚಿತ ವ್ಯಕ್ತಿಯೋರ್ವ ಅಪಹರಣ ಮಾಡಿರುವ ಘಟನೆ ನಡೆದಿದೆ.

ಸಂದೀಪ್ ಎಂಬ ಕಂದಮ್ಮ ಹಾಡಹಗಲೇ ಅಪಹರಣವಾಗಿದ್ದು, ಮಗನಿಗಾಗಿ ತಾಯಿ ಕಣ್ಣೀರು ಹಾಕುತ್ತಿದ್ದಾರೆ. ರಾಷ್ಟ್ರೀಯ ಬಾಗಲ ಕೋಟೆ ಜಿಲ್ಲೆಯ ಮುಧೋಳ ಪಟ್ಟಣದ ನಿವಾಸಿ ರಾಮೇಶ್ವರಿ ತನ್ನ ಇಬ್ಬರು ಮಕ್ಕಳು, ತಾಯಿ ಪದ್ಮಾ ಪವಾರ್ ಅವರೊಂದಿಗೆ ವಿಜಯಪುರದಲ್ಲಿರುವ ಸಂಬಂಧಿಕರ ಮನೆಗೆ ಬಂದಿದ್ದರು.

ಈ ವೇಳೆ, ಪದ್ಮಾ ಪವಾರ್ ಆರೋಗ್ಯ ಕೆಟ್ಟಿದೆ. ಹೀಗಾಗಿ ಮೂರು ದಿನಗಳ ಹಿಂದೆ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿತ್ತು.

ವಾಣಿಜ್ಯ ಕ್ರೀಡೆ ಉಡುಪಿ ತಾಯಿಯೊಂದಿಗೆ ರಾಮೇಶ್ವರಿ ತನ್ನ ಇಬ್ಬರು ಮಕ್ಕಳು ಸಮೇತ ಆಸ್ಪತ್ರೆಯಲ್ಲಿದ್ದರು. ಶನಿವಾರ ಬೆಳಗ್ಗೆ


ಉದಯವಾಹಿನಿ ಚಿತ್ರ

10-30ರಿಂದ 11 ಗಂಟೆಯೊಳಗೆ ರಾಮೇಶ್ವರಿ ತಾಯಿ ಪದ್ಮಾಳ ಕಫದ ಪರೀಕ್ಷೆಗಾಗಿ ತಾಯಿ ಬಳಿ ಮಗು ಸಂದೀಪ್‌ನನ್ನು ಬಿಟ್ಟು ಹೋಗಿದ್ದರು.

ಈ ವೇಳೆ ಸಂದೀಪ್ ಎದ್ದು ಅಳಲಿಕ್ಕೆ ಶುರು ಮಾಡಿದಾಗ 10 ವರ್ಷದ ಬಾಲಕ ಮಗುವನ್ನು ಎತ್ತಿಕೊಂಡು ಆಟವಾಡಿಸಿದ್ದಾನೆ. ಇದನ್ನೇ ಗಮನಿಸಿದ ಅಪರಿಚಿತ ವ್ಯಕ್ತಿ ವಾರ್ಡ್ ನೊಳಗೆ ಬಂದು ಮಗು ಎತ್ತಾಡಿಸಿದ್ದಾನೆ.

ಆ ಬಳಿಕ ಹೊರಗೆ ತೆಗೆದುಕೊಂಡು ಬಂದ ಅಪರಿಚಿತ ವ್ಯಕ್ತಿ ಮಗುವನ್ನು ಕದ್ದುಕೊಂಡು ಹೋಗಿದ್ದಾನೆ. ಅಪರಿಚಿತ ವ್ಯಕ್ತಿ ಕುಡಿದ ಮತ್ತಿನಲ್ಲಿರುವುದು ತಿಳಿದು ಬಂದಿದೆ.

ವಿಕ್ರಂ ಗೌಡ ಎನ್‌ಕೌಂಟರ್ ತನಿಖೆ ಚುರುಕು

• ಉದಯವಾಹಿನಿ, ಕಾರ್ಕಳ

ಪೀತಬೈಲಿನಲ್ಲಿ ಡಿ.18ರಂದು ನಡೆದ ನಕ್ಸಲ್ ವಿಕ್ರಂ ಗೌಡ ಎನ್‌ಕೌಂಟರ್ ಪ್ರಕರಣಕ್ಕೆ ಸಂಬಂಧಿಸಿ ತನಿಖೆ ಚುರುಕುಗೊಂಡಿದೆ. ರಾಷ್ಟ್ರೀಯ ವಿಕ್ರಂಗೌಡನ ಎದೆ ಮತ್ತು ಹೊಟ್ಟೆಯ ಭಾಗಕ್ಕೆ ಗುಂಡು ತಗಲಿ ಸ್ಥಳದಲ್ಲೇ ಮೃತಪಟ್ಟಿದ್ದ ಈ ಘಟನೆಗೆ ಸಂಬಂಧಿಸಿ ಹೆಬ್ರಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದ್ದು, ಕಾರ್ಕಳ ಡಿವೈಎಸ್‌ಪಿ ಅರವಿಂದ್ ಕಳಗುಜ್ಜಿ ನೇತೃತ್ವದಲ್ಲಿ ತನಿಖೆ ನಡೆಯುತ್ತಿದೆ.

ಹಲವರನ್ನು ಈಗಾಗಲೆ ವಿಚಾರಣೆ ನಡೆಸಲಾಗಿದ್ದು ಮಹತ್ವದ ಸಾಕ್ಷ್ಯಾಧಾರಗಳನ್ನು ಕಲೆಹಾಕಿದ್ದಾರೆ. ಫಾರೆನ್ಸಿಕ್ ತಂಡವು ಸ್ಥಳಕ್ಕೆ ಭೇಟಿ ಹಲವು ಮಾಹಿತಿ ಮತ್ತು ಸಾಕ್ಷ್ಯಗಳನ್ನು ಸಂಗ್ರಹಿಸಿದೆ.

ಉಡುಪಿ ಎಎನ್‌ಎಫ್ ಸಿಬಂದಿಯೂ ವಿಚಾರಣೆ, ಉತ್ತರ ಕನ್ನಡ ಘಟನೆ ಸಂಬಂಧ ಕಾರ್ಯಾಚರಣೆಯಲ್ಲಿ ಭಾಗಿಯಾದ ಎಎನ್ ಎಫ್ ಸಿಬಂದಿ ಹಾಗೂ ಅಧಿಕಾರಿಗಳನ್ನೂ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.

ಸ್ಥಳೀಯ ಕೆಲವು ನಿವಾಸಿಗಳನ್ನೂ ವಿಚಾರಣೆ ನಡೆಸಿದ್ದಾರೆ. ಶನಿವಾರ ತನಿಖಾಧಿಕಾರಿಗಳ ತಂಡ ಘಟನಾ ಸ್ಥಳಕ್ಕೆ ಭೇಟಿ ನೀಡಿದ್ದು, ಬೇರೆಬೇರೆ ಆಯಾಮಗಳಲ್ಲಿ ತನಿಖೆ ನಡೆಸಿದ್ದಾರೆ.

ಎನ್‌ಕೌಂಟರ್ ನಡೆದ ದಿನ ಪರಾರಿಯಾಗಿದ್ದಾರೆ ಎನ್ನಲಾದ ಮೂರ್ನಾಲ್ಕು ಮಂದಿ ನಕ್ಸಲರ ಹುಡುಕಾಟಕ್ಕೆ ಎಎನ್‌ಎಫ್ ಬಲೆ ಬೀಸಿದ್ದು, ಪಶ್ಚಿಮಘಟ್ಟದ ತಪ್ಪಲು, ದಟ್ಟಾರಣ್ಯದಲ್ಲಿ ಹದ್ದಿನ ಕಣ್ಣಿರಿಸಿದೆ. ಕಾರ್ಯಾಚರಣೆಯಲ್ಲಿ ಉಳಿದ ನಕ್ಸಲರಲ್ಲಿ ಯಾರಾದರೂ ಗಾಯಗೊಂಡಿರಬಹುದೇ? ಅವರು ಯಾವ ಕಡೆಗೆ ಪರಾರಿಯಾಗಿರಬಹುದು ಅಥವಾ ಪಶ್ಚಿಮಘಟ್ಟದ ಕಾಡಿನಲ್ಲೇ ಇರಬಹುದೇ ಎಂಬ ನಿಟ್ಟಿನಲ್ಲಿ ಗುಪ್ತಚರ ವಿಭಾಗದ ಮಾಹಿತಿ ಆಧಾರದಲ್ಲಿ ಎಎನ್‌ಎಫ್ ಕಾರ್ಯಾಚರಣೆ ರೂಪಿಸುತ್ತಿದೆ.

ಗಡಿಭಾಗದಲ್ಲಿ ಹೆಚ್ಚಿನ ನಿಗಾ

ಉಡುಪಿ- ದ. ಕ. ಜಿಲ್ಲೆಯ ಗಡಿಭಾಗದಲ್ಲಿ ಹೆಚ್ಚಿನ ನಿಗಾ ವಹಿಸಲಾಗಿದೆ

ರಾಜಭವನದಲ್ಲಿ ತಮ್ಮದೇ ಪ್ರತಿಮೆ ಅನಾವರಣಗೊಳಿಸಿದ ರಾಜ್ಯಪಾಲ

ಇದೊಂದು ನಾಚಿಕೆಗೇಡಿನ ಸಂಗತಿ, ತಮ್ಮದೇ ಪ್ರತಿಮೆ ಅನಾವರಣಗೊಳಿಸಿರುವುದು ಸ್ವ-ಪ್ರತಿಷ್ಠೆಯನ್ನು ಪ್ರದರ್ಶಿಸುತ್ತದೆ: ವಿರೋಧ ಪಕ್ಷ

ಬಂಗಾಳದಲ್ಲಿ ಹೊಸ ವಿವಾದ

ಪಶ್ಚಿಮ ಬಂಗಾಳ: ರಾಜ್ಯಪಾಲರಾಗಿ ತಮ್ಮ ಅಧಿಕಾರ ಅವಧಿ ಎರಡು ವರ್ಷ ಪೂರೈಸಿದ ಹಿನ್ನೆಲೆ ಪಶ್ಚಿಮ ಬಂಗಾಳ ರಾಜ್ಯಪಾಲ ಸಿ.ವಿ.ಆನಂದ ಬೋಸ್ ಅವರು ರಾಜಭವನದಲ್ಲಿ ತಮ್ಮ ಪ್ರತಿಮೆಯನ್ನು ಅನಾವರಣಗೊಳಿಸಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಈ ಬೆಳವಣಿಗೆ ಪಶ್ಚಿಮ ಬಂಗಾಳ ರಾಜಕಾರಣದಲ್ಲಿ ಹೊಸ ವಿವಾದ ಹುಟ್ಟು ಹಾಕಿದೆ. ಇದೊಂದು ನಾಚಿಕೆಗೇಡಿನ ಸಂಗತಿ, ತಮ್ಮದೇ ಪ್ರತಿಮೆ ಅನಾವರಣಗೊಳಿಸಿರುವುದು ಸ್ವ-ಪ್ರತಿಷ್ಠೆಯನ್ನು ಪ್ರದರ್ಶಿಸುತ್ತದೆ ಎಂದು ವಿರೋಧ ಪಕ್ಷ ನಾಯಕರು ಟೀಕಿಸಿದ್ದಾರೆ.

ನಮ್ಮ ರಾಜ್ಯಪಾಲರಾದ ಸಿ.ವಿ.ಆನಂದ ಬೋಸ್ ಅವರು ತಮ್ಮದೇ ಪ್ರತಿಮೆಯನ್ನು ಉದ್ಘಾಟಿಸಿರುವುದು ಈವರೆಗೆ ಕೇಳಿರದ ಸಂಗತಿಯಾಗಿದೆ. ಅವರು ಯಾವುದೋ ಪ್ರಚಾರಕ್ಕಾಗಿ ಈ ಕೆಲಸ ಮಾಡಿದ್ದಾರೆ. ವಿಷಯವೇನೆಂದರೆ, ಮುಂದಿನ ಹೆಜ್ಜೆ ಏನು? ಅವರು ತಮ್ಮದೇ ಪ್ರತಿಮೆಗೆ ಹಾರ ಹಾಕುತ್ತಾರಾ? ಎಂದು ತೃಣಮೂಲ ಕಾಂಗ್ರೇಸ್ ವಕ್ತಾರ ಜಯಪ್ರಕಾಶ್ ಮಜುಂದಾರ್ ಪ್ರಶ್ನಿಸಿದ್ದಾರೆ. 'ಇದು ನಾಚಿಕೆಗೇಡು, ನಮ್ಮ ರಾಜ್ಯದ ದೌರ್ಭಾಗ್ಯ' ಎಂದು ಸಿಪಿಎಂ ಕೇಂದ್ರ ಸಮಿತಿ ಸದಸ್ಯ ಸುಜನ್ ಚಕ್ರವರ್ತಿ ಹೇಳಿದ್ದಾರೆ.

'ಅತ್ಯಂತ ನಾಚಿಕೆಗೇಡಿನ ಸಂಗತಿಯಾಗಿದೆ' ಎಂದು ಕಾಂಗ್ರೇಸ್ ವಕ್ತಾರ ಸೌಮ್ಯಾ ಐಚ್ ರಾಯ್ ಟೀಕಿಸಿದ್ದಾರೆ.

ವಿಪಕ್ಷಗಳ ವಿರೋಧದ ನಡುವೆಯೂ ರಾಜ್ಯಪಾಲ ಆನಂದ ಬೋಸ್ ಚಿತ್ರಕಲಾ ಸ್ಪರ್ಧೆ ಹಾಗೂ ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿದ್ದಾರೆ. ಕಾರ್ಯಕ್ರಮದ ಭಾಷಣದಲ್ಲಿ ಮಾತನಾಡುತ್ತಾ, ತಮ್ಮ ಅಧಿಕಾರಾವಧಿಯು 'ಸಿಹಿ ಮತ್ತು ಹುಳಿಯಿಂದ ಕೂಡಿದೆ ಎಂದು ಒಪ್ಪಿಕೊಂಡರು. ಮುಂದುವರೆದು, ಬಂಗಾಳದಲ್ಲಿ ಉಂಟಾಗಿರುವ ಕೆಟ್ಟ ರಾಜಕೀಯ ವಾತಾವರಣದ ಬಗ್ಗೆ ಟೀಕಿಸಿದರು. ರಾಜಕಾರಣಿಗಳಿಂದಾಗಿ ರಾಜ್ಯದಲ್ಲಿ ಪ್ರಸ್ತುತ ಉದ್ವಿಗ್ನತೆ ಉಂಟಾಗುತ್ತಿದೆ.

ಬಂಗಾಳದ ಜನರು ಇದನ್ನು ಹೆಚ್ಚು ಕಾಲ ಸಹಿಸುವುದಿಲ್ಲ ಎಂದು ಹೇಳಿದ್ದಾರೆ.

- ರಾಜಭವನದಲ್ಲಿ ರಾಜ್ಯಪಾಲ ಸಿ.ವಿ.ಆನಂದ ಬೋಸ್ ಪ್ರತಿಮೆ ಅನಾವರಣ
- ತಮ್ಮದೇ ಪ್ರತಿಮೆ ಲೋಕಾರ್ಪಣೆಗೊಳಿಸಿದ ರಾಜ್ಯಪಾಲ ಸಿ.ವಿ.ಆನಂದ ಬೋಸ್
- ತಮ್ಮದೇ ಪ್ರತಿಮೆ ಅನಾವರಣಗೊಳಿಸುವುದು ನಾಚಿಕೆಗೇಡಿನ ಸಂಗತಿ ಎಂದ ವಿಪಕ್ಷ

ಏನಿದು ಗೊಂದಲ

ಪಶ್ಚಿಮ ಬಂಗಾಳದ ರಾಜಭವನದ ಆವರಣದಲ್ಲಿ ಆಯೋಜಿಸಿದ್ದ ಶಾಲಾ ವಿದ್ಯಾರ್ಥಿಗಳ ಚಿತ್ರಕಲಾ ಸ್ಪರ್ಧೆ ಹಾಗೂ ಪ್ರದರ್ಶನ ಉದ್ಘಾಟನೆಗೂ ಮುಂಚಿತವಾಗಿ ರಾಜ್ಯಪಾಲ ಸಿ.ವಿ.ಆನಂದ ಬೋಸ್ ಅವರು, ತಮ್ಮ ಪ್ರತಿಮೆಯನ್ನು ಅನಾವರಣಗೊಳಿಸಿದರು. ಇದರ ಫೋಟೋ, ವಿಡಿಯೋಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದ್ದಂತೆ, ರಾಜ್ಯಪಾಲರು ಅಧಿಕಾರದಲ್ಲಿರುವಾಗಲೇ ತಮ್ಮ ಪ್ರತಿಮೆಯನ್ನು ಸ್ಥಾಪಿಸಿದ ಬಗ್ಗೆ ಟೀಕೆಗಳು ವ್ಯಕ್ತವಾದವು. ಇನ್ನು ಆಡಳಿತಾರೂಢ ತೃಣಮೂಲಕ ಕಾಂಗ್ರೇಸ್ ರಾಜ್ಯಪಾಲರ ವಿರುದ್ಧ ವಾಗ್ದಾಳಿ ನಡೆಸಿದ್ದು, ಇದೊಂದು 'ಪ್ರಚಾರದ ಸ್ಟಂಟ್' ಎಂದಿದೆ.

ಉಡುಗೊರೆ ಬಂದ ಪ್ರತಿಮೆ?

ಪಶ್ಚಿಮ ಬಂಗಾಳದ ಭಾರತೀಯ ವಸ್ತು ಸಂಗ್ರಹಾಲಯದ ಪಾರ್ಥ ಸಹಾ ಎಂಬ ಕಲಾವಿದ, ಸಿ.ವಿ.ಆನಂದ ಬೋಸ್ ಅವರ ಫೋಟೋ ನೋಡಿಕೊಂಡು ಪ್ರತಿಮೆ ಸಿದ್ಧಪಡಿಸಿದ್ದರು. ಬಳಿಕ ಅದನ್ನು ರಾಜ್ಯಪಾಲರಿಗೆ ಉಡುಗೊರೆಯಾಗಿ ನೀಡಿದ್ದಾರೆ. ಈ ಪ್ರತಿಮೆಯನ್ನು ರಾಜ್ಯಪಾಲರು ಸ್ಥಾಪಿಸಿಲ್ಲ. ಕಲಾವಿದ ಪಾರ್ಥ ಸಹಾ ಹಾಗೂ ಭಾರತೀಯ ವಸ್ತುಸಂಗ್ರಹಾಲಯದಿಂದ ಉಡುಗೊರೆಯಾಗಿ ಬಂದಿದೆ ಎಂದು ಪಶ್ಚಿಮ ಬಂಗಾಳ ರಾಜ್ಯಪಾಲರ ಕಚೇರಿ ಸ್ಪಷ್ಟಪಡಿಸಿದೆ. ಹೀಗಿದ್ದೂ, ಈ ಘಟನೆ ಬಂಗಾಳದಲ್ಲಿ ರಾಜಕೀಯ ಚರ್ಚೆಗೆ ಗ್ರಾಸವಾಗಿದೆ. ಜೀವಂತ ವ್ಯಕ್ತಿಯ ಪ್ರತಿಮೆ ಸ್ಥಾಪಿಸುವ ಔಚಿತ್ಯ ಏನಿತ್ತು ಎಂದು ಕೆಲವರು ಪ್ರಶ್ನಿಸಿದ್ದಾರೆ.

ಮಹಾರಾಷ್ಟ್ರದಲ್ಲಿ ಕಾಂಗ್ರೇಸ್ ಕಳಪೆ ಸಾಧನೆ : ಚವಾಣ್ ಆತಂಕ

ಮುಂಬೈ: ಮಹಾ ರಾಷ್ಟ್ರ ವಿಧಾನ ಸಭೆ ಚುನಾವನೆಯಲ್ಲಿ ಕಾಂಗ್ರೇಸ್‌ನ ಹೀನಾಯ ಸೋಲು ಆಘಾತಕಾರಿ, ಇದು ಎಂದೆಂದಿಗೂ ಅತ್ಯಂತ ಕೆಟ್ಟ ಸೋಲು ಎಂದು ಮಾಜಿ ಸಿಎಂ ಪೃಥ್ವಿರಾಜ್ ಚವಾಣ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಚವಾಣ್, ಮಹಿಳೆಯರಿಗೆ ಆರ್ಥಿಕ ನೆರವು ನೀಡಲು ಮಹಾಯುತಿ ಸರ್ಕಾರದ ಲಡ್ಕಿ ಬಹಿನ್ ಯೋಜನೆಯು ಗ್ರಾಮೀಣ ಪ್ರದೇಶಗಳಲ್ಲಿ ಮತದಾರರನ್ನು ಆಕರ್ಷಸಿದೆ ಆದರೆ ಧ್ರುವೀಕರಣವು ರಾಜ್ಯದ ನಗರ ಭಾಗಗಳಲ್ಲಿ ಮಹಾ ವಿಕಾಸ್ ಆಘಾಡಿ (ಎಂವಿಎ) ಭವಿಷ್ಯವನ್ನು ಹೊಡೆದಿದೆ ಎಂದು ಬಣ್ಣಿಸಿದ್ದಾರೆ.

ಕೇಸರಿ ಅಲೆ ಅಥವಾ ಇವಿಎಂ ದೋಷ ಇದೆಯೇ ಎಂದು ಹೇಳುವುದು ಕಷ್ಟ ಎಂದು ಕರಾದ್ ದಕ್ಷಿಣ ಕ್ಷೇತ್ರದಿಂದ ಸೋಲು ಕಂಡಿರುವ ಚವಾಣ್ ಹೇಳಿದರು. 288 ಸದಸ್ಯ ಬಲದ ರಾಜ್ಯ ವಿಧಾನಸಭೆಗೆ ಫಲಿತಾಂಶ ಚವಾಣ್ ಸೇರಿದಂತೆ ಹಲವಾರು ದೊಡ್ಡ ನಾಯಕರು ಸೋತಿದ್ದಾರೆ. ಎಂವಿಎ ಭಾಗವಾಗಿ 101 ಸ್ಥಾನಗಳಲ್ಲಿ ಸ್ಪರ್ಧಿಸಿದ್ದ ಕಾಂಗ್ರೇಸ್, ಕೇವಲ 16 ಸ್ಥಾನಗಳನ್ನು ಗೆಲ್ಲುವ ಮೂಲಕ ತನ್ನ ಹೀನಾಯ ಸೋಲನ್ನು ದಾಖಲಿಸಿದೆ. ಚವಾಣ್ ಅವರು ಸತಾರಾ ಜಿಲ್ಲೆಯ ಕರಡ್ ದಕ್ಷಿಣ ಕ್ಷೇತ್ರವನ್ನು 5,000 ರಿಂದ 6,000 ಮತಗಳಿಂದ ಗೆಲ್ಲುವ ನಿರೀಕ್ಷೆಯಲ್ಲಿದ್ದೆ . ಆದರೆ, ಜಿಲ್ಲೆಯ ಎಲ್ಲಾ ಎಂವಿಎ ಅಭ್ಯರ್ಥಿ ಗಳು ಸುಮಾರು 40,000 ಮತಗಳ ಅಂತರದಿಂದ ಸೋತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು. ಬಿಜೆಪಿಯ ಅತುಲ್ ಭೋಸ್ಲೆ ಅವರು ಕರಾಡ್ ದಕ್ಷಿಣದಲ್ಲಿ 39,355 ಮತಗಳ ಅಂತರದಿಂದ ಸೋಲಿಸಿದ್ದಾರೆ ಇದು ಆಘಾತಕಾರಿ ಸೋಲು ಮತ್ತು ವಿಧಾನಸಭಾ ಚುನಾವಣೆಯಲ್ಲಿ ಇದುವರೆಗಿನ ಅತ್ಯಂತ ಕೆಟ್ಟ ಸೋಲು ಎಂದು ಮರುಗಿದ್ದಾರೆ. ಕಾಂಗ್ರೇಸ್ ನಾಯಕತ್ವದೊಂದಿಗೆ ರಾಜ್ಯದ ಫಲಿತಾಂಶಗಳ ಕುರಿತು ಚರ್ಚಿಸಲು ದೆಹಲಿಗೆ ತೆರಳುತ್ತಿದ್ದೇನೆ, ರಾಜ್ಯ ಉಸ್ತುವಾರಿ ರಮೇಶ್ ಚೆನ್ನಿತ್ತಲಾ ಅವರೊಂದಿಗೆ ಮಾತನಾಡಿದ್ದೇನೆ ಎಂದು ಚವಾಣ್ ಹೇಳಿದರು. ನನ್ನ ಕ್ಷೇತ್ರದ ಜನರನ್ನು ಭೇಟಿ ಮಾಡಲು ಎರಡು ದಿನ ಕರಾದ್‌ನಲ್ಲಿ ಇರುತ್ತೇನೆ ಎಂದು ಚವಾಣ್ ಹೇಳಿದರು.

ಮಸೀದಿ ಸಮೀಕ್ಷೆಯ ವೇಳೆ ದುಷ್ಕರ್ಮಿಗಳಿಂದ ಕಲ್ಲು ತೂರಾಟ, ಲಘು ಲಾಠಿ ಪ್ರಹಾರ

ಸಂಭಾಲ್: ಇಲ್ಲಿನ ಸಂಭಾಲ್ ಮಸೀದಿ ಸಮೀಕ್ಷೆಯ ವೇಳೆ ಕಲ್ಲು ತೂರಾಟ ನಡೆದು ಪರಿಸ್ಥಿತಿ ಉದ್ವಿಗ್ನಗೊಂಡಿದ್ದರಿಂದ ಪೊಲೀಸರು ಅಶ್ರುವಾಯು ಸಿಡಿಸಿ ಲಘುಲಾಠಿ ಪ್ರಹಾರ ನಡೆಸಿದ್ದಾರೆ. ಇದು ಪುರಾತನ ಹಿಂದೂ ಹರಿಹರ ದೇವಾಲಯವಾಗಿದ್ದು ಸಂಭಾಲ್ ಮಸೀದಿ ನಿರ್ಮಿಸಲಾಗಿದೆ ಎಂಬ ಪ್ರಕರಣ ಕುರಿತು ಸ್ಥಳೀಯ ನ್ಯಾಯಾಲಯದ ಸಮೀಕ್ಷೆಗೆ ಆದೇಶದ ನೀಡಿತ್ತು. ಸ್ಥಳೀಯ ಆಡಳಿತದ ಪ್ರಕಾರ, ವಿವಾದಿತ ಜಾಗದಲ್ಲಿ ನ್ಯಾಯಾಲಯದ ಆದೇಶದ ಮೇರೆಗೆ ಅಧಿಕಾರಿಗಳು ಬೆಳಿಗ್ಗೆ 7 ಗಂಟೆಗೆ ಸಮೀಕ್ಷೆ ಪ್ರಾರಂಭವಾಯಿತು ನಂತರ ಸ್ಥಳದಲ್ಲಿ ಜನಸಂದಣಿ ಸೇರಲು ಪ್ರಾರಂಭಿಸಿತು.

ಸ್ಥಳದಲ್ಲಿ ಜಮಾಯಿಸಿದ ಜನಸಂದಣಿಯಿಂದ ಕೆಲವು ದುಷ್ಕರ್ಮಿಗಳು ಭದ್ರತೆಗೆ ಇದ್ದ ಪೊಲೀಸ್ ಮೇಲೆ ಕಲ್ಲು ತೂರಿದರು. ಪೊಲೀಸರು ಪರಿಸ್ಥಿತಿಯನ್ನು ಹತೋಟಿಗೆ ತರಲು ಪ್ರಯತ್ನಿಸಿ ನಂತರ ಅಶ್ರುವಾಯು ಬಳಸಿದರು ಎಂದು ಪೊಲೀಸ್ ವರಿಷ್ಠಾಧಿಕಾರಿ ಕೃಷ್ಣ ಕುಮಾರ್ ವಿಷ್ಣೋಯ್ ಹೇಳಿದ್ದಾರೆ. ಕಲ್ಲು ತೂರಾಟ ನಡೆಸಿದವರು ಹಾಗೂ ಪ್ರಚೋದನೆ ನೀಡಿದವರನ್ನು ಗುರುತಿಸಿ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.

ಕೆಲವು ಕಿಡಿಗೇಡಿಗಳು ಕಲ್ಲು ತೂರಾಟ ನಡೆಸಿದ್ದಾರೆ ಆದರೆ ಈಗ ಪರಿಸ್ಥಿತಿ ಶಾಂತವಾಗಿದ್ದು, ಸಮೀಕ್ಷೆ ನಡೆಯುತ್ತಿದೆ ಎಂದು ಜಿಲ್ಲಾಧಿಕಾರಿ ರಾಜೇಂದ್ರ ಪೆಸಿಯಾ ತಿಳಿಸಿದರು. ಸಂಭಾಲ್‌ನಲ್ಲಿ ಸಮೀಕ್ಷೆಯ ಸ್ಥಳದ ಬಳಿ ಯುವಕರು ಪೊಲೀಸರ ಮೇಲೆ ಕಲ್ಲು ಎಸೆಯುವ ವಿಡಿಯೋಗಳು ಅಂತರ್ಜಾಲದಲ್ಲಿ ಕಾಣಿಸಿಕೊಂಡಿವೆ. ಸಿವಿಲ್ ನ್ಯಾಯಾಧೀಶರ ನ್ಯಾಯಾಲಯವು ಮಸೀದಿಯನ್ನು ಸಮೀಕ್ಷೆ ಮಾಡಲು ಅಡ್ವೋಕೇಟ್ ಆಯೋಗ ವನ್ನು ರಚಿಸುವಂತೆ ಆದೇಶಿಸಿದೆ ಎಂದು ಹೇಳಿದರು. ಆಯೋಗದ ಮೂಲಕ ವಿಡಿಯೋಗ್ರಫಿ ಮತ್ತು ಫೋಟೋಗ್ರಫಿ ಸಮೀಕ್ಷೆ ನಡೆಸಿ ವರದಿ ಸಲ್ಲಿಸಬೇಕು ಎಂದು ನ್ಯಾಯಾಲಯ ಹೇಳಿದೆ.

> ಕೇಂದ್ರ ಮತ್ತು ಉತ್ತರ ಪ್ರದೇಶ ಸರ್ಕಾರಗಳು, ಮಸೀದಿ ಸಮಿತಿ ಮತ್ತು ಸಂಭಾಲ್ ಜಿಲ್ಲಾ ಮ್ಯಾಜಿಸ್ಟ್ರೇಟ್ ಅವರನ್ನು ಮಸೀದಿಗೆ ಸಂಬಂಧಿಸಿದ ಅರ್ಜಿಯಲ್ಲಿ ಪಕ್ಷವನ್ನಾಗಿ ಮಾಡಲಾಗಿದೆ
> -ವಕೀಲ ಜೈನ್

ಚಳಿಗಾಲದ ಸಂಸತ್ ಅಧಿವೇಶನದಲ್ಲಿ ವಕ್ಫ್ ತಿದ್ದುಪಡಿ ಮಸೂದೆ ಮಂಡನೆ

ನವದೆಹಲಿ: ಸಂಸತ್ತಿನ ಚಳಿಗಾಲದ ಅಧಿವೇಶನದ ಮುನ್ನ ಸದನವನ್ನು ಸುಗಮವಾಗಿ ನಡೆಸಲು ಕೇಂದ್ರ ಸರ್ಕಾರ ಸಂಸದೀಯ ನಾಯಕ ಸಭೆ ಕರೆದಿದೆ.

ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮತ್ತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಸಭೆಯನ್ನು ಕರೆದಿದ್ದಾರೆ, ಕಾಂಗ್ರೇಸ್, ತೃಣಮೂಲ, ಡಿಎಂಕೆ, ಶಿವಸೇನೆ, ಬಿಜೆಡಿ ಮತ್ತು ಇತರ ನಾಯಕರು ಚರ್ಚೆಯಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ.

ಸಂಸತ್ತಿನ ಚಳಿಗಾಲದ ಅಧಿವೇಶನವು ಡಿಸೆಂಬರ್ 20 ರವರೆಗೆ ನಡೆಯಲಿದೆ. ಸರ್ಕಾರವು ವಕ್ಫ್ ತಿದ್ದುಪಡಿ ಮಸೂದೆ ಸೇರಿದಂತೆ 16 ಮಸೂದೆಗಳನ್ನು ಪರಿಗಣನೆಗೆ ಪಟ್ಟಿ ಮಾಡಿದೆ, ಆದರೆ ಮಣಿಪುರದಲ್ಲಿ ನಡೆಯುತ್ತಿರುವ ಜನಾಂಗೀಯ ಹಿಂಸಾಚಾರ, ಲಂಚದ ಆರೋಪದಲ್ಲಿ ಉದ್ಯಮಿ ಗೌತಮ್ ಅದಾನಿ ವಿರುದ್ಧ ಯುಎಸ್ ನ್ಯಾಯಾಲಯದಿಂದ ದೋಷಾರೋಪಣೆವಿಷಯಗಳನ್ನು ಪ್ರಸ್ತಾಪಿಸಲು ಪ್ರತಿಪಕ್ಷಗಳು ಉತ್ಸುಕವಾಗಿವೆ.

ಅದಾನಿ ವಿರುದ್ಧದ ದೋಷಾರೋಪಣೆಯ ವಿಷಯದ ಕುರಿತು ತನಿಖೆಗೆ ಜಂಟಿ ಸಂಸದೀಯ ಸಮಿತಿ ರಚನೆಗೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಒತ್ತಾಯಿಸಿದ್ದು, ಇದಕ್ಕೆ ಹಲವಾರು ವಿರೋಧ ಪಕ್ಷದ ನಾಯಕರು ದನಿಗೂಡಿಸಿದ್ದಾರೆ. ಸಂವಿಧಾನದ ಅಂಗೀಕಾರದ 75 ನೇ ವಾರ್ಷಿಕೋತ್ಸವದ ಅಂಗವಾಗಿ ನ.26 ರಂದು ಸದನದ ಸೆಂಟ್ರಲ್ ಹಾಲ್ನಲ್ಲಿ (ಹಳೆಯ ಸಂಸತ್ತಿನ ಕಟ್ಟಡ) ಕಾರ್ಯಕ್ರಮ ಆಯೋಜಿಸಲು ಸಭೆಯಲ್ಲಿ ಚರ್ಚಿಸುವ ಸಾಧ್ಯತೆಯಿದೆ.

ಲೋಕಸಭೆಯಲ್ಲಿ ಬಾಕಿ ಉಳಿದಿರುವ ಮಸೂದೆಗಳು ವಕ್ಫ್ (ತಿದ್ದುಪಡಿ) ಮಸೂದೆಯನ್ನು ಒಳಗೊಂಡಿದ್ದು, ಉಭಯ ಸದನಗಳ ಜಂಟಿ ಸಮಿತಿಯು ಲೋಕಸಭೆಗೆ ತನ್ನ ವರದಿಯನ್ನು ಸಲ್ಲಿಸಿದ ನಂತರ ಪರಿಗಣನೆಗೆ ಮತ್ತು ಅಂಗೀಕಾರಕ್ಕಾಗಿ ಪಟ್ಟಿ ಮಾಡಲಾಗಿದೆ.

> ವಕ್ಫ್ (ತಿದ್ದುಪಡಿ) ಮಸೂದೆ ಮತ್ತು ಮುಸಲ್ಮಾನ್ ವಕ್ಫ್ (ರದ್ದತಿ) ಮಸೂದೆ ಸೇರಿದಂತೆ ಎಂಟು ಮಸೂದೆಗಳು ಲೋಕಸಭೆಯಲ್ಲಿ ಬಾಕಿ ಉಳಿದಿವೆ. ಲೋಕಸಭೆಯ ಬುಲೆಟಿನ್ ಪ್ರಕಾರ, ರಾಜ್ಯಸಭೆಯಲ್ಲಿ ಎರಡು ಮಸೂದೆಗಳು ಬಾಕಿ ಉಳಿದಿವೆ.

ಸಮಿತಿಯು ಚಳಿಗಾಲದ ಅಧಿವೇಶನದ ಮೊದಲ ವಾರದ ಕೊನೆಯ ದಿನದಂದು ತನ್ನ ವರದಿಯನ್ನು ಸಲ್ಲಿಸುವುದು ಕಡ್ಡಾಯವಾಗಿದೆ. ಸಮಿತಿಯಲ್ಲಿರುವ ವಿರೋಧ ಪಕ್ಷದ ಸದಸ್ಯರು ವರದಿ ಸಲ್ಲಿಸಲು ಕಾಲಮಿತಿಯನ್ನು ವಿಸ್ತರಿಸುವಂತೆ ಒತ್ತಾಯಿಸುತ್ತಿದ್ದಾರೆ. ಸಮಿತಿಯ ಅಧ್ಯಕ್ಷೆ ಜಗದಾಂಬಿಕಾ ಪಾಲ್, ಬಿಜೆಪಿ ಸಂಸದರು ಸಮಿತಿ ಸಭೆಗಳನ್ನು ಬುಲ್ಡೋಜರ್ ಮಾಡುತ್ತಿದ್ದಾರೆ ಎಂದು ಅವರು ಆರೋಪಿಸಿದ್ದು, ಸ್ಪೀಕರ್ ಓಂ ಬಿರ್ಲಾ ಅವರ ಮಧ್ಯಸ್ಥಿಕೆಗೆ ಕೋರಿದ್ದಾರೆ. 2024-25 ರ ಅನುದಾನಕ್ಕಾಗಿ ಪೂರಕ ಬೇಡಿಕೆಗಳ ಮೊದಲ ಬ್ಯಾಚ್ನ ಪ್ರಸ್ತುತಿ, ಚರ್ಚೆ ಮತ್ತು ಮತದಾನವನ್ನು ಸಹ ಪಟ್ಟಿ ಮಾಡಲಾಗಿದೆ.

ಪರಿಚಯ, ಪರಿಗಣನೆ ಮತ್ತು ಅಂಗೀಕಾರಕ್ಕಾಗಿ ಸರ್ಕಾರವು ಪಟ್ಟಿ ಮಾಡಿರುವ ಇತರ ಮಸೂದೆಯು ಪಂಜಾಬ್ ನ್ಯಾಯಾಲಯಗಳ (ತಿದ್ದುಪಡಿ) ಮಸೂದೆಯಾಗಿದ್ದು, ದೆಹಲಿ ಜಿಲ್ಲಾ ನ್ಯಾಯಾಲಯಗಳ ಮೇಲನವಿ ಅಧಿಕಾರ ವ್ಯಾಪ್ತಿಯನ್ನು ಅಸ್ತಿತ್ವದಲ್ಲಿರುವ 3 ಲಕ್ಷದಿಂದ 20 ರೂ.ಗೆ ಹೆಚ್ಚಿಸುವುದು, ಮರ್ಚೆಂಟ್ ಶಿಪ್ಪಿಂಗ್ ಬಿಲ್ ಅನ್ನು ಸಹ ಒಳಗೊಂಡಿದೆ.

ಮಹಾ ಕುಂಭಮೇಳ: ಉತ್ತರ ಪ್ರದೇಶ ಪೊಲೀಸರಿಗೆ ಸಾತ್ವಿಕ ಆಹಾರ, ಮದ್ಯಪಾನ ವರ್ಜನೆ

ಪ್ರಯಾಗ್ ರಾಜ್: ಜನವರಿ ತಿಂಗಳಿನಿಂದ ಆರಂಭವಾಗುವ ಕುಂಭಮೇಳಕ್ಕೆ ಸಂಗಮ ನಗರಿ ಪ್ರಯಾಗ್ ರಾಜ್ ಸಜ್ಜುಗೊಳ್ಳುತ್ತಿದೆ.

ಯಾತ್ರಾರ್ಥಿಗಳ ಸೇವೆಗೆ ನಿಯೋಜನೆಗೊಳ್ಳಲಿರುವ ಪೊಲೀಸ್ ಸಿಬ್ಬಂದಿಗಳಿಗೆ ತರಬೇತಿ ನೀಡಲಾಗುತ್ತಿದೆ. ತರಬೇತಿಯ ಭಾಗವಾಗಿ ಪೊಲೀಸ್ ಸಿಬ್ಬಂದಿಗಳು ಸಾತ್ವಿಕ ಆಹಾರ, ಮದ್ಯಪಾನವನ್ನು ವರ್ಜನೆ ಮೊರೆ ಹೋಗುತ್ತಿದ್ದಾರೆ. ಜ.13 ರಿಂದ ಫೆ.26 ವರೆಗೆ ಮಹಾ ಕುಂಭಮೇಳ ನಡೆಯಲಿದೆ. ಹಿರಿಯ ಪೊಲೀಸ್ ಅಧೀಕ್ಷಕ (ಕುಂಭ) ರಾಜೇಶ್ ದ್ವಿವೇದಿ ಅವರು ಭದ್ರತೆಯನ್ನು ನಿರ್ವಹಿಸುವುದರ ಜೊತೆಗೆ ಯಾತ್ರಾರ್ಥಿಗಳಿಗೆ ಸ್ವಾಗತಾರ್ಹ ವಾತಾವರಣವನ್ನು ಬೆಳೆಸುವುದು ಪೊಲೀಸರ ಪ್ರಾಥಮಿಕ ಗಮನವಾಗಿದೆ ಎಂದು ಹೇಳಿದ್ದಾರೆ.

ಭಕ್ತರಿಗೆ ಆಹ್ಲಾದಕರ ಅನುಭವವನ್ನು ನೀಡುವುದು ನಮ್ಮ ಉದ್ದೇಶವಾಗಿದೆ ಮತ್ತು ಪೊಲೀಸರು ಆತ್ಮೀಯತೆಯಿಂದ ವರ್ತಿಸುತ್ತಾರೆ-- ಕಾನೂನು ಪರಿಪಾಲಕರಾಗಿ ಮಾತ್ರವಲ್ಲದೆ ನಂಬಿಕೆಯ ಸೇವಕರಂತೆ ನಡೆದುಕೊಳ್ಳಲಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಮಹಾಕುಂಭಕ್ಕೆ ನಿಯೋಜನೆಗೊಳ್ಳಲಿರುವ ಪೊಲೀಸ್ ಸಿಬ್ಬಂದಿಗಳು ಮೇಳದ ಪ್ರದೇಶದಲ್ಲಿ ಗೊತ್ತುಪಡಿಸಿದ ಸೌಲಭ್ಯದಲ್ಲಿ ನಡವಳಿಕೆ-ಕೇಂದ್ರಿತ ತರಬೇತಿಯನ್ನು ಪಡೆಯುತ್ತಿದ್ದಾರೆ. ಶಿಷ್ಟಾಚಾರ ಮತ್ತು ಸಾರ್ವಜನಿಕ ಸೇವೆಯಲ್ಲಿ ಪಾಠಗಳನ್ನು ಕಲಿಸಲು ಬಾಹ್ಯ ತರಬೇತುದಾರರನ್ನು ಸಹ ಆಹ್ವಾನಿಸಲಾಗುತ್ತಿದೆ. ಇಲ್ಲಿಯವರೆಗೆ 1,500 ಪೊಲೀಸ್ ಸಿಬ್ಬಂದಿ ತರಬೇತಿ ಪೂರ್ಣಗೊಳಿಸಿದ್ದಾರೆ. ಮೇಳ ಪ್ರಾರಂಭವಾಗುವ ಹೊತ್ತಿಗೆ 40,000 ಸಿಬ್ಬಂದಿ ತರಬೇತಿಯನ್ನು ಪೂರ್ಣಗೊಳಿಸುತ್ತಾರೆ.

21 ದಿನಗಳ ಮಾಡ್ಯೂಲ್ ನಂತರ 700 ಪೊಲೀಸ್ ಸಿಬ್ಬಂದಿ ಏಕಕಾಲದಲ್ಲಿ ತರಬೇತಿ ಪಡೆಯುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಆಟೋಗೆ ಸರ್ಕಾರಿ ಬಸ್ ಡಿಕ್ಕಿಯಾಗಿ 7 ಮಂದಿ ಸಾವು

ಅನಂತಪುರ: ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯ ಗಾರ್ಲದಿನ್ನೆ ಮಂಡಲದ ತಲಗಸ್ಪಲ್ಲಿ ಬಳಿ ಬೆಳಿಗ್ಗೆ ಕೃಷಿ ಕಾರ್ಮಿಕರನ್ನು ಕರೆದೊಯ್ಯುತ್ತಿದ್ದ ಆಟೋಗೆ ಸರ್ಕಾರಿ ಸಾರಿಗೆ (ಎಆರ್‌ಟಿಸಿ) ಬಸ್ ಡಿಕ್ಕಿ ಹೊಡೆದ ಪರಿಣಾಮ ಏಳು ಮಂದಿ ಸಾವನ್ನಪ್ಪಿದ್ದು, ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಕ

ಬಿಗ್ ಬಿ ಮೊಮ್ಮಗನ ಜೊತೆ ಸುಹಾನಾ ಖಾನ್

ಫೋಟೋ ವೈರಲ್-ಡೇಟಿಂಗ್ ಬಗ್ಗೆ ಶುರುವಾಯ್ತು ಚರ್ಚೆ

ಬಾಲಿವುಡ್‌ನ ಸ್ಟಾರ್ ನಟ ಶಾರುಖ್ ಖಾನ್ ಪುತ್ರಿ ಸುಹಾನಾ ಖಾನ್ ಅವರು ಬಿಗ್ ಬಿ ಮೊಮ್ಮಗ ಅಗಸ್ತ್ಯ ನಂದ ಬರ್ತ್‌ಡೇ ವಿಶ್ ಮಾಡಿದ್ದಾರೆ. ಇಬ್ಬರ ಫೋಟೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗ್ತಿದ್ದಂತೆಡೇಟಿಂಗ್ ವಿಚಾರ ಮತ್ತೆ ಚರ್ಚೆಗೆ ಗ್ರಾಸವಾಗಿದೆ. ಶಾರುಖ್ ಪುತ್ರಿ ಸುಹಾನಾ ಮತ್ತು ಅಗಸ್ತ್ಯ ಡೇಟಿಂಗ್ ವಿಚಾರ ಹಳೇಯದು. ಆದರೆ ಈ ವಿಚಾರಕ್ಕೆ ಇನ್ನೂ ಸ್ಪಷ್ಟನೆ ಸಿಕ್ಕಿಲ್ಲ. ಇದೀಗ ಮತ್ತೆ ಇಬ್ಬರ ಡೇಟಿಂಗ್ ವಿಚಾರಕ್ಕೆ ಪುಷ್ಟಿ ನೀಡುವಂತಹ ಫೋಟೋವೊಂದು ಸಖತ್ ವೈರಲ್ ಆಗುತ್ತಿದೆ. ಅಗಸ್ತ್ಯ ಹುಟ್ಟುಹಬ್ಬಕ್ಕೆ ನಟಿ, ಬ್ಲ್ಯಾಕ್ ವೈಟ್ ಫೋಟೋವೊಂದನ್ನು ಶೇರ್ ಮಾಡಿದ್ದಾರೆ. ಸುಹಾನಾ ಮುದ್ದಾದ ನಗು ಬೀರುತ್ತಾ ಅಗಸ್ತ್ಯನ ಕಿವಿ ಹಿಂಡಿದ್ದಾರೆ. ಅದಕ್ಕೆ 'ಹ್ಯಾಪಿ ಬರ್ತ್‌ಡೇ' ಅಂತ ಕ್ಯಾಪ್ಷನ್ ನೀಡಿದ್ದಾರೆ.

ಈ ಜೋಡಿ ಒಡನಾಟ ನೋಡಿ ಇಬ್ಬರು ಡೇಟಿಂಗ್ ಮಾಡುತ್ತಿದ್ದಾರೆ ಎಂದು ನೆಟ್ಟಿಗರಿಂದ ಕಾಮೆಂಟ್‌ಗಳಸುರಿ ಮಳೆ ಹರಿದು ಬರುತ್ತಿದೆ. ರೀಲ್‌ನಲ್ಲಿ ಜೊತೆಯಾಗಿ ನಟಿಸಿದ್ದಾರೆ. ರಿಯಲ್ ಆಗಿಯೂ ಜೋಡಿಯಾದ್ರೆ ಚೆನ್ನಾಗಿರುತ್ತದೆ ಎಂದು ಫ್ಯಾನ್ಸ್ ಕಾಮೆಂಟ್ ಮಾಡಿದ್ದಾರೆ. ಡೇಟಿಂಗ್ ಕುರಿತು ಹರಿದಾಡುತ್ತಿರುವ ವಿಚಾರಕ್ಕೆ ಸುಹಾನಾ, ಅಗಸ್ತ್ಯ ಪ್ರತಿಕ್ರಿಯೆ ನೀಡುತ್ತಾರಾ ಎಂದು ಕಾದುನೋಡಬೇಕಿದೆ.

ಅಂದಹಾಗೆ, 2023ರಲ್ಲಿ ರಿಲೀಸ್ ಆಗಿದ್ದ 'ದಿ ಆರ್ಚೀಸ್' ಎಂಬ ಸಿನಿಮಾದಲ್ಲಿ ಅಗಸ್ತ್ಯ, ಸುಹಾನಾ ಖಾನ್, ಖುಷಿ ಕಪೂರ್, ವೇದಾಂಗ್ ರೈನಾ ಸೇರಿದಂತೆ ಅನೇಕರು ನಟಿಸಿದರು.

ಟಾಕ್ಸಿಕ್‌ನಲ್ಲಿ ಮತ್ತೊಬ್ಬ ಬಾಲಿವುಡ್ ನಟಿ

ನ್ಯಾಷನಲ್ ಸ್ಟಾರ್ ಯಶ್ ನಟನೆಯ 'ಟಾಕ್ಸಿಕ್' ಸಿನಿಮಾದ ಶೂಟಿಂಗ್ ಮುಂಬೈನಲ್ಲಿ ನಡೆಯುತ್ತಿದೆ. ಕಿಯಾರಾ ಬಳಿಕ ಮತ್ತೊಬ್ಬ ಬಾಲಿವುಡ್ ಬೆಡಗಿ ಹುಮಾ ಖುರೇಶಿ 'ಟಾಕ್ಸಿಕ್' ಚಿತ್ರದ ಸೆಟ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಈ ಕುರಿತ ವಿಡಿಯೋವೊಂದು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

ಮುಂಬೈನಲ್ಲಿ ನಡೆಯುತ್ತಿದ್ದ ಸಿನಿಮಾ ಶೂಟಿಂಗ್ ಸ್ಥಳದಲ್ಲಿ ಹುಮಾ ಖುರೇಶಿ ಕಾಣಿಸಿಕೊಂಡಿದ್ದಾರೆ. ಹಾಗಾಗಿ 'ಟಾಕ್ಸಿಕ್' ಸಿನಿಮಾಗೆ ನಟಿ ಎಂಟ್ರಿ ಕೊಟ್ಟಿರುವ ಬಗ್ಗೆ ಚರ್ಚೆ ಶುರುವಾಗಿದೆ. ಸೆಟ್‌ಗೆ ಬರುತ್ತಿರುವ ನಟಿಯ ವಿಡಿಯೋ ಇಂಟರ್‌ನೆಟ್‌ನಲ್ಲಿ ವೈರಲ್ ಆಗುತ್ತಿದೆ. ಚಿತ್ರತಂಡಕ್ಕೆ ನಟಿ ಸಾಥ್ ನೀಡುವ ಕುರಿತು ಚಿತ್ರತಂಡ ಕ್ಲ್ಯಾರಿಟಿ ನೀಡುತ್ತಾರಾ ಎಂದು ಕಾದುನೋಡಬೇಕಿದೆ.

ಅಂದಹಾಗೆ, ಆ.8ರಂದು 'ಟಾಕ್ಸಿಕ್' ಸಿನಿಮಾದ ಮುಹೂರ್ತ ಸರಳವಾಗಿ ಜರುಗಿತ್ತು. 'ಟಾಕ್ಸಿಕ್' ಚಿತ್ರದ ಶೂಟಿಂಗ್ ಬೆಂಗಳೂರಿನಲ್ಲಿ ಚಿತ್ರೀಕರಿಸಲಾಗಿದೆ. ಇದೀಗ ಮುಂಬೈನಲ್ಲಿ ತಂಡ ಬೀಡು ಬಿಟ್ಟಿದೆ. ಯಶ್ ನಟನೆಯ ಈ ಚಿತ್ರವು ಡ್ರಗ್ಸ್ ಮಾಫಿಯಾ ಕುರಿತಾದ ಕಥೆ ಎನ್ನಲಾಗಿದೆ. ಇನ್ನೂ ಈ ಚಿತ್ರವನ್ನು ಮಲಯಾಳಂ ಖ್ಯಾತ ನಿರ್ದೇಶಕಿ ಗೀತು ಮೋಹನ್‌ದಾಸ್ ನಿರ್ದೇಶನ ಮಾಡುತ್ತಿದ್ದಾರೆ. ಚಿತ್ರಕ್ಕೆ ಕೆವಿಎನ್ ಸಂಸ್ಥೆ ಜೊತೆ ಯಶ್ ಕೂಡ ಜಂಟಿಯಾಗಿ ನಿರ್ಮಾಣಕ್ಕೆ ಸಾಥ್ ನೀಡಿದ್ದಾರೆ. ಬಹುಭಾಷೆಗಳಲ್ಲಿ ಸಿನಿಮಾ ಮೂಡಿ ಬರಲಿದೆ.

ಡ್ರಗ್ಸ್ ಮಾಫಿಯಾ ಕುರಿತಾದ ಕಥೆ

'ವಾರ್ 2' ಸಿನಿಮಾದಲ್ಲಿ ಶ್ರದ್ಧಾ ಕಪೂರ್ ಐಟಂ ಡ್ಯಾನ್ಸ್

'ಸ್ತ್ರೀ 2 ಸಿನಿಮಾದ ದೊಡ್ಡ ಯಶಸ್ಸಿನ ಬಳಿಕ ಶ್ರದ್ಧಾ ಕಪೂರ್‌ಗೆ ಬೇಡಿಕೆ ಹೆಚ್ಚಾಗಿದೆ. ಹಾಗಂತ ಬಂದ ಸಿನಿಮಾ ಆಫರ್‌ಗಳನ್ನು ಅವರು ಒಪ್ಪಿಕೊಳ್ತಿಲ್ಲ. ಹೀಗಿರುವಾಗ 'ವಾರ್ 2' ಸಿನಿಮಾದಲ್ಲಿ ಶ್ರದ್ಧಾ ಕಪೂರ್ ಐಟಂ ಹಾಡಿಗೆ ಹೆಜ್ಜೆ ಹಾಕಲಿದ್ದಾರೆ ಎನ್ನಲಾದ ಸುದ್ದಿಯೊಂದು ಚರ್ಚೆಗೆ ಗ್ರಾಸವಾಗಿದೆ. ಶ್ರದ್ಧಾ ಕಪೂರ್ ಅವರು 'ಸ್ತ್ರೀ 2' ಸಿನಿಮಾ ಮೂಲಕ ಸಕ್ಸಸ್ ಕಂಡ ಮೇಲೆ ನಾಯಕಿಯಾಗಿ ಮತ್ತು ಸ್ಪೆಷಲ್ ಹಾಡುಗಳಿಗೆ ಹೆಜ್ಜೆ ಹಾಕಲು ಬುಲಾವ್ ಬರುತ್ತಿದೆ. ಈ ಹಿಂದೆ 'ಪುಷ್ಪ 2'ಗೆ ನಟಿಯನ್ನು ಕೇಳಲಾಗಿತ್ತು. ಆದರೆ ಸಂಭಾವನೆ ವಿಚಾರದಲ್ಲಿ ಹೊಂದಾಣಿಕೆ ಆಗದೇ ಇದ್ದಿದ್ದಕ್ಕೆ ಅವರನ್ನು ಕೈಬಿಡಲಾಯಿತು ಎಂಬ ಸುದ್ದಿ ಹರಿದಾಡಿತ್ತು. ಇದೀಗ 'ವಾರ್ 2' ಚಿತ್ರದಲ್ಲಿ ಶ್ರದ್ಧಾ ಹೆಸರು ಸದ್ದು ಮಾಡುತ್ತಿದೆ.

ಜ್ಯೂ.ಎನ್‌ಟಿಆರ್, ಹೃತಿಕ್ ರೋಷನ್ ಜೊತೆ ಸ್ಪೆಷಲ್ ಹಾಡಿಗೆ ಹೆಜ್ಜೆ ಹಾಕಲು ಶ್ರದ್ಧಾರನ್ನು ಚಿತ್ರತಂಡ ಸಂಪರ್ಕಿಸಿದೆ ಎನ್ನಲಾಗಿದೆ. ಈಗಾಗಲೇ ಒಂದು ಹಂತದ ಮಾತುಕತೆ ನಡೆದಿದೆ ಎನ್ನಲಾಗಿದೆ. ಆದರೆ ನಟಿ ಗ್ರೀನ್ ಸಿಗ್ನಲ್ ಕೊಟ್ರಾ ಚಿತ್ರತಂಡದ ಭಾಗವಾಗ್ತಿದ್ದಾರಾ ಎಂಬುದು ಅಧಿಕೃತವಾಗಿ ತಿಳಿಸುವವರೆಗೂ ಕಾದುನೋಡಬೇಕಿದೆ.

ಜೂ.ಎನ್ ಟಿಆರ್ ಬಳಿಕ ಕರ್ನಾಟಕಕ್ಕೆ ಬಂದ ಸ್ಟಾರ್!

ಕೆಲ ತಿಂಗಳ ಹಿಂದಷ್ಟೆ ತೆಲುಗಿನ ಸ್ಟಾರ್ ನಟ ಜೂ ಎನ್‌ಟಿಆರ್, ರಿಷಬ್ ಶೆಟ್ಟಿ ಅವರನ್ನು ಹುಡುಕಿಕೊಂಡು ಕರ್ನಾಟಕಕ್ಕೆ ಬಂದಿದ್ದರು. ಎನ್‌ಟಿಆರ್ ಅವರನ್ನು ರಿಷಬ್ ಶೆಟ್ಟಿ ಕುಂದಾಪುರ ಇನ್ನಿತರೆ ಕಡೆಗಳಿಗೆ ಕರೆದುಕೊಂಡು ಹೋಗಿದ್ದರು. ಖ್ಯಾತ ತೆಲುಗು ನಟ ರಾಣಾ ದಗ್ಗುಬಾಟಿ ಕರ್ನಾಟಕಕ್ಕೆ ಆಗಮಿಸಿ ಕನ್ನಡ ಖ್ಯಾತ ನಟ-ನಿರ್ದೇಶಕ ರಿಷಬ್ ಶೆಟ್ಟಿ ಅವರನ್ನು ಭೇಟಿ ಮಾಡಿದ್ದಾರೆ. ಕೆಲ ತಿಂಗಳ ಹಿಂದಷ್ಟೆ ತೆಲುಗಿನ ಸ್ಟಾರ್ ನಟ ಜೂ ಎನ್‌ಟಿಆರ್, ರಿಷಬ್ ಶೆಟ್ಟಿ ಅವರನ್ನು ಹುಡುಕಿಕೊಂಡು ಕರ್ನಾಟಕಕ್ಕೆ ಬಂದಿದ್ದರು. ಎನ್‌ಟಿಆರ್ ಅವರನ್ನು ರಿಷಬ್ ಶೆಟ್ಟಿ ಕುಂದಾಪುರ ಇನ್ನಿತರೆ ಕಡೆಗಳಿಗೆ ಕರೆದುಕೊಂಡು ಹೋಗಿದ್ದರು. ಕೆಲವು ದೇವಾಲಯಗಳ ಭೇಟಿ ಮಾಡಿಸಿದ್ದರು. ಈಗ ತೆಲುಗಿನ ಮತ್ತೊಬ್ಬ ಸ್ಟಾರ್ ನಟ ರಿಷಬ್ ಶೆಟ್ಟಿಗಾಗಿ ಕರ್ನಾಟಕಕ್ಕೆ ಬಂದಿದ್ದಾರೆ.

ತೆಲುಗು ಮಾತ್ರವೇ ಅಲ್ಲದೆ ಬಾಲಿವುಡ್‌ನಲ್ಲಿಯೂ ಹೆಸರು ಮಾಡಿರುವ ನಟ, ನಿರ್ಮಾಪಕ, ವಿತರಕ ರಾಣಾ ದಗ್ಗುಬಾಟಿ ಕೆಲ ದಿನಗಳ ಹಿಂದೆ, ರಿಷಬ್ ಶೆಟ್ಟಿ ಅವರನ್ನು ಹುಡುಕಿಕೊಂಡು ಕರ್ನಾಟಕಕ್ಕೆ ಬಂದಿದ್ದರು. ಮೂಲಗಳ ಪ್ರಕಾರ ರಾಣಾ ದಗ್ಗುಬಾಟಿ, ಒಟಿಟಿ ಶೋ ಕಾರಣಕ್ಕೆ ರಿಷಬ್ ಶೆಟ್ಟಿಯನ್ನು ಭೇಟಿ ಆಗಿದ್ದಾರೆ ಎನ್ನಲಾಗಿದೆ. ರಾಣಾ ದಗ್ಗುಬಾಟಿ ಹೊಸದೊಂದು ಒಟಿಟಿ ಶೋ ನಿರೂಪಣೆ ಮಾಡುತ್ತಿದ್ದು, ಶೋನ ಹೋಸ್ಟ್ ಅವರೇ ಆಗಿದ್ದಾರೆ.

'ಅಮರನ್' ಸಿನಿಮಾ; ಒಟಿಟಿ ಬಿಡುಗಡೆ ವಿಳಂಬ

ಬಾಕ್ಸ್ ಆಫೀಸ್‌ನಲ್ಲಿ 'ಅಮರನ್' ಸಿನಿಮಾ ಭರ್ಜರಿ ಕಲೆಕ್ಷನ್ ಮಾಡಿದೆ. ಯಶಸ್ವಿಯಾಗಿ 25 ದಿನಗಳ ಪ್ರದರ್ಶನ ಕಂಡಿದೆ. ಈ ಸಿನಿಮಾದಿಂದ ಶಿವಕಾರ್ತಿಕೇಯನ್, ಸಾಯಿ ಪಲ್ಲವಿ ಅವರಿಗೆ ಗೆಲುವು ಸಿಕ್ಕಿದೆ. ಎಲ್ಲಾ ವರ್ಗದ ಪ್ರೇಕ್ಷಕರು ಈ ಚಿತ್ರವನ್ನು ಇಷ್ಟಪಟ್ಟಿದ್ದಾರೆ. ಥಿಯೇಟರ್‌ನಲ್ಲಿ ಉತ್ತಮವಾಗಿ ಪ್ರದರ್ಶನ ಕಾಣುತ್ತಿರುವ ಹಿನ್ನೆಲೆಯಲ್ಲಿ ಒಟಿಟಿ ರಿಲೀಸ್ ವಿಳಂಬ ಆಗುವ ಸಾಧ್ಯತೆ ಇದೆ.

ಮೇಜರ್ ಮುಕುಂದ್ ವರದರಾಜನ್ ಅವರ ಬದುಕಿನ ನೈಜ ಘಟನೆಗಳನ್ನು ಆಧರಿಸಿ ತಯಾರಾದ 'ಅಮರನ್' ಚಿತ್ರಕ್ಕೆ ಪ್ರೇಕ್ಷಕರ ಮೆಚ್ಚುಗೆ ಸಿಕ್ಕಿದೆ. ಶಿವ ಕಾರ್ತಿಕೇಯನ್ ಅವರು ಈ ಸಿನಿಮಾದಲ್ಲಿ ವರದರಾಜನ್ ಪಾತ್ರವನ್ನು ಮಾಡಿದ್ದಾರೆ. ನಟನೆಯ ಮೂಲಕ ಅವರು ಆ ಪಾತ್ರಕ್ಕೆ ಜೀವ ತುಂಬಿದ್ದಾರೆ. ವರದರಾಜನ್ ಪತ್ನಿ ರೆಬೆಕಾ ಪಾತ್ರವನ್ನು ಸಾಯಿ ಪಲ್ಲವಿ ಮಾಡಿದ್ದು, ಅವರಿಗೆ ಈ ಸಿನಿಮಾ ಮೂಲಕ ಗೆಲುವು ಸಿಕ್ಕಿದೆ. ಪ್ರೇಕ್ಷಕರ ಮತ್ತು ವಿಮರ್ಶಕರ ಮೆಚ್ಚುಗೆಗೆ ಪಾತ್ರವಾದ ಈ ಸಿನಿಮಾ ಗಲ್ಲಾಪಟ್ಟಿಗೆಯಲ್ಲಿ 300 ಕೋಟಿ ರೂಪಾಯಿಗೂ ಹೆಚ್ಚು ಕಲೆಕ್ಷನ್ ಮಾಡಿದೆ. ಚಿತ್ರಮಂದಿರಗಳಲ್ಲಿ 25 ದಿನಗಳ ಯಶಸ್ವಿ ಪ್ರದರ್ಶನ ಕಂಡಿದೆ.

'ಅಮರನ್' ಸಿನಿಮಾಗೆ ರಾಜ್‌ಕುಮಾರ್ ಪೆರಿಯಸ್ವಾಮಿ ಅವರು ನಿರ್ದೇಶನ ಮಾಡಿದ್ದಾರೆ. ಕಮಲ್ ಹಾಸನ್ ಅವರು ಕೂಡ ಈ ಸಿನಿಮಾದ ನಿರ್ಮಾಣದಲ್ಲಿ ಕೈ ಜೋಡಿಸಿದ್ದಾರೆ.

25 ದಿನ ಯಶಸ್ವಿ ಪ್ರದರ್ಶನ

ಆರ್‌ಸಿಬಿಗೆ ಬರಲಿಲ್ಲ ಕನ್ನಡಿಗ

ಕಳೆದ ಐಪಿಎಲ್‌ನಲ್ಲಿ ಲಕ್ನೋ ಸೂಪರ್‌ಜೈಂಟ್ಸ್ ತಂಡವನ್ನು ಮುನ್ನಡೆಸಿದ್ದ ಕನ್ನಡಿಗ ಕೆಎಲ್ ರಾಹುಲ್, ಇದೀಗ ಮುಂದಿನ ಆವೃತ್ತಿಯಿಂದ ಹೊಸ ತಂಡದ ಪರ ಕಣಕ್ಕಿಳಿಯಲಿದ್ದಾರೆ. ರಾಹುಲ್ ಆರ್‌ಸಿಬಿ ಪರ ಕಣಕ್ಕಿಳಿಯುತ್ತಾರೆ ಎಂದುಕೊಂಡರೆ ಅದು ನಿಮ್ಮ ತಪ್ಪು ಕಲ್ಪನೆಯಾಗಿದೆ. ಏಕೆಂದರೆ ರಾಹುಲ್‌ರನ್ನು ಖರೀದಿಸಲು ಆರ್‌ಸಿಬಿ ಮನಸು ಮಾಡಲಿಲ್ಲ. ಹೀಗಾಗಿ ರಾಹುಲ್ ಡೆಲ್ಲಿ ಕ್ಯಾಪಿಟಲ್ಸ್ ಪಾಲಾದರು.

ಡೆಲ್ಲಿ ಕ್ಯಾಪಿಟಲ್ಸ್ ಫ್ರಾಂಚೈಸಿ ರಾಹುಲ್‌ರನ್ನು ಅತ್ಯಂತ ಕಡಿಮೆ ಮೊತ್ತಕ್ಕೆ ತನ್ನ ತಂಡಕ್ಕೆ ಸೇರಿಸಿಕೊಂಡಿದೆ. ಕಳೆದ ಆವೃತ್ತಿಯಲ್ಲಿ ಲಕ್ನೋ ತಂಡದ ಪರ ಕಣಕ್ಕಿಳಿಯಲು 17 ಕೋಟಿ ರೂ. ಸಂಭಾವನೆ ಪಡೆಯುತ್ತಿದ್ದ ರಾಹುಲ್, ಇದೀಗ ಡೆಲ್ಲಿ ಪರ 3 ಕೋಟಿ ನಷ್ಟದಲ್ಲಿ ಅಂದರೆ 14 ಕೋಟಿ ರೂಗೆ ಬ್ಯಾಟ್ ಬೀಸಲಿದ್ದಾರೆ.

ಕೆಎಲ್ ರಾಹುಲ್ ಐಪಿಎಲ್‌ನ ಅತ್ಯಂತ ಯಶಸ್ವಿ ಬ್ಯಾಟ್ಸ್‌ಮನ್‌ಗಳಲ್ಲಿ ಒಬ್ಬರು. ಆದರೆ 2022 ರಿಂದ ಲಕ್ನೋ ಸೂಪರ್ ಜೈಂಟ್ಸ್ ತಂಡವನ್ನು ನಾಯಕನಾಗಿ ಮುನ್ನಡೆಸಿದ್ದ ರಾಹುಲ್, ಒಮ್ಮೆಯೂ ತಂಡಕ್ಕೆ ಪ್ರಶಸ್ತಿ ಗೆಲ್ಲುವಲ್ಲಿ ಯಶಸ್ವಿಯಾಗಲಿಲ್ಲ. ಈ ಕಾರಣದಿಂದಾಗಿ ಲಕ್ನೋ ಅವರನ್ನು ತಂಡದಿಂದ ಕೈಬಿಟ್ಟಿತ್ತು.

2013 ರಲ್ಲಿ ಐಪಿಎಲ್‌ಗೆ ಪಾದಾರ್ಪಣೆ ಮಾಡಿದ ರಾಹುಲ್, ಇಲ್ಲಿಯವರೆಗೆ ಐಪಿಎಲ್‌ನಲ್ಲಿ 132 ಪಂದ್ಯಗಳನ್ನು ಆಡಿದ್ದಾರೆ. ಇದರಲ್ಲಿ ಅವರು 4 ಶತಕ ಮತ್ತು 37 ಅರ್ಧ ಶತಕಗಳೊಂದಿಗೆ 4,683 ರನ್ ಗಳಿಸಿದ್ದಾರೆ. ಇದಲ್ಲದೇ ರಾಹುಲ್ 6 ಸೀಸನ್‌ಗಳಲ್ಲಿ 500ಕ್ಕೂ ಹೆಚ್ಚು ರನ್ ಗಳಿಸಿದ ಆಟಗಾರ ಎನಿಸಿಕೊಂಡಿದ್ದಾರೆ. ಕಳೆದ ಸೀಸನ್‌ನಲ್ಲಿಯೂ ಅವರು 520 ರನ್ ಗಳಿಸುವಲ್ಲಿ ಯಶಸ್ವಿಯಾಗಿದ್ದರು.

ವಾಸ್ತವವಾಗಿ, ಕಳೆದ ಸೀಸನ್‌ನಲ್ಲಿ, ಲಕ್ನೋ ಫ್ರಾಂಚೈಸಿ ಮಾಲೀಕ ಸಂಜೀವ್ ಗೋಯೆಂಕಾ ಮತ್ತು ರಾಹುಲ್ ನಡುವೆ ಮೈದಾನದಲ್ಲಿ ಮಾತಿನ ಚಕಮಕಿ ನಡೆದಿತ್ತು. ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧದ ಪಂದ್ಯದಲ್ಲಿ ಕೆಎಲ್ ರಾಹುಲ್ ಪಡೆ 10 ವಿಕೆಟ್‌ಗಳಿಂದ ಸೋಲನುಭವಿಸಿತ್ತು. ಇದಾದ ಬಳಿಕ ತಂಡದ ಡಗೌಟ್ ಬಳಿ ನಾಯಕ ಕೆಎಲ್ ರಾಹುಲ್ ಅವರನ್ನು ಮಾಲೀಕ ಸಂಜೀವ್ ಗೋಯೆಂಕಾ ಸಾರ್ವಜನಿಕವಾಗಿಯೇ ಜರಿದ್ದಿದ್ದರು. ಆ ಬಳಿಕ ರಾಹುಲ್ ಲಕ್ನೋ ತಂಡವನ್ನು ತೊರೆಯುವುದು ಖಚಿತವಾಗಿತ್ತು. ಹೀಗಾಗಿ ಹರಾಜಿಗೆ ಬರುವ ರಾಹುಲ್‌ರನ್ನು ಆರ್‌ಸಿಬಿ ಖರೀದಿಸಲಿದೆ ಎಂದು ಎಲ್ಲಾ ಅಭಿಮಾನಿಗಳು ನಿರೀಕ್ಷಿಸಿದ್ದರು.

3ನೇ ದಿನದಾಟದಲ್ಲಿ ಆಸ್ಟ್ರೇಲಿಯಾ ತತ್ತರ

ಪರ್ತ್‌ನಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯಾ ವಿರುದ್ಧದ ಮೊದಲ ಟೆಸ್ಟ್ ಪಂದ್ಯದ ದ್ವಿತೀಯ ಇನಿಂಗ್ಸ್‌ನಲ್ಲಿ ಟೀಮ್ ಇಂಡಿಯಾ ಭರ್ಜರಿ ಪ್ರದರ್ಶನ ನೀಡಿದೆ. ಈ ಪಂದ್ಯದ ಮೂರನೇ ದಿನದಾಟದಲ್ಲಿ ಅತ್ಯುತ್ತಮ ಬ್ಯಾಟಿಂಗ್ ಪ್ರದರ್ಶಿಸಿದ ಭಾರತೀಯ ಬ್ಯಾಟರ್‌ಗಳು ದ್ವಿತೀಯ ಇನಿಂಗ್ಸ್‌ನಲ್ಲಿ 487 ರನ್‌ಗಳಿಸಿ ಡಿಕ್ಲೇರ್ ಘೋಷಿಸಿದೆ. ಈ ಮೂಲಕ ಆಸೀಸ್ ಪಡೆಗೆ ಕೊನೆಯ ಇನಿಂಗ್ಸ್‌ನಲ್ಲಿ 534 ರನ್‌ಗಳ ಬೃಹತ್ ಮೊತ್ತದ ಗುರಿ ನೀಡಿದೆ.

ಇದಕ್ಕೂ ಮುನ್ನ ಈ ಪಂದ್ಯದಲ್ಲಿ ಟಾಸ್ ಗೆದ್ದ ಟೀಮ್ ಇಂಡಿಯಾ ಮೊದಲ ಇನಿಂಗ್ಸ್‌ನಲ್ಲಿ 150 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ಆಸ್ಟ್ರೇಲಿಯಾ ಪ್ರಥಮ ಇನಿಂಗ್ಸ್‌ನಲ್ಲಿ ಕೇವಲ 104 ರನ್‌ಗಳಿಗೆ ಮುಗ್ಗರಿಸಿ 46 ರನ್‌ಗಳ ಹಿನ್ನಡೆ ಅನುಭವಿಸಿತು.

ಇದರ ಬೆನ್ನಲ್ಲೇ ದ್ವಿತೀಯ ಇನಿಂಗ್ಸ್ ಆರಂಭಿಸಿದ ಟೀಮ್ ಇಂಡಿಯಾಗೆ ಕೆಎಲ್ ರಾಹುಲ್ ಹಾಗೂ ಯಶಸ್ವಿ ಜೈಸ್ವಾಲ್ ಭರ್ಜರಿ ಆರಂಭ ಒದಗಿಸಿದ್ದರು. ಮೊದಲ ವಿಕೆಟ್‌ಗೆ 201 ರನ್‌ಗಳ ಜೊತೆಯಾಟವಾಡಿದ ಬಳಿಕ ಕೆಎಲ್ ರಾಹುಲ್ (77) ಇನಿಂಗ್ಸ್ ಅಂತ್ಯಗೊಳಿಸಿದರು.

ಆ ಬಳಿಕ ಬಂದ ದೇವದತ್ ಪಡಿಕ್ಕಲ್ ಕೇವಲ 25 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಇದಾಗ್ಯೂ ಮತ್ತೊಂದೆಡೆ ಕ್ರೀಸ್ ಕಚ್ಚಿ ನಿಂತಿದ್ದ ಯಶಸ್ವಿ ಜೈಸ್ವಾಲ್ 205 ಎಸೆತಗಳಲ್ಲಿ ಶತಕ ಪೂರೈಸಿದರು. ಶತಕದ ಬಳಿಕ ಭರ್ಜರಿ ಬ್ಯಾಟಿಂಗ್ ಮುಂದುವರೆಸಿದ ಜೈಸ್ವಾಲ್ 297 ಎಸೆತಗಳಲ್ಲಿ 3 ಸಿಕ್ಸ್ ಹಾಗೂ 15 ಫೋರ್‌ಗಳೊಂದಿಗೆ 161 ರನ್ ಬಾರಿಸಿ ಔಟಾದರು. ಆ ಬಳಿಕ ಕಣಕ್ಕಿಳಿದ ಧ್ರುವ್ ಜುರೇಲ್ (1) ಹಾಗೂ ರಿಷಭ್ ಪಂತ್ (1) ಬೇಗನೆ ವಿಕೆಟ್ ಒಪ್ಪಿಸಿದರು.

ಭಾರತೀಯ ಬ್ಯಾಟರ್‌ಗಳ ಅಬ್ಬರ

ಆದರೆ ಮತ್ತೊಂದೆಡೆ ಜವಾಬ್ದಾರಿಯುತ ಬ್ಯಾಟಿಂಗ್ ಪ್ರದರ್ಶಿಸಿದ ವಿರಾಟ್ ಕೊಹ್ಲಿ ಆಕರ್ಷಕ ಹೊಡೆತಗಳ ಮೂಲಕ ಗಮನ ಸೆಳೆದರು. ಅಲ್ಲದೆ 143 ಎಸೆತಗಳಲ್ಲಿ ಶತಕ ಪೂರೈಸಿದರು. ಈ ಮೂಲಕ ಟೆಸ್ಟ್ ಕ್ರಿಕೆಟ್‌ನಲ್ಲಿ 30 ಶತಕ ಬಾರಿಸಿದ ವಿಶ್ವದ 16ನೇ ಬ್ಯಾಟರ್ ಎನಿಸಿಕೊಂಡರು.

ವಿರಾಟ್ ಕೊಹ್ಲಿಯ ಈ ಭರ್ಜರಿ ಸೆಂಚುರಿ ನೆರವಿನಿಂದ ದ್ವಿತೀಯ ಇನಿಂಗ್ಸ್‌ನಲ್ಲಿ 6 ವಿಕೆಟ್ ಕಳೆದುಕೊಂಡು 487 ರನ್ ಕಲೆಹಾಕಿದ್ದ ಟೀಮ್ ಇಂಡಿಯಾ ಡಿಕ್ಲೇರ್ ಘೋಷಿಸಿತು. ಅತ್ತ ಮೊದಲ ಇನಿಂಗ್ಸ್‌ನಲ್ಲಿ 46 ರನ್‌ಗಳ ಹಿನ್ನಡೆ ಹೊಂದಿರುವ ಆಸ್ಟ್ರೇಲಿಯಾ ತಂಡವು ಗೆಲ್ಲಲು ದ್ವಿತೀಯ ಇನಿಂಗ್ಸ್‌ನಲ್ಲಿ 534 ರನ್ ಕಲೆಹಾಕಬೇಕಿದೆ.

ಟೀಮ್ ಇಂಡಿಯಾ ಶುಭಾರಂಭ:

534 ರನ್‌ಗಳ ಕಠಿಣ ಸವಾಲನ್ನು ಬೆನ್ನತ್ತಲು ಕಣಕ್ಕಿಳಿದ ಆಸ್ಟ್ರೇಲಿಯಾಗೆ ಜಸ್‌ಪ್ರೀತ್ ಬುಮ್ರಾ ಮೊದಲ ಓವರ್‌ನಲ್ಲೇ ಆಘಾತ ನೀಡಿದ್ದಾರೆ. ದ್ವಿತೀಯ ಇನಿಂಗ್ಸ್‌ನ 4ನೇ ಎಸೆತದಲ್ಲಿ ನಾಥನ್ ಮೆಕ್‌ಸ್ವೀನಿ (0) ಅನ್ನು ಎಲ್‌ಬಿಡಬ್ಲ್ಯೂ ಮಾಡಿ ಬುಮ್ರಾ ಭಾರತ ತಂಡಕ್ಕೆ ಮೊದಲ ಯಶಸ್ಸು ತಂದುಕೊಟ್ಟಿದ್ದರು. ಇದರ ಬೆನ್ನಲ್ಲೇ ಮೊಹಮ್ಮದ್ ಸಿರಾಜ್ ಪ್ಯಾಟ್ ಕಮಿನ್ಸ್ (2) ವಿಕೆಟ್ ಪಡೆದರು.

ಇನ್ನು ಮೂರನೇ ದಿನದಾಟದ ಕೊನೆಯ ಓವರ್‌ನಲ್ಲಿ ಮಾರ್ನಸ್ ಲಾಬುಶೇನ್ (3) ಕೂಡ ಬುಮ್ರಾಗೆ ವಿಕೆಟ್ ಒಪ್ಪಿಸಿದರು.

ಅದರಂತೆ ಮೂರನೇ ದಿನದಾಟದ ಅಂತ್ಯಕ್ಕೆ ಆಸ್ಟ್ರೇಲಿಯಾ ತಂಡವು 3 ವಿಕೆಟ್ ಕಳೆದುಕೊಂಡು 12 ರನ್ ಕಲೆಹಾಕಿದೆ.

ಐಪಿಎಲ್‌ನ ಎಲ್ಲಾ ದಾಖಲೆ